ಬೆಂಗಳೂರು ಸಂಪುಟ: 16 ಸಂಚಿಕೆ: 34 ಪುಟ: 06 ಗುರುವಾರ 26-12-2024

Mail:mussanje2010@gmail.com

www.mussanjenews.com

# ಮುಸ್ಸಂಜೆ

ಪ್ರಭಾವಶಾಲಿ ಕನ್ನಡ ಸಂಜೆ ದಿನ ಪತ್ರಿಕೆ

Managing Editor: N.Veerendra Babu (MBA, LLB)

Executive Editor: L P Babu

Honourary Editor: Venkatesh



ಚೊಚ್ಚಲ ಪಂದ್ಯದಲ್ಲಿ ಕೊನ್‌ಸ್ಟಾಸ್ ಅಬ್ಬರ

ಟೆಸ್ಟ್ ಕ್ರಿಕೆಟ್‌ನಲ್ಲಿ 'ದುಬಾರಿ' ದಾಖಲೆ

ನನ್ನ ಗುರಿಯಲ್ಲ ಮನು ಬಾಕರ್ ಪುಟ 6

## ಸಮಾವೇಶದಲ್ಲಿ ದೇಶದ ತಪ್ಪು ನಕಾಶೆ ಪ್ರದರ್ಶನ; ಬಿಜೆಪಿ ಆರೋಪದಿಂದ ಕೈ ಪಡೆ ಹೈರಾಣ!

# ಪಿಒಕೆ ಒಳಗೊಳ್ಳದ ಬ್ಯಾನರ್

## ಮುಖ್ಯಮಂತ್ರಿ ಅವರೇ, ಕೂಡಲೇ ಈ ವಿವಾದಿತ ಬ್ಯಾನರ್‌ಗಳನ್ನು ತೆರವುಗೊಳಿಸಿ: ಬಿವೈವಿ




**ಬೆಂಗಳೂರು:** ಮಹಾತ್ಮಾ ಗಾಂಧೀಜಿ ಅಧ್ಯಕ್ಷತೆಯಲ್ಲಿ 1924ರಲ್ಲಿ ಬೆಳಗಾವಿಯಲ್ಲಿ ನಡೆದ ಕಾಂಗ್ರೆಸ್ ಅಧಿವೇಶನದ ಶತಮಾನೋತ್ಸವದ ಅಂಗವಾಗಿ ಹಮ್ಮಿಕೊಳ್ಳಲಾಗಿರುವ 'ಗಾಂಧಿ ಭಾರತ' ಕಾರ್ಯಕ್ರಮಕ್ಕೆ ಕ್ಷಣಗಣನೆ ಆರಂಭವಾಗಿದ್ದು, ಕಾರ್ಯಕ್ರಮದ ಅಂಗವಾಗಿ ನಗರದಲ್ಲಿ ಅಳವಡಿಸಲಾಗಿರುವ ಫ್ಲೆಕ್ಸ್ ಮತ್ತು ಬ್ಯಾನರ್‌ಗಳಲ್ಲಿ, ಭಾರತದ ನಕ್ಷೆಯನ್ನು ತಪ್ಪಾಗಿ ಚಿತ್ರಿಸಲಾಗಿದೆ ಎಂದು ಪ್ರತಿಪಕ್ಷ ಬಿಜೆಪಿ ಆರೋಪ ಮಾಡಿದೆ.

ತಪ್ಪು ಭಾರತದ ನಕ್ಷೆಯ ಪ್ರಕಟಣೆಗೆ ಆಕ್ಷೇಪ ವ್ಯಕ್ತಪಡಿಸಿ ಟ್ವೀಟ್ ಮೂಲಕ ಕಾಂಗ್ರೆಸ್‌ನ್ನು ತರಾಟೆಗೆ ತೆಗೆದುಕೊಂಡಿದ್ದ ಪ್ರತಿಪಕ್ಷ ಬಿಜೆಪಿ, ಇದೀಗ ಈ ವಿಚಾರವನ್ನು ಮತ್ತೊಂದು ಹಂತಕ್ಕೆ ಕೊಂಡೊಯ್ಯುವ ನಿರ್ಧಾರ ಮಾಡಿದೆ. ಅದರಂತೆ ನಾಳೆ (ಡಿ.27-ಶುಕ್ರವಾರ) ಬೆಂಗಳೂರಿನ ವಿಧಾನಸೌಧದ ಗಾಂಧಿ ಪ್ರತಿಮೆ ಎದುರು ಬಿಜೆಪಿ ಪ್ರತಿಭಟನೆ ಹಮ್ಮಿಕೊಂಡಿದೆ.

ಈ ಕುರಿತು ತನ್ನ ಅಧಿಕೃತ ಟ್ವಿಟ್ಟರ್ ಅಕೌಂಟ್‌ನಲ್ಲಿ ಟ್ವೀಟ್ ಮಾಡಿರುವ ರಾಜ್ಯ ಬಿಜೆಪಿ ಘಟಕ, ಕಾಂಗ್ರೆಸ್ ಪ್ರದರ್ಶಿಸಿದ ಭಾರತದ ನಕ್ಷೆಯಲ್ಲಿ ಪಾಕ್ ಆಕ್ರಮಿತ ಕಾಶ್ಮೀರ (ಪಿಒಕೆ) ಕ್ಕೆ ಸ್ಥಾನವೇ ಇಲ್ಲ ಎಂದು ತೀವ್ರ ಅಸಮಾಧಾನ ವ್ಯಕ್ತಪಡಿಸಿದೆ.

"ಕರ್ನಾಟಕದ ಕಾಂಗ್ರೆಸ್ ಪಾಕ್ ಆಕ್ರಮಿತ ಕಾಶ್ಮೀರವನ್ನು ಪಾಕಿಸ್ತಾನಕ್ಕೆ ಧಾರೆ ಎರೆದು ಕೊಟ್ಟಿದೆ 'ಗಾಂಧಿ ಭಾರತ' ಹೆಸರಿನಲ್ಲಿ ಭಾರತದ ನಕಾಶೆಯನ್ನು ಕಾಂಗ್ರೆಸ್ಸಿಗರು ತಿರುಚಿರುವುದು ನಿಜಕ್ಕೂ ದೇಶದ್ರೋಹ. ವೈಯುಕ್ತಿಕ ಸ್ವಾರ್ಥ ಸಾಧನೆಗಾಗಿ, ಓಲೈಕೆ ರಾಜಕಾರಣಕ್ಕಾಗಿ ಕಾಂಗ್ರೆಸ್ ಎಂತಹ ಹೀನ ಕೆಲಸಕ್ಕಾದರೂ "ಸಿದ್ದ" ಎಂಬುದಕ್ಕೆ ಬೆಳಗಾವಿಯಲ್ಲಿ ಹಾಕಿಸಿರುವ ಬ್ಯಾನರ್‌ಗಳೇ ಸಾಕ್ಷಿ.." ಎಂದು ಬಿಜೆಪಿ ತೀವ್ರವಾಗಿ ತರಾಟೆಗೆ ತೆಗೆದುಕೊಂಡಿದೆ.

"ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೇ, ಕೂಡಲೇ ಈ ವಿವಾದಿತ ಬ್ಯಾನರ್‌ಗಳನ್ನು ತೆರವುಗೊಳಿಸಿ, ಭಾರತದ ನಕಾಶೆಯನ್ನು ತಿರುಚಿದ ದೇಶದ್ರೋಹಿಗಳ ವಿರುದ್ಧ ಕ್ರಮ ಕೈಗೊಳ್ಳಿ.." ಎಂದು ರಾಜ್ಯ ಬಿಜೆಪಿ ಘಟಕ ಒತ್ತಾಯಿಸಿದೆ.

'ಗಾಂಧಿ ಭಾರತ' ಕಾರ್ಯಕ್ರಮದ ಅಂಗವಾಗಿ ಬೆಳಗಾವಿ ನಗರದಾದ್ಯಂತ ಕಾಂಗ್ರೆಸ್ ಪಕ್ಷದ ವತಿಯಿಂದ ಫ್ಲೆಕ್ಸ್ ಮತ್ತು ಬ್ಯಾನರ್‌ಗಳನ್ನು ಅಳವಡಿಸಲಾಗಿದೆ. ಈ ಬ್ಯಾನರ್‌ಗಳಲ್ಲಿ ಮೇಲಿನ ಭಾಗದಲ್ಲಿ ಮಹಾತ್ಮಾ ಗಾಂಧಿ ಮತ್ತು ಭಾರತದ ನಕ್ಷೆ ಇದ್ದರೆ, ಕೆಳಗಡೆ ಕಾಂಗ್ರೆಸ್ ಅಧಿನಾಯಕಿ ಸೋನಿಯಾ ಗಾಂಧಿ, ರಾಹುಲ್ ಗಾಂಧಿ, ಮಲ್ಲಿಕಾರ್ಜುನ ಖರ್ಗೆ ಸೇರಿದಂತೆ ಹಲವು ಕಾಂಗ್ರೆಸ್ ಗಣ್ಯರ ಭಾವಚಿತ್ರಗಳಿವೆ.

ಆದರೆ ಈ ಫ್ಲೆಕ್ಸ್ ಮತ್ತು ಬ್ಯಾನರ್‌ಗಳಲ್ಲಿ ತೋರಿಸಲಾಗಿರುವ ಭಾರತದ ನಕ್ಷೆಯಲ್ಲಿ ಪಾಕ್ ಆಕ್ರಮಿತ ಕಾಶ್ಮೀರವನ್ನು ತೋರಿಸಲಾಗಿಲ್ಲ. ಈ ಕುರಿತು ತೀವ್ರ ಆಕ್ಷೇಪ ವ್ಯಕ್ತಪಡಿಸಿರುವ ರಾಜ್ಯ ಬಿಜೆಪಿ ಘಟಕ, ಕಾಶ್ಮೀರದ ಒಂದು ಭಾಗವನ್ನು ಅಕ್ರಮವಾಗಿ ವಶದಲ್ಲಿರಿಸಿಕೊಂಡಿರುವ ಪಾಕಿಸ್ತಾನದ ನಡೆಯನ್ನು ಕಾಂಗ್ರೆಸ್ ಪುಟ 2

## ಗಾಂಧಿ ಪ್ರತಿಮೆ ಅನಾವರಣ



**ಬೆಳಗಾವಿ:** ಮಹಾತ್ಮ ಗಾಂಧೀಜಿಯವರ ಅಧ್ಯಕ್ಷತೆಯಲ್ಲಿ 1924ರಲ್ಲಿ ಜರುಗಿದ ಕಾಂಗ್ರೆಸ್ ಅಧಿವೇಶನದ ಶತಮಾನೋತ್ಸವದ ಅಂಗವಾಗಿ ನಗರದ ಟಿಳಕವಾಡಿಯಲ್ಲಿನ ವೀರಸೌಧದಲ್ಲಿ ಗುರುವಾರ ಮಹಾತ್ಮಾ ಗಾಂಧೀಜಿಯವರ ನೂತನ ಪ್ರತಿಮೆಯನ್ನು ಮುಖ್ಯಮಂತ್ರಿ ಸಿದ್ಧರಾಮಯ್ಯ ಅನಾವರಣಗೊಳಿಸಿದರು. ಜೊತೆಗೆ, ನಗರದ ಸರ್ದಾರ್ ಹೈಸ್ಕೂಲ್ ಮೈದಾನದಲ್ಲಿ ವಿಶೇಷ ಸರಸ್ ಮೇಳ ಮತ್ತು ಖಾದಿ ಉತ್ಸವ, ವಸ್ತುಪ್ರದರ್ಶನ ಮತ್ತು ಮಾರಾಟ ಮೇಳಕ್ಕೆ ಸಿಎಂ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಚಾಲನೆ ನೀಡಿದರು.

ತದನಂತರ ವೀರಸೌಧದ ಆವರಣದಲ್ಲಿನ ಗಾಂಧೀಜಿ ಸ್ಮಾರಕ ಭವನದಲ್ಲಿನ ನವೀಕೃತ ಫೋಟೋ ಗ್ಯಾಲರಿಯನ್ನು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಉದ್ಘಾಟಿಸಿದರು. ವೀರಸೌಧದಲ್ಲಿ ಹಬ್ಬದ ವಾತಾವರಣ ನಿರ್ಮಾಣವಾಗಿದೆ. ಇದೇ ವೇಳೆ ವೀರಸೌಧ ಆವರಣದಲ್ಲಿ ಡಿ.ಕೆ.ಶಿವಕುಮಾರ್ ಅವರು ಸಸಿ ನೆಟ್ಟು ನೀರೆರೆದರು. ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೂ ಇದೇ ವೇಳೆ ಮುಖ್ಯಮಂತ್ರಿ ಚಾಲನೆ ನೀಡಿದರು.

ವಿಶೇಷ ಸರಸ್ ಮೇಳ, ಖಾದಿ ಉತ್ಸವ: ನಗರದ ಟಿಳಕವಾಡಿಯಲ್ಲಿನ ವೀರಸೌಧದ ಕಾರ್ಯಕ್ರಮದಲ್ಲಿ ಭಾಗಿಯಾಗಿ ಬಳಿಕ ನೇರವಾಗಿ ಸರ್ದಾರ್ ಹೈಸ್ಕೂಲ್ ಮೈದಾನಕ್ಕೆ ಆಗಮಿಸಿದ ಮುಖ್ಯಮಂತ್ರಿ ಹಾಗೂ ಉಪಮುಖ್ಯಮಂತ್ರಿಗಳಿಗೆ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಪುಟ 2



ವೀರ ಬಾಲ ದಿವಸ್ ಅಂಗವಾಗಿ ಬಿಜೆಪಿ ರಾಜ್ಯ ಕಾರ್ಯಾಲಯ "ಜಗನ್ನಾಥ ಭವನ"ದಲ್ಲಿ ಪುಷ್ಪಾರ್ಚನೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಕಾರ್ಯಕ್ರಮದಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ. ವಿಜಯೇಂದ್ರ, ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ, ರಾಜ್ಯ ಪ್ರಧಾನ ಕಾರ್ಯದರ್ಶಿ ಪಿ. ರಾಜೀವ್, ರಾಜ್ಯ ಕಾರ್ಯದರ್ಶಿಗಳಾದ ವಿನಯ್ ಬಿದರೆ, ಸಿ. ಮುನಿರಾಜು, ಶಾಸಕ ಸಿ.ಕೆ. ರಾಮಮೂರ್ತಿ, ಎಸ್. ಹರೀಶ್, ಸಪ್ತಗಿರಿ ಗೌಡ ಮತ್ತು ಪಕ್ಷದ ಮುಖಂಡರು, ಕಾರ್ಯಕರ್ತರು ಉಪಸ್ಥಿತರಿದ್ದರು.

## ಶೀಘ್ರದಲ್ಲೇ ಹಾಲಿನ ದರ ಏರಿಕೆ

ಬೆಂಗಳೂರು: ರಾಜ್ಯದ ಜನತೆಗೆ ಶೀಘ್ರದಲ್ಲೇ ಹಾಲಿನ ದರ ಏರಿಕೆಯ ಶಾಕ್ ತಟ್ಟಲಿದೆ. ಹೌದು, ಕೆಎಂಎಫ್ ಅಧ್ಯಕ್ಷ ಭೀಮಾನಾಯ್ಕ್ ಹಾಲಿನ ದರ ಏರಿಕೆಯ ಸುಳಿವು ನೀಡಿದ್ದಾರೆ. ಈ ಕುರಿತು ಮಾತನಾಡಿರುವ ಭೀಮಾನಾಯ್ಕ್ ನಂದಿನಿ ಹಾಲಿನ ದರವನ್ನು 5 ರೂ ಹೆಚ್ಚಳ ಮಾಡಲು ಪ್ರಸ್ತಾವನೆ ಬಂದಿದೆ. ಸಿಎಂ ಸಿದ್ದರಾಮಯ್ಯ ಒಪ್ಪಿಗೆ ನೀಡಿದ ಬಳಿಕ ಹಾಲಿನ ದರ ಹೆಚ್ಚಳ ಮಾಡಲಾಗುವುದು ಎಂದು ಹೇಳಿದ್ದಾರೆ. ಇನ್ನು ಹೆಚ್ಚುವರಿಯಾಗಿ ನೀಡಲಾಗುತ್ತಿದ್ದ 50 ಎಂಎಲ್ ಹಾಲು ವಾಪಸ್ ಪಡೆಯಲಾಗುತ್ತದೆ. ಇದರ ಜೊತೆಗೆ 2 ರೂ ಕಡಿತ ಮಾಡಲಾಗಿದೆ. ಬೆಂಗಳೂರಿನಲ್ಲಿ ಇಡ್ಲಿ ದೋಸೆ ಹಿಟ್ಟು ನೀಡುತ್ತೇವೆ ಎಂದು ಭೀಮಾ ನಾಯ್ಕ್ ತಿಳಿಸಿದರು. ಪುಟ 2

## ಯೋಧರಿಗೆ ಅಂತಿಮ ಗೌರವ




ಬೆಳಗಾವಿ: ಜಮ್ಮು ಕಾಶ್ಮೀರದ ಪೂಂಚ್‌ನಲ್ಲಿ ಸೇನಾ ವಾಹನ ಕಂದಕಕ್ಕೆ ಉರುಳಿ ಅಪಘಾತಕ್ಕೀಡಾದ ಘಟನೆಯಲ್ಲಿ ಮೃತಪಟ್ಟ ಯೋಧರ ಪಾರ್ಥಿವ ಶರೀರಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅಂತಿಮ ಗೌರವ ಸಲ್ಲಿಸಿದರು.

ಬೆಳಗಾವಿ ತಾಲೂಕಿನ ಸಾಂಬ್ರಾ ಪಂತನಗರದ ಸುಬೇದಾರ್ ದಯಾನಂದ ತಿರಕಣ್ಣವರ (45) ಹಾಗೂ ಬಾಗಲಕೋಟೆ ಜಿಲ್ಲೆಯ ಮಹಾಲಿಂಗಪುರ ಪಟ್ಟಣದ ಕೆಂಗೇರಿಮಡ್ಡಿಯ ಮಹೇಶ ನಾಗಪ್ಪ ಮರಿಗೊಂಡ (25) ಅವರಿಗೆ ಬೆಳಗಾವಿಯ ಮರಾಠಾ ಲಘು ಪದಾತಿ ದಳದ ಯುದ್ಧ ಸ್ಮಾರಕದಲ್ಲಿ ಸಿಎಂ ಗೌರವ ನಮನ ಅರ್ಪಿಸಿದರು.

ಬಳಿಕ ಮಾಧ್ಯಮದವರ ಜೊತೆ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, "ಯೋಧರ ಬದುಕು, ಜೀವನ, ವೃತ್ತಿ ಅತ್ಯಂತ ಉನ್ನತವಾದದು. ನಮ್ಮ ರಾಜ್ಯದ ಯೋಧರು ಅಪಘಾತದಲ್ಲಿ ಮೃತರಾಗಿರುವುದು ಅತ್ಯಂತ ನೋವಿನ ಸಂಗತಿ. ನಾಲ್ವರೂ ಯೋಧರ ಆತ್ಮಕ್ಕೆ ಶಾಂತಿ ಕೋರುತ್ತೇನೆ. ಅವರ ಕುಟುಂಬದವರ ನೋವಿನಲ್ಲಿ ನಾನು ಭಾಗಿಯಾಗುತ್ತೇನೆ" ಎಂದರು.

"ದಯಾನಂದ ತಿರುಕಣ್ಣನವರ, ಚಿಕ್ಕೋಡಿ ಧನರಾಜ್ ಸುಭಾಷ್, ಬಾಗಲಕೋಟೆಯ ಮಹೇಶ್ ನಾಗಪ್ಪ, ಕುಂದಾಪುರದ ಅನೂಪ್ ಪೂಜಾರಿ ಇವರ ಆತ್ಮಕ್ಕೆ ಚಿರಶಾಂತಿ ದೊರಕಲಿ ಅಂತ ಪ್ರಾರ್ಥನೆ ಮಾಡುತ್ತೇನೆ. ಸರ್ಕಾರದಿಂದ ಕುಟುಂಬ ವರ್ಗಕ್ಕೆ ಪರಿಹಾರ ಪುಟ 2

## ನಕಲಿ ಕಾಂಗ್ರೆಸ್ ನೀತಿ ವಿರುದ್ಧ ನಾಳೆ ಧರಣಿ

ದೇಶ, ರಾಜ್ಯದಲ್ಲಿರುವುದು ನಕಲಿ ಕಾಂಗ್ರೆಸ್ ಪಕ್ಷ: ಬಿ.ವೈ.ವಿಜಯೇಂದ್ರ ಅಭಿಪ್ರಾಯ



ಬೆಂಗಳೂರು: ದೇಶ, ರಾಜ್ಯದಲ್ಲಿರುವುದು ಅಸಲಿ ಕಾಂಗ್ರೆಸ್ ಪಕ್ಷವಲ್ಲ; ಇದು ನಕಲಿ ಕಾಂಗ್ರೆಸ್ ಪಕ್ಷ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ. ವಿಜಯೇಂದ್ರ ಅವರು ಟೀಕಿಸಿದ್ದಾರೆ.

ಬಿಜೆಪಿ ರಾಜ್ಯ ಕಾರ್ಯಾಲಯ "ಜಗನ್ನಾಥ ಭವನ"ದಲ್ಲಿ ಇಂದು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಮಹಾತ್ಮ ಗಾಂಧೀಜಿ ಮತ್ತು ಡಾ. ಅಂಬೇಡ್ಕರ್ ಅವರ ತತ್ವಗಳನ್ನು ಗಾಳಿಗೆ ತೂರಿದ ಪಕ್ಷ ಕಾಂಗ್ರೆಸ್ ಎಂದ ಅವರು, ಗಾಂಧೀಜಿ ಮತ್ತು ಅಂಬೇಡ್ಕರರ ಹೆಸರು ಹೇಳುವ ನೈತಿಕತೆ, ಯೋಗ್ಯತೆ ಕಾಂಗ್ರೆಸ್ಸಿಗರಿಗೆ ಇಲ್ಲ ಎಂದು ಆಕ್ಷೇಪಿಸಿದರು.

ಕಾಂಗ್ರೆಸ್ ಪಕ್ಷದವರಿಗೆ ಈ ದೇಶದ ಬಗ್ಗೆ, ಅಖಂಡತೆ, ಸಮಗ್ರತೆ ಬಗ್ಗೆ ಬದ್ಧತೆ ಇಲ್ಲ. ದೇಶ ಒಡೆಯುವ ಕೆಲಸವನ್ನು ಕಾಂಗ್ರೆಸ್ಸಿಗರೇ ಮಾಡಿದ್ದಾರೆ ಎಂದು ಹೇಳಿದರು. ಬಾಬಾ ಸಾಹೇಬರಿಗೆ ಸಂಬಂಧಿಸಿದ 5 ಪ್ರಮುಖ ಪುಟ 2

## ನಕಲಿ ಗಾಂಧಿಗಳ ಅಧಿವೇಶನ

ಬೆಂಗಳೂರು: "ಈಗಿನ ನಕಲಿ ಕಾಂಗ್ರೆಸ್ ಪಕ್ಷ, ನಕಲಿ ಗಾಂಧಿ ಕುಟುಂಬದಿಂದ, ನಕಲಿ ಗಾಂಧಿ ಕುಟುಂಬಕ್ಕಾಗಿ, ನಕಲಿ ಗಾಂಧಿ ಕುಟುಂಬಕ್ಕೋಸ್ಕರ " ಎಂದು ಪ್ರತಿಪಕ್ಷದ ನಾಯಕ ಆರ್.ಅಶೋಕ್ ಟೀಕಿಸಿದ್ದಾರೆ.



ಈ ಕುರಿತು ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವ ಅವರು, "ಸ್ವಾತಂತ್ರ್ಯ ದೊರಕಿತು. ಕಾಂಗ್ರೆಸ್ ಪಕ್ಷದ ಅವಶ್ಯಕತೆ ಇಲ್ಲ. ಅದನ್ನು ವಿಸರ್ಜಿಸಿ ಎಂದು ಹೇಳಿದ ಮಹಾತ್ಮ ಗಾಂಧಿಯವರ ಮಾತನ್ನು ಧಿಕ್ಕರಿಸಿದ ನಕಲಿ ಗಾಂಧಿಗಳು, ಇವತ್ತು ಯಾವ ನೈತಿಕತೆಯಿಂದ ಬೆಳಗಾವಿ ಅಧಿವೇಶನದ ಶತಮಾನೋತ್ಸವ ಆಚರಿಸುತ್ತಿದ್ದಾರೆ?" ಎಂದು ಪ್ರಶ್ನಿಸಿದ್ದಾರೆ.

"ಸ್ವಾತಂತ್ರ ಪೂರ್ವದ ಕಾಂಗ್ರೆಸ್ ಅಂದರೆ ಅದು ರಾಜಕೀಯ ಪಕ್ಷವಾಗಿರಲಿಲ್ಲ. ದೇಶವನ್ನ ದಾಸ್ಯದಿಂದ ಮುಕ್ತಿಗೊಳಿಸಲು ಹೋರಾಡುತ್ತಿದ್ದ ದೇಶಭಕ್ತರ ಒಕ್ಕೂರಲಿನ ವೇದಿಕೆಯಾಗಿತ್ತು. ಆದರೆ, ಸ್ವತಂತ್ರ ಬಂದ ನಂತರ ಮಹಾತ್ಮ ಗಾಂಧೀಜಿ ಅವರ ಮಾತನ್ನು ಧಿಕ್ಕರಿಸಿ, ಕೇವಲ ಅಧಿಕಾರಕ್ಕಾಗಿ, ಕಾಂಗ್ರೆಸ್ ಪಕ್ಷವನ್ನು ಒಂದು ಕುಟುಂಬದ ಆಸ್ತಿ ಮಾಡಿಕೊಂಡ ನಕಲಿ ಗಾಂಧಿಗಳು ಮತ್ತು ಅವರ ಅನುಯಾಯಿಗಳು ಇವತ್ತು 'ಗಾಂಧಿ ಭಾರತ' ಹೆಸರಿನಲ್ಲಿ ಐತಿಹಾಸಿಕ ಪುಟ 2

## ಸಿಲಿಂಡರ್ ಸ್ಫೋಟ: ಮೃತಪಟ್ಟವರಿಗೆ 5 ಲಕ್ಷ ಪರಿಹಾರ: ಸಿಎಂ

ಉಣಕಲ್‌ನ ಅಚ್ಚವ್ವ ಕಾಲೋನಿಯಲ್ಲಿ ನಡೆದಿದ್ದ ಗ್ಯಾಸ್ ಸಿಲಿಂಡರ್ ಸ್ಫೋಟ ಪ್ರಕರಣದಲ್ಲಿ ಗಾಯಗೊಂಡಿದ್ದ ಒಂಬತ್ತು ಅಯ್ಯಪ್ಪ ಮಾಲಾಧಾರಿಗಳ ಪೈಕಿ ಇಬ್ಬರು ಚಿಕಿತ್ಸೆ ಫಲಿಸದೇ ಇಂದು ಬೆಳಗಿನ ಜಾವ ಸಾವಿಗೀಡಾಗಿದ್ದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮೃತರ ಕುಟುಂಬಕ್ಕೆ ತಲಾ 5 ಲಕ್ಷ ರೂಪಾಯಿ ಪರಿಹಾರ ಘೋಷಿಸಿದ್ದಾರೆ.

ಮೃತ ಅಯ್ಯಪ್ಪ ಮಾಲಾಧಾರಿಗಳನ್ನ 58 ವರ್ಷದ ಅಜ್ಜಾಸ್ವಾಮಿ ಉರ್ಫ್ ನಿಂಗಪ್ಪ ಬೇಪಾರಿ ಹಾಗೂ 20 ವರ್ಷದ ಸಂಜಯ ಸವದತ್ತಿ ಎಂದು ಗುರುತಿಸಲಾಗಿದೆ. ಉಳಿದ ಏಳು ಮಂದಿಗೆ ಚಿಕಿತ್ಸೆ ಮುಂದುವರೆದಿದ್ದು ಬೆಂಗಳೂರು ಮತ್ತಿತರ ಕಡೆಗಳಿಂದ ಉನ್ನತ ಚಿಕಿತ್ಸೆಗಾಗಿ ತಜ್ಞ ವೈದ್ಯರನ್ನು ಕರೆಸಲಾಗಿದೆ.

## ವಿರಾಟ್ ಕೊಹ್ಲಿಗೆ ದಂಡ



ಮೆಲ್ಬೋರ್ನ್: ಕಿರಿಕ್ ವಿರಾಟ್ ಕೊಹ್ಲಿಗೆ ಐಸಿಸಿ ದಂಡ ವಿಧಿಸುವ ಸಾಧ್ಯತೆಗಳಿವೆ. ಆಸ್ಟ್ರೆಲಿಯಾ ವಿರುದ್ಧದ ನಾಲ್ಕನೆ ಟೆಸ್ಟ್‌ನಲ್ಲಿ ಕಾಂಗರೂ ಬ್ಯಾಟರ್ ಸ್ಯಾನ್ ಕೊನ್‌ಸ್ಟಾಸ್ ಅವರೊಂದಿಗೆ ಕಿರಿಕ್ ಮಾಡಿಕೊಂಡಿರುವ ಘಟನೆಯನ್ನು ಐಸಿಸಿ ಗಂಭೀರವಾಗಿ ಪರಿಗಣಿಸಿರುವುದರಿಂದ ದಂಡ ವಿಧಿಸಿದೆ. ಈ ಪಂದ್ಯದ 10ನೇ ಓವರ್ ಮುಕ್ತಾಯದ ವೇಳೆ ವಿರಾಟ್ ಕೊಹ್ಲಿ ಆಸ್ಟ್ರೇಲಿಯಾ ಬ್ಯಾಟರ್ ಸ್ಯಾಮ್ ಕೊನ್‌ಸ್ಟಾಸ್ ಅವರನ್ನು ಭುಜಕ್ಕೆ ಭುಜ ನೀಡಿ ಕೆಣಕಿದ್ದರು. ಮೇಲ್ನೋಟಕ್ಕೆ ಕೊಹ್ಲಿ ಉದ್ದೇಶ ಪೂರ್ವಕವಾಗಿಯೇ ಆಸೀಸ್ ಆಟಗಾರನೊಂದಿಗೆ ಪುಟ 2

## ಶಾಸಕ ಮುನಿರತ್ನರಿಂದ ದೂರು

**ಬೆಂಗಳೂರು:** ರಾಜರಾಜೇಶ್ವರಿ ನಗರ ಎಂಎಲ್‌ಎ ಮುನಿರತ್ನ ಮೇಲೆ ಎಸೆತ ಪ್ರಕರಣ ಸದ್ಯ ಈದೀಗ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ. ಎಂಎಲ್‌ಎ ಮುನಿರತ್ನ ದೂರು ನೀಡಿದ್ದಾರೆ. ದೂರಿನ ಆಧಾರದಲ್ಲಿ ಠಾಣಾಧಿಕಾರಿಗಳು ಎಫ್‌ಐಆರ್ ದಾಖಲಾಗಿದೆ.

ಎಫ್‌ಐಆರ್‌ನಲ್ಲಿ 100ರಿಂದ 150ಜನರ ಮೇಲೆ ದೂರು ದಾಖಲಾಗಿದೆ. ಇನ್ನೂ ಎಫ್‌ಐಆರ್‌ನ ಸಾರಾಂಶದಲ್ಲಿ ಸಾಕಷ್ಟು ಆರೋಪಗಳನ್ನು ಮುನಿರತ್ನ ಮಾಡಿದ್ದಾರೆ. ಪ್ರಮುಖವಾಗಿ ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದ ಮಾಜಿ ಸಂಸದ ಡಿಕೆ ಸುರೇಶ್ ಮೇಲೆ ಹಲವು ಆರೋಪ ಮಾಡಿದ್ದಾರೆ.

ಆರ್ ಆರ್ ನಗರ ಕ್ಷೇತ್ರದ ಕಾಂಗ್ರೆಸ್ ಪರಾಜಿತಾ ಅಭ್ಯರ್ಥಿ ಕುಸುಮಾರವರ ಮೇಲೂ ಕೂಡ ಆರೋಪವನ್ನು ಮಾಡಿದ್ದಾರೆ. ನನ್ನ ಮೇಲೆ ಕೊಲೆ ಸಂಚು ನಡೆಸಲಾಗಿದೆ. ಹಿಂದೆ ಪುಟ 2

# ಆಟೋ ಬೆಲೆ ಏರಿಸಿ ಗ್ರಾಹಕರಿಗೆ ಹೊರೆ ಮಾಡಬೇಡಿ: ಆಗ್ರಹ



**ಬೆಂಗಳೂರು:** ರಾಜ್ಯದಲ್ಲಿನ ಬ್ಯಾಟರಿ ಆಧಾರಿತ ಆಟೋರಿಕ್ಷಾಗಳಿಗೆ ತಮಿಳುನಾಡು ಹಾಗೂ ದೆಹಲಿ ಸರ್ಕಾರಗಳ ಮಾದರಿಯಲ್ಲಿ ಕೂಡಲೇ ಉಚಿತ ಪರವಾನಗಿಗಳನ್ನು ನೀಡಿ, ನಿಯಮಾವಳಿಗಳನ್ನು ಅಳವಡಿಸಿದ್ದಲ್ಲಿ ಅನವಶ್ಯಕವಾಗಿ ಆಟೋ ಮೀಟರ್ ಬೆಲೆಗಳನ್ನು ಏರಿಸಿ ಗ್ರಾಹಕರಿಗೆ ಅನವಶ್ಯಕವಾಗಿ ಹೊರೆ ಮಾಡುವ ಅವಶ್ಯಕತೆಯೇ ಇರುವುದಿಲ್ಲವೆಂದು ಆಮ್ ಆದ್ಮಿ ಪಕ್ಷದ ರಾಜ್ಯಾಧ್ಯಕ್ಷ ಡಾ. ಮುಖ್ಯಮಂತ್ರಿ ಚಂದ್ರು ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಬರೆದ ಪತ್ರದಲ್ಲಿ ತಿಳಿಸಿದ್ದಾರೆ.

ಕರ್ನಾಟಕ ರಾಜ್ಯದಲ್ಲಿನ ಹಲವು ನಗರಗಳಲ್ಲಿ ನಗರಗಳಲ್ಲಿ ಮೀಟರ್ ಆಧಾರದಲ್ಲಿ ಓಡಾಡುತ್ತಿರುವ ಬ್ಯಾಟರಿ ಚಾಲಿತ ಆಟೋರಿಕ್ಷಾಗಳು ರಾಜ್ಯದ ಸಾರಿಗೆ ಇಲಾಖೆಯ ಯಾವುದೇ ಕಾನೂನು ಕಟ್ಟಳೆಗಳಿಗೆ ಒಳಪಡದೆ ಇರುವ ಕಾರಣದಿಂದಾಗಿ ಮೆಥನಲ್ ಮತ್ತು ಇಥೆನಾಲ್ ಇಂಧನ ಬಳಸಿ ಸಂಚರಿಸುತ್ತಿರುವ ಪಾರಂಪರಿಕ ಆಟೋರಿಕ್ಷಾಗಳ ಚಾಲಕರುಗಳ ಆದಾಯದಲ್ಲಿ ವ್ಯತ್ಯಯ ಉಂಟಾಗಿ ಆರ್ಥಿಕವಾಗಿ ಸಾಕಷ್ಟು ಸಂಕಷ್ಟವನ್ನು ಅನುಭವಿಸುತ್ತಿದ್ದಾರೆ.

ಯಾವುದೇ ಸಾರಿಗೆ ನಿಯಮಾವಳಿಗಳ ಅಂಕುಶವಿಲ್ಲದ ಬ್ಯಾಟರಿ ಚಾಲಿತ ಆಟೋ ರಿಕ್ಷಾಗಳು ಸಾವಿರಾರು ಸಂಖ್ಯೆಯಲ್ಲಿ ರಾಜ್ಯದ ಬೆಂಗಳೂರು ಸೇರಿದಂತೆ ಹಲವು ನಗರಗಳಲ್ಲಿ ರಸ್ತೆಗಳಿದಿರುವ ಪರಿಣಾಮ ಇಂದು ಸರ್ಕಾರದ ಸಾರಿಗೆ ನಿಯಮಾವಳಿಗಳ ಪ್ರಕಾರ ಪರವಾನಗಿ ತೆಗೆದುಕೊಂಡು ಪ್ರಾಮಾಣಿಕವಾಗಿ ತೆರಿಗೆ ಕಟ್ಟಿಕೊಂಡು ಬರುತ್ತಿರುವ ಲಕ್ಷಾಂತರ ಬಡ ಆಟೋರಿಕ್ಷಾ ಚಾಲಕರುಗಳು ತಮ್ಮ ಸಂಸಾರವನ್ನು ನಿರ್ವಹಿಸಲೂ ಸಾಧ್ಯವಾಗದ ಸಂಕಷ್ಟ ಪರಿಸ್ಥಿತಿಗೆ ದೂಡಲ್ಪಟ್ಟಿದ್ದಾರೆ ಎಂದು ತಮ್ಮ ಪತ್ರದಲ್ಲಿ ಮುಖ್ಯಮಂತ್ರಿ ಚಂದ್ರು ಕಳವಳವನ್ನು ವ್ಯಕ್ತಪಡಿಸಿದ್ದಾರೆ.

ಪಕ್ಕದ ತಮಿಳುನಾಡು ಹಾಗೂ ದೆಹಲಿ ರಾಜ್ಯಗಳಲ್ಲಿ ಬ್ಯಾಟರಿ ಆಧಾರಿತ ಆಟೋರಿಕ್ಷಾಗಳಿಗೆ ಸೂಕ್ತ ನಿಯಮಾವಳಿಗಳನ್ನು ರೂಪಿಸಿ ಎರಡೂ ವರ್ಗಗಳ ಆಟೋರಿಕ್ಷ ಚಾಲಕರಗಳು ಸುಭಿಕ್ಷವಾಗಿ ಜೀವನವನ್ನು ನಡೆಸಿಕೊಂಡು ಹೋಗುವ ವಾತಾವರಣವನ್ನು ಕಲ್ಪಿಸಿ ಕೊಟ್ಟಿದ್ದಾರೆ. ರಾಜ್ಯದಲ್ಲಿಯೂ ಕೂಡಲೇ ಇದೇ ರೀತಿಯ ನಿಯಮಾವಳಿಗಳನ್ನು ಅಳವಡಿಸುವ ಮೂಲಕ ಲಕ್ಷಾಂತರ ಆಟೋ ಚಾಲಕರುಗಳು ಆರ್ಥಿಕ ಸಂಕಷ್ಟದಿಂದ ಹೊರಬರುವಂತಹ ವಾತಾವರಣ ಕಲ್ಪಿಸಿ ಕೊಡಬೇಕೆಂದು ಮುಖ್ಯಮಂತ್ರಿ ಚಂದ್ರು ತಮ್ಮ ಪತ್ರದಲ್ಲಿ ಆಗ್ರಹಿಸಿದ್ದಾರೆ.

ಈ ಬಗ್ಗೆ ಪಕ್ಷದ ಆಟೋ ಘಟಕದ ರಾಜ್ಯಾಧ್ಯಕ್ಷ ಅಯುಬ್ ಖಾನ್ ಇನ್ನಿತರ ಆಟೋ ಸಂಘಟನೆಗಳ ನಿಯೋಗದೊಂದಿಗೆ ಮುಖ್ಯಮಂತ್ರಿಗಳನ್ನು ಭೇಟಿ ಮಾಡಿ ಈ ಮನವಿ ಪತ್ರವನ್ನು ಸಲ್ಲಿಸಿದ್ದಾರೆ.

## ಕಟೌಟ್‌ಗಳಲ್ಲಿ ಗಾಂಧೀಜಿಯೇ ಇಲ್ಲ



ಬೆಂಗಳೂರು: ಇವತ್ತು ಬೆಳಗಾವಿಯಲ್ಲಿ ಗಾಂಧೀಜಿ ಶತಮಾನೋತ್ಸವ ಕಾರ್ಯಕ್ರಮ ಅದ್ದೂರಿಯಾಗಿ ನಡೆಯುತ್ತಿದೆ. ಆದರೆ, ಅಲ್ಲಿನ ಕಟೌಟ್‌ಗಳಲ್ಲಿ ಗಾಂಧೀಜಿಯೇ ಇಲ್ಲ. ಕಟೌಟ್‌ಗಳಲ್ಲಿ ಈಗ ಆಧುನಿಕ ಗಾಂಧಿಗಳಿದ್ದಾರೆ ಎಂದು ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಟೀಕಿಸಿದ್ದಾರೆ.

ಜೆಪಿ ನಗರದ ತಮ್ಮ ನಿವಾಸದ ಬಳಿ ಇಂದು ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿದ ಅವರು, "ಗಾಂಧೀಜಿ ಅವರ ಹೆಸರಲ್ಲಿ ಒಂದು ವರ್ಷದ ಕಾರ್ಯಕ್ರಮ ಮಾಡ್ತಾರಂತೆ ಈ ಸರ್ಕಾರ. ದೊಡ್ಡ ದೊಡ್ಡ ಆಕಾಶ ಎತ್ತರಕ್ಕೆ ಕಟೌಟ್‌ಗಳನ್ನು ನೋಡಿದೆ. ಇವತ್ತು ಈ ರಾಜ್ಯ ಸರ್ಕಾರವನ್ನು ಮೃಗಿಯವಾಗಿ ನಡೆಸುತ್ತಿದ್ದಾರೆ. ಅಂತಹ ಕಾಂಗ್ರೆಸ್‌ನವರು ಗಾಂಧೀಜಿ ಸ್ಮರಣೆ ಮಾಡುತ್ತಾರಾ?. ಇದರ ಬಗ್ಗೆ ಮುಂದೆ ಮಾತಾಡೋಣ" ಎಂದರು.

ಬಿಜೆಪಿ ಶಾಸಕ ಮುನಿರತ್ನ ಮೇಲೆ ಮೊಟ್ಟೆ ಎಸೆದ ಪ್ರಕರಣಕ್ಕೆ ಪ್ರತಿಕ್ರಿಯೆ ನೀಡದ ಹೆಚ್ ಡಿಕೆ, ಮೊಟ್ಟೆ ಪ್ರಕರಣದ ಬಗ್ಗೆ ಆಮೇಲೆ ಮಾತನಾಡೋಣ ಎಂದು ಹೇಳಿದರು.

## ತಾವೇ ಹಲ್ಲೆ ಮಾಡಿಸಿ ಕೊಂಡಿರಬಹುದು

ಬೆಂಗಳೂರು: ಮುನಿರತ್ನ ತಾವೇ ಹಲ್ಲೆ ಮಾಡಿಸಿಕೊಂಡಿರಬಹುದು, ಬಿಜೆಪಿ ಡ್ರಾಮಾ ಕಂಪನಿ ರೀತಿ ವರ್ತನೆ ಮಾಡುತ್ತಿದೆ ಎಂದು ಸಚಿವ ದಿನೇಶ್ ಗುಂಡೂರಾವ್ ಅವರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಆರ್.ಆರ್.ನಗರ ಬಿಜೆಪಿ ಶಾಸಕ ಮುನಿರತ್ನ ಮೇಲೆ ಮೊಟ್ಟೆ ಎಸೆತ ಕೃತ್ಯದ ಹಿಂದೆ ಡಿಕೆ ಶಿವಕುಮಾರ್, ಡಿ.ಕೆ.ಸುರೇಶ್, ಕುಸುಮಾ ಕೈವಾಡ ಇದೆ ಎಂಬ ಆರೋಪಕ್ಕೆ ತಿರುಗೇಟು ನೀಡಿದ್ದಾರೆ.ಬಿಜೆಪಿಯವರು ಬಾಯಿಗೆ ಬಂದ ಹಾಗೆ ಆರೋಪ ಮಾಡುತ್ತಿದ್ದಾರೆ. ಸಿ.ಟಿ.ರವಿ, ಮುನಿರತ್ನ ಪ್ರಕರಣದಲ್ಲಿ ಹುಚ್ಚುಚ್ಚಾಗಿ ಮಾತನಾಡುತ್ತಿದ್ದಾರೆ. ಕಪೋಕಲ್ಪಿತ ಮಾತುಗಳನ್ನು ಸೇರಿಸುವುದು ಯಾವ ನ್ಯಾಯ? ಪಾಪ, ಕುಸುಮಾ ಬಗ್ಗೆ ವ್ಯಂಗ್ಯವಾಗಿ ಮಾತನಾಡುವುದು ಸರಿಯಲ್ಲ. ಉಪ್ಪು ತಿಂದವರು ನೀರು ಕುಡಿಯಬೇಕೆಂಬ ಸ್ಥಿತಿ ಮುನಿರತ್ನಗೆ ಬಂದಿದೆ. ಸುಳ್ಳು, ಕರುಣೆ ಬರುವ ರೀತಿ ಸನ್ನಿವೇಶ ಸೃಷ್ಟಿ ಮಾಡುವ ಕಲಾವಿದರು ಇವರು. ಜನರಿಗೆ ಇದು ಮನೋರಂಜನೆ, ನಿಜಾಂಶ ಜನರಿಗೆ ಗೊತ್ತಿದೆ ಎಂದು ಬೆಳಗಾವಿಯಲ್ಲಿ ಗುಂಡೂರಾವ್ ಹೇಳಿದರು.



ಎಐಸಿಸಿ ಅಧಿವೇಶನದಲ್ಲಿ ಪಾಲ್ಗೊಳ್ಳಲು ಆಗಮಿಸಿದ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹಾಗೂ ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರನ್ನು ಬೆಳಗಾವಿ ವಿಮಾನ ನಿಲ್ದಾಣದಲ್ಲಿ ಬರಮಾಡಿಕೊಂಡ ಡಿಸಿಎಂ ಡಿ ಕೆ ಶಿವಕುಮಾರ್ ಅವರು ಇಬ್ಬರೂ ಮುಖಂಡರಿಗೂ ಅಧಿವೇಶನದ ಬ್ಯಾಡ್ಜ್ ತೊಡಿಸಿದರು.



ಬೆಳಗಾವಿಯ ಸರ್ದಾರ್ ಮೈದಾನದಲ್ಲಿ ಖಾದಿ ಮೇಳ ಹಾಗೂ ವಸ್ತು ಪ್ರದರ್ಶನವನ್ನು ಸಿಎಂ ಸಿದ್ದರಾಮಯ್ಯ ಹಾಗೂ ಡಿಸಿಎಂ ಡಿ ಕೆ ಶಿವಕುಮಾರ್ ಅವರು ಇಂದು ಉದ್ಘಾಟಿಸಿದರು.

## ಸರ್ಕಾರಿ ದುಡ್ಡಲ್ಲಿ ಕಾಂಗ್ರೆಸ್ ಅಧಿವೇಶನ ನಡೆಸುವುದು ಎಷ್ಟು ಸರಿ

ಹಾವೇರಿ: ಮಹಾತ್ಮ ಗಾಂಧಿ ಕಾಂಗ್ರೆಸ್ ಗೂ ಇಂದಿನ ಕಾಂಗ್ರೆಸ್ ಗೂ ಬಹಳ ವ್ಯತ್ಯಾಸ ಇದೆ. ಅಸಲಿ ಕಾಂಗ್ರೆಸ್ ಗೂ ನಕಲಿ ಕಾಂಗ್ರೆಸ್ ಗೂ ವ್ಯತ್ಯಾಸ ಇದೆ. ಮಹಾತ್ಮಾ ಗಾಂಧೀಜಿಯವರತದ್ವಿರುದ್ಧವಾಗಿ ಈಗಿನ ಕಾಂಗ್ರೆಸ್ ನವರು ನಡೆದುಕೊಳ್ಳುತ್ತಿದಾರೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ.

ಹಾವೇರಿಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ಕಾನೂನು ರೀತಿ ಆಡಳಿತವೇ ಇಲ್ಲ. ಎಲ್ಲಾ ಇಲಾಖೆಗಳು, ನಿಗಮಗಳಲ್ಲಿ ಭ್ರಷ್ಟಾಚಾರ ನಡೆದಿದೆ. ದೀನ ದಲಿತರ ಅನುದಾನದಲ್ಲೇ ಭ್ರಷ್ಟಾಚಾರ ಮಾಡಿದ್ದಾರೆ. ಗಾಂಧಿಯವರ ಸ್ವರಾಜ್ಯಕ್ಕೆ ತದ್ವಿರುದ್ದವಾಗಿ ನಡೆದುಕೊಳ್ಳುತ್ತಿದ್ದಾರೆ. ಕಾಂಗ್ರೆಸ್ ಅಧಿವೇಶನಕ್ಕೆ ಸರ್ಕಾರದ ಹಣ ಬಳಸುತ್ತಿರುವುದು ಎಷ್ಟು ಸರಿ? ಇದು ಯಾವ ಕಾನೂನಿನಲ್ಲಿದೆ? ರಾಜಕೀಯ ಸಮ್ಮೇಳನಗಳಿಗೆ ಸರ್ಕಾರದ ಹಣ ಬಳಸುವುದು ಎಷ್ಟರ ಮಟ್ಟಿಗೆ ಸರಿ? ಗಾಂಧೀಜಿಯವರನ್ನು ಮುಂದಿಟ್ಟುಕೊಂಡು ತಮ್ಮ ಬ್ಯಾನರ್ ಹಾಕಿಕೊಂಡು ಅಧಿವೇಶನ ಮಾಡುತ್ತಿದ್ದಾರೆ. ಅಸಲಿ ಗಾಂಧಿ ಹೆಸರಲ್ಲಿ ನಕಲಿ ಕಾಂಗ್ರೆಸ್ ಅಧಿವೇಶನ ಮಾಡುತ್ತಿದ್ದಾರೆ ಎಂದು ಆರೋಪಿಸಿದರು.

**ಪ್ರಜಾಪ್ರಭುತ್ವ ವಿರೋಧಿ ಕ್ರಮ:** ಶಾಸಕ ಮುನಿರತ್ನ ಮೇಲೆ ಮೊಟ್ಟೆ ಎಸೆತ ಪ್ರಕರಣದ ಕುರಿತು ಪ್ರತಿಕ್ರಿಯಿಸಿದ ಅವರು, ಅಧಿಕಾರದ ಮಧದಿಂದ ಅಧಿಕಾರದ ದುರ್ಬಳಕೆ ಮಾಡಿಕೊಳ್ಳುತ್ತಿದ್ದಾರೆ. ವಿರೋಧ ಪಕ್ಷಗಳನ್ನು ದಮನ ಮಾಡಲು ಪ್ರಜಾಪ್ರಭುತ್ವ ವಿರೋಧಿ ಕ್ರಮ ಅನುಸರಿಸುತ್ತಿದ್ದಾರೆ. ಇಂಥ ಪ್ರಕರಣಗಳು ಸಾಕಷ್ಟು ನಡೆದಿದೆ, ಆದರೆ ಇನ್ನೂ ಕೆಲವು ಪ್ರಕರಣ ಬೆಳಕಿಗೆ ಬಂದಿಲ್ಲ. ಸರಕಾರ ಪೊಲೀಸ್ ಸ್ಟೇಷನ್ ಗಳಲ್ಲಿ ಡೀಲ್ ವ್ಯವಸ್ಥೆ ಮಾಡಿದೆ. ಗೃಹ ಸಚಿವರೇ ಏನೂ ನಡೆದಿಲ್ಲ, ಗೊತ್ತಿಲ್ಲ ಅಂತ ಮಾತಾಡುತ್ತಾರೆ. ಸಿಎಂ ಉಡಾಫೆ ಉತ್ತರ ಕೊಡುತ್ತಾರೆ. ಈ ಘಟನೆಗಳು ತುರ್ತು ಪರಿಸ್ಥಿತಿ ನೆನಪಿಸುತ್ತಿದೆ. ಶಾಸಕ ಮುನಿರತ್ನ ಮೇಲೆ ಆರೋಪ ಇದೆ , ಅದನ್ನು ಕೋರ್ಟ್ ನಲ್ಲಿ ಅವರು ಎದುರಿಸುತ್ತಾರೆ. ಅವರ ಮೇಲೆ ಮೊಟ್ಟೆ ಒಗೆಯುತ್ತಾರೆ ಅಂದರೆ ಯಾವ ಮಟ್ಟಕ್ಕೆ ಸರ್ಕಾರ ಇಳಿದಿದೆ? ಜನ ಪ್ರತಿನಿಧಿಗಳು ನಿರ್ಭೀತಿ, ನಿರ್ಭಯದಿಂದ ಕೆಲಸ ಮಾಡಲು ಹೇಗೆ ಸಾಧ್ಯ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಶಾಸಕ ಮುನಿರತ್ನ ನಾಟಕ ಮಾಡುತ್ತಿದ್ದಾರೆಂಬ ಕಾಂಗ್ರೆಸ್ ನಾಯಕರು ಮಾಡುತ್ತಿರುವ ಆರೋಪದ ಕುರಿತು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಯಾರಾದರೂ ಉಂಟಾ? ನಮ್ ಮೇಲೆ ನಾವೇ ಮೊಟ್ಟೆ ಹಾಕಿಸಿಕೊಂಡು ಅವಮಾನ ಮಾಡಿಸಿಕೊಳ್ಳೋಕೆ ಆಗುತ್ತಾ? ಎಂದು ಪ್ರಶ್ನಿಸಿದರು.

**ಸಿಟಿ ರವಿ ದೂರಿಗೆ ಕ್ರಮವಿಲ್ಲ:** ವಿಧಾನ ಪರಿಷತ್ ಸದಸ್ಯ ಸಿ.ಟಿ ರವಿಗೆ ಧರ್ಮಸ್ಥಳಕ್ಕೆ ಬರಲಿ ಎಂಬ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಸವಾಲು ಹಾಕಿರುವ ವಿಚಾರದ ಕುರಿತು ಕೇಳಿದ ಪ್ರಶ್ನೆಗೆ ಅದು ಅವರವರಿಗೆ ಬಿಟ್ಟಿದ್ದು ದೇವರು ನಂಬಿಕೆ ಅವರವರ ವಯಕ್ತಿಕ ವಿಚಾರ. ಸಿ.ಟಿ ರವಿ ಹಾಗೂ ಲಕ್ಷ್ಮೀ ಹೆಬ್ಬಾಳ್ಕರ್ ಇಬ್ಬರೂ ದೂರು ಕೊಟ್ಟಿದ್ದಾರೆ. ಒಂದು ಕಡೆ ಕಂಪ್ಲೇಂಟ್ ಗೆ ಕೂಡಲೇ ಕ್ರಮ ಕೈಗೊಳ್ಳುತ್ತಾರೆ. ಆದರೆ, ಸಿ.ಟಿ ರವಿ ದೂರು ಕೊಟ್ಟಿರುವುದನ್ನು ಎಫ್ ಐ ಆರ್ ಮಾಡೇ ಇಲ್ಲ. ಹೈಕೋರ್ಟ್ ಮದ್ಯಪ್ರವೇಶ ಮಾಡದಿದ್ದರೆ ಸಿ.ಟಿ ರವಿ ಅವರ ಪರಿಸ್ಥಿತಿ ಏನು ಆಗ್ತಿತ್ತೋ ಗೊತ್ತಿಲ್ಲ ಎಂದರು.

ದರ ಏರಿಕೆ ಪರ್ವ: ರಾಜ್ಯ ಸರ್ಕಾರದಿಂದ ಹಾಲಿನ ದರ ಹೆಚ್ಚಳ ವಿಚಾರಕ್ಕೆ ಪ್ರತಿಕ್ರಿಯಿಸಿದ ಅವರು, ರಾಜ್ಯ ಸರ್ಕಾರದಿಂದ ಬೆಲೆ ಏರಿಕೆ ಪರ್ವ ನಡೆದಿದೆ. ಸ್ಟಾಂಪ್ ಡ್ಯೂಟಿ, ಅಬಕಾರಿ ತೆರಿಗೆ ಸೇರಿದಂತೆ ಎಲ್ಲದರ ತೆರಿಗೆ ಹೆಚ್ಚಿಸಿದ್ದಾರೆ. 15,000 ಕೋಟಿ ರೂಪಾಯಿ ಹೊಸ ತೆರಿಗೆ ಹಾಕಿದ್ದಾರೆ. ಹಾಲಿನ ದರ, ನೀರಿನ ದರ ಎಲ್ಲದರಲ್ಲೂ ತೆರಿಗೆ ಹೆಚ್ಚಿಗೆ ಮಾಡಿದ್ದಾರೆ. ಜನ ಸಾಮಾನ್ಯರು ಬಳಕೆ ಮಾಡುವಂತ ಎಲ್ಲಾ ವಸ್ತುಗಳ ದರ ಹೆಚ್ಚಳ ಮಾಡಿದ್ದಾರೆ. ಮುಂಬರುವ ದಿನಗಳಲ್ಲಿ ಮರಳು, ಜಲ್ಲಿ ಕೂಡ ಇನ್ನಷ್ಟು ತುಟ್ಟಿ ಆಗಲಿದೆ. ಪ್ರತಿ ಆರ್ಥಿಕ ಚಟುವಟಿಕೆ ಮೇಲೆ ತೆರಿಗೆ ಹಾಕುತ್ತಿದ್ದಾರೆ. ಮುಂದೆ ಇವರು ಗಾಳಿಗೂ ತೆರಿಗೆ ಹಾಕುವ ಕಾಲ ದೂರ ಇಲ್ಲ ಎಂದು ಹೇಳಿದರು.

ಮೊದಲ ಪುಟದಿಂದ

## ಪಿಓಕೆ ಒಳಗೊಳ್ಳದ ಬ್ಯಾನರ್

ಸಮರ್ಥಿಸಿಕೊಂಡಿದೆ ಎಂದು ಬಿಜೆಪಿ ಆರೋಪಿಸುತ್ತಿದೆ.

ಪಾಕ್ ಆಕ್ರಮಿತ ಕಾಶ್ಮೀರ ಮತ್ತೆ ಭಾರತದ ವಶವಾಗಬೇಕು ಎಂಬುದು ಪ್ರತಿಯೊಬ್ಬ ಭಾರತೀಯನ ಕನಸು. ಆದರೆ ಕಾಂಗ್ರೆಸ್ ಈ ಭೂಗಾವನ್ನು ತಾನು ಪ್ರದರ್ಶಿಸಿದ ನಕಾಶೆಯಲ್ಲಿ ತೋರಿಸದೇ, ಪರೋಕ್ಷವಾಗಿ ಪಾಕಿಸ್ತಾನದ ವಾದವನ್ನು ಬೆಂಬಲಿಸಿದೆ ಎಂದು ಬಿಜೆಪಿ ಕಿಡಿಕಾರಿದೆ. ಪಿಓಕೆ ವಿವಾದ ಇಂದು ನಿನ್ನೆಯದಲ್ಲ. ಆದರೆ ಕಾಂಗ್ರೆಸ್ ಈ ವಿವಾದವನ್ನು ಮರೆತಂತೆ ಭಾಸವಾಗುತ್ತಿದೆ. ಇದು ದೇಶದ್ರೋಹಿ ಕಲಸ ಎಂದು ಬಿಜೆಪಿ ಹರಿಹಾಯ್ದಿದೆ.

ಈ ಸಂಬಂಧ ಮಾತನಾಡಿರುವ ರಾಜ್ಯ ಬಿಜೆಪಿ ಅಧ್ಯಕ್ಷ ಬಿವೈ ವಿಜಯೇಂದ್ರ, "ಭಾರತದ ನಕ್ಷೆಯಲ್ಲಿ ಪಿಓಕೆ ತೋರಿಸದೇ ಕಾಂಗ್ರೆಸ್ ದೇಶದ್ರೋಹಿ ಕೆಲಸ ಮಾಡಿದೆ. ಭಾರತದ ಮುಕುಟವನ್ನೇ ಕೈಬಿಟ್ಟಿರುವ ಕಾಂಗ್ರೆಸ್, ಬೆಳಗಾವಿಯಲ್ಲಿ ವ್ಯವಸ್ಥಿತ ಪಿತೂರಿ ನಡೆಸಿದೆ ಎಂಬುದು ಸ್ಪಷ್ಟವಾಗಿದೆ.." ಎಂದು ತೀವ್ರ ವಾಗ್ದಾಳಿ ನಡೆಸಿದರು.

ಇದೇ ವೇಳೆ ಬೆಳಗಾವಿಯಲ್ಲಿ ಆಯೋಜಿಸಿರುವ ಮಹಾಧಿವೇಶನ ಕಾಂಗ್ರೆಸ್ ಕಾರ್ಯಕ್ರಮವಾಗಿ ಮಾರ್ಪಟ್ಟಿರುವುದಕ್ಕೆ ಬಿವೈ ವಿಜಯೇಂದ್ರ ಅಸಮಾಧಾನ ವ್ಯಕ್ತಪಡಿಸಿದರು.

"ಕರ್ನಾಟಕದ ಜನರ ತೆರಿಗೆ ದುಡ್ಡಿನಲ್ಲಿ ಸಮಾವೇಶ ಆಯೋಜಿಸಿರುವ ರಾಜ್ಯ ಕಾಂಗ್ರೆಸ್ ಸರ್ಕಾರ, ಇಡೀ ಸಮಾವೇಶವನ್ನು ತನ್ನ ಪಕ್ಷದ ಪರವಾಗಿ ಹೈಜಾಕ್ ಮಾಡಿಕೊಂಡಿದೆ.." ಎಂದು ರಾಜ್ಯ ಬಿಜೆಪಿ ಮುಖ್ಯಸ್ಥ ಕಿಡಿಕಾರಿದರು.

"ಸರ್ಕಾರಿ ಕಾರ್ಯಕ್ರಮವನ್ನು ಪಕ್ಷದ ಕಾರ್ಯಕ್ರಮವನ್ನಾಗಿ ಮಾರ್ಪಡಿಸಿರುವ ಕಾಂಗ್ರೆಸ್, ಮಹಾತ್ಮಾ ಗಾಂಧಿ ಅವರ ನೆಪದಲ್ಲಿ ಈಗಿನ ನಕಲಿ ಗಾಂಧಿಗಳನ್ನು ಮೆರೆಸಲು ಹೊರಟಿದೆ. ಈಗಿನ ಕಾಂಗ್ರೆಸ್ ನಾಯಕರು ಮಹಾತ್ಮಾ ಗಾಂಧಿ ಅವರ ಆದರ್ಶಗಳನ್ನು ಮರೆತು ದಶಕಗಳೇ ಕಳೆದಿವೆ. ಹೀಗಾಗಿ ಗಾಂಧಿ ಅವರ ಹೆಸರು ಹೇಳಲು ಕಾಂಗ್ರೆಸ್‌ಗೆ ಯಾವುದೇ ನೈತಿಕತೆ ಇಲ್ಲ.." ಎಂದು ಬಿವೈ ವಿಜಯೇಂದ್ರ ಹರಿಹಾಯ್ದರು.

"ಗಾಂಧಿ ಹೆಸರಿನಲ್ಲಿ ಕಾಂಗ್ರೆಸ್ ತನ್ನ ರಾಜಕೀಯ ಬೇಳೆ ಬೇಯಿಸಿಕೊಳ್ಳಲು ಹವಣಿಸುತ್ತಿದೆ. ಆದರೆ ಗಾಂಧಿ ಜನಸಿನ ಭಾರತದ ನಿರ್ಮಾಣಕ್ಕಾಗಿ ಬಿಜೆಪಿ ಪ್ರಯತ್ನಿಸುತ್ತಿದೆ. ಈ ವ್ಯತ್ಯಾಸವನ್ನು ರಾಜ್ಯದ ಜನ ಗುರುತಿಸುತ್ತಾರೆ ಎಂಬ ನಂಬಿಕೆ ಇದೆ. ಆದರೆ ಕಾಂಗ್ರೆಸ್‌ನ ಬೆಳಗಾವಿ ಮಹಾಧಿವೇಶನದ ಕಪಟ ನಾಟಕ ಮತ್ತು ಭಾರತದ ನಕ್ಷೆಯನ್ನು ತಿರುಚಿರುವುದರ ವಿರುದ್ಧ ವಿಧಾನಸೌಧದ ಮುಂಭಾಗದಲ್ಲಿರುವ ಗಾಂಧಿ ಪ್ರತಿಮೆ ಎದುರು ಬಿಜೆಪಿ ಪ್ರತಿಭಟನೆ ನಡೆಸಲಿದೆ ಎಂದು ಬಿವೈ ವಿಜಯೇಂದ್ರ ತಿಳಿಸಿದರು.

## ಗಾಂಧಿ ಪ್ರತಿಮೆ ಅನಾವರಣ

ಜೀವನೋಪಾಯ ಇಲಾಖೆಯ ಸಚಿವರಾದ ಡಾ.ಶರಣಪ್ರಕಾಶ ಪಾಟೀಲ ಹಾಗೂ ಇನ್ನಿತರ ಗಣ್ಯರು ಆತ್ಮೀಯವಾಗಿ ಬರಮಾಡಿಕೊಂಡರು. ಸ್ವ-ಸಹಾಯ ಗುಂಪಿನ ಮಹಿಳೆಯರ ಉತ್ಪನ್ನಗಳು ಹಾಗೂ ಖಾದಿ ಉತ್ಪನ್ನಗಳ ಬೃಹತ್ ಪ್ರದರ್ಶನ ಮತ್ತು ಮಾರಾಟ ಮೇಳ 'ಅಸ್ಮಿತೆ' ವ್ಯಾಪಾರ ಮೇಳ-2024ವನ್ನು ಉದ್ಘಾಟಿಸಿದರು.

**ಜನವರಿ 4ರವರೆಗೆ ಸರಸ್ ಮೇಳ:** ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ಕರ್ನಾಟಕ ರಾಜ್ಯ ಜೀವನೋಪಾಯ ಅಭಿಯಾನ ಮತ್ತು ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ, ಕೈಗಾರಿಕಾ ಮತ್ತು ವಾಣಿಜ್ಯ ಇಲಾಖೆ ಮತ್ತು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಮಹಾನಗರ ಪಾಲಿಕೆ ಸಹಭಾಗಿತ್ವದಲ್ಲಿ ಈ ಸರಸ್ ಮೇಳ ಮತ್ತು ಖಾದಿ ಉತ್ಸವವು ಆರಂಭವಾಗಿದ್ದು, ಡಿ.26ರಿಂದ ಜನವರಿ 4ರವರೆಗೆ ನಡೆಯಲಿದೆ.

ಸ್ವ-ಸಹಾಯ ಗುಂಪಿನ ಮಹಿಳೆಯರು ಭಾಗಿ: ಈ ಕಾರ್ಯಕ್ರಮದಲ್ಲಿ ರಾಜ್ಯದ ಎಲ್ಲ ಜಿಲ್ಲೆಗಳಿಂದ ಸ್ವ-ಸಹಾಯ ಗುಂಪಿನ ಮಹಿಳೆಯರು ತಮ್ಮ ತಮ್ಮ ಜಿಲ್ಲೆಯ ಪ್ರಮುಖ ಉತ್ಪನ್ನಗಳೊಂದಿಗೆ ಭಾಗವಹಿಸಿದ್ದು, ಒಟ್ಟು 150 ಮಳಿಗೆಗಳನ್ನು ಸ್ಥಾಪಿಸಲಾಗಿದೆ. ಅದರಲ್ಲಿ 10 ಆಹಾರ ಮೇಳದ ಮಳಿಗೆಗಳು ಮತ್ತು 50 ಖಾದಿ ಉತ್ಪನ್ನಗಳ ಮೇಳಗಳು ಒಳಗೊಂಡಿದೆ. ಈ ಮೇಳಕ್ಕೆ ಸಾರ್ವಜನಿಕರಿಗೆ ಉಚಿತ ಪ್ರವೇಶವಿದ್ದು, ಡಿ.26ರಿಂದ ಜ.04ರವರೆಗೆ ಪ್ರತಿ ದಿನ ಬೆಳಿಗ್ಗೆ 10.30 ಯಿಂದ ರಾತ್ರಿ 9.30 ರವರೆಗೆ ಪ್ರದರ್ಶನ ಸಾರ್ವಜನಿಕರ ವೀಕ್ಷಣೆಗೆ ಅವಕಾಶ ಕಲ್ಪಿಸಲಾಗಿದೆ.

ಪ್ರತಿ ದಿನ ಸಾಂಸ್ಕೃತಿಕ ಕಾರ್ಯಕ್ರಮ: ಪ್ರತಿ ದಿನ ಸಂಜೆ 6.30 ರಿಂದ 9.00 ಗಂಟೆಯವರೆಗೆ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ. ಬೆಳಗಾವಿಯಲ್ಲಿ ಆಯೋಜಿಸಲಾಗುತ್ತಿರುವ ಸತತ 4ನೇ ವರ್ಷದ ಈ ಮೇಳದಲ್ಲಿ ಪ್ರಮುಖವಾಗಿ ನಗರ ಹಾಗೂ ಗ್ರಾಮೀಣ ಸ್ವ-ಸಹಾಯ ಗುಂಪಿನ ಮಹಿಳೆಯರು ಉತ್ಪಾದಿಸುವ ಉತ್ಪನ್ನಗಳು ಮಾರಾಟ ಮಾಡುವುದು ವಿಶೇಷತೆಯಾಗಿದೆ.

ಆಕರ್ಷಣೀಯ ಅಕ್ಕ ಕೆಫೆ: ಸರ್ಕಾರವು 2024-25ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿರುವಂತೆ ರಾಜ್ಯದಲ್ಲಿ 50 'ಅಕ್ಕ ಕೆಫೆ'ಗಳನ್ನು ಒಂದೇ ಮಾದರಿ ವಿನ್ಯಾಸದಡಿ ಅನುಷ್ಠಾನಗೊಳಿಸಲಾಗುತ್ತಿದೆ. ಈ ಕಾರ್ಯಕ್ರಮದಡಿ ಅಂದಾಜು 1200 ಸ್ವ-ಸಹಾಯ ಗುಂಪಿನ ಮಹಿಳೆಯರಿಗೆ ಜೀವನೋಪಾಯಕ್ಕೆ ಅನುಕೂಲ ಕಲ್ಪಿಸಲಾಗುತ್ತಿದೆ. ಮುಂದುವರೆದು, 'ಅಕ್ಕ-ಕೆಫೆ' ಕಾರ್ಯಕ್ರಮದ ಭಾಗವಾಗಿ ಈ ಮೇಳದ ಮೈದಾನದಲ್ಲಿನ ಆಹಾರ ಕೋರ್ಟ್‌ನ್ನು "ಅಕ್ಕ-ಕೆಫೆ" ಶೀರ್ಷಿಕೆಯಡಿ ಆಕರ್ಷಣೀಯವಾಗಿ ಸಿದ್ದಪಡಿಸಲಾಗಿದೆ.

ಸ್ಥಳದಲ್ಲೇ ಆಹಾರ ತಯಾರಿಕೆ: ಈ ಆಹಾರ ಮಳಿಗೆಗಳಲ್ಲಿ ಉತ್ತರ ಕರ್ನಾಟಕದಲ್ಲಿ ಹೆಸರುವಾಸಿಯಾದ ಗಿರಮಿಟ್/ಚುರುಮರಿ ಮಂಡಕ್ಕಿ, ಜೋಳದ ಖಡಕ್ ರೊಟ್ಟಿ ಸೇರಿದಂತೆ ಹೋಳಿಗೆ, ಮಂಗಳೂರು ನೀರ್‌ದೋಸೆ ಮತ್ತು ಮಾಂಸಹಾರಿ ಆಹಾರಗಳಾದ ಬ್ಯಾಂಬು ಬಿರಿಯಾನಿ ಮುಂತಾದವುಗಳನ್ನು ಸ್ಥಳದಲ್ಲೇ ತಯಾರಿಸಿ ಕೊಡಲಾಗುತ್ತಿದೆ.

ವಿಶೇಷ ಅಭಿಯಾನ: ರಾಜ್ಯದಲ್ಲಿ ಅಭಿಯಾನದಡಿ 2.79 ಲಕ್ಷ ಸ್ವ-ಸಹಾಯ ಗುಂಪುಗಳಡಿ 29.66 ಲಕ್ಷ ಕುಟುಂಬಗಳನ್ನು ಗ್ರಾಮೀಣ ಹಾಗೂ ನಗರ ಜೀವನೋಪಾಯ ಅಭಿಯಾನದಡಿ ಹಾಗೂ 45 ಸಾವಿರ ಸ್ವ-ಸಹಾಯ ಗುಂಪುಗಳಡಿ 4.50 ಲಕ್ಷ ಕುಟುಂಬಗಳನ್ನು ಗ್ರಾಮೀಣ ಹಾಗೂ ನಗರ ಜೀವನೋಪಾಯ ಅಭಿಯಾನದಡಿ ಸಂಘಟಿಸಲಾಗಿದ್ದು, ಪ್ರತಿಯೊಬ್ಬ ಮಹಿಳೆಯು ಸ್ವಾವಲಂಬನೆಯ ಬದುಕಿನೊಂದಿಗೆ ತನ್ನ ಕುಟುಂಬದ ಅಭಿವೃದ್ಧಿಗೆ ಪೂರಕ ಸೇವೆಗಳನ್ನು ಪಡೆಯುವಲ್ಲಿ ಪೂರಕ ವ್ಯವಸ್ಥೆಗಳನ್ನು ಕಲ್ಪಿಸಲಾಗುತ್ತಿದೆ.

ಉತ್ಪನ್ನಗಳಿಗೆ ಮಾರುಕಟ್ಟೆ: ರಾಜ್ಯದಲ್ಲಿ ಈ ಮಹಿಳೆಯರು ಉತ್ಪನ್ನಗಳ ಮಾರಾಟಕ್ಕೆ ಪ್ರತಿಯೊಂದು ಹಳ್ಳಿ, ಸಂತೆ, ತಾಲೂಕು ಮಟ್ಟದಲ್ಲಿ ಮಾಸಿಕ ಸಂತೆ, ಜಿಲ್ಲಾ ವಸ್ತು ಪ್ರದರ್ಶನ ಮಾರಾಟ ಮೇಳ ಏರ್ಪಡಿಸುವುದಷ್ಟೆ ಅಲ್ಲದೆ ಇತರೆ ರಾಜ್ಯ ಹಾಗೂ ರಾಷ್ಟ್ರ ಮಟ್ಟದಲ್ಲಿ ನಡೆಯುವ ಮೇಳಗಳಿಗೆ ರಾಜ್ಯದ ಮಹಿಳೆಯರನ್ನು ನಿಯೋಜನೆ ಮಾಡುವ ಮೂಲಕ ಅವರ ಉತ್ಪನ್ನಗಳಿಗೆ ಮಾರುಕಟ್ಟೆ ಒದಗಿಸಲಾಗುತ್ತಿದೆ. ಈ ನಿಟ್ಟಿನಲ್ಲಿ ಬೆಳಗಾವಿಯಲ್ಲಿ ಕಳೆದ 3 ವರ್ಷದಿಂದ ಬೃಹತ್ ವಸ್ತು ಪ್ರದರ್ಶನ ಮತ್ತು ಮಾರಾಟ ಮೇಳವನ್ನು ಆಯೋಜಿಸಿದಂತೆ ಈ ವರ್ಷವು ಸಹ ಮೇಳ ಆಯೋಜಿಸಲಾಗಿದೆ ಎಂದು ರಾಷ್ಟ್ರೀಯ ಜೀವನೋಪಾಯ ಅಭಿಯಾನದ ನಿರ್ದೇಶಕಿ ಪಿ.ಐ.ವಿದ್ಯಾ ಅವರು ತಿಳಿಸಿದರು.

ನವ ನವೀನ ಉತ್ಪನ್ನಗಳು: ಬೆಳಗಾವಿಯ ಈ ಮೇಳದ ಮಳಿಗೆಗಳಲ್ಲಿ ಗ್ರಾಮೀಣ ಮತ್ತು ನಗರ ಪ್ರದೇಶದ ಸ್ವ-ಸಹಾಯ ಗುಂಪಿನ ಮಹಿಳೆಯರು ಉತ್ಪಾದಿಸಿರುವ ಉತ್ಪನ್ನಗಳಾದ ಚನ್ನಪಟ್ಟಣದ ಮರದ ಗೊಂಬೆಗಳು, ಕೊಪ್ಪಳದ ಕಿನ್ನಾಳ ಆಟದ ಸಾಮಾನುಗಳು, ಮೊಳಕಾಲ್ಮೂರು ಸೀರೆಗಳು, ಇಳಕಲ್ ಸೀರೆಗಳು, ರೇಷ್ಮೆ ಸೀರೆಗಳು, ವಿವಿಧ ನವಾಕರ್ಷಣೆಯ ಬಟ್ಟೆಗಳು, ನಾರಿನ ಉತ್ಪನ್ನದ ಬ್ಯಾಗ್ ಗಳು, ಮಸಾಲಾ ಉತ್ಪನ್ನಗಳು, ಸಿರಿ ಧಾನ್ಯ ಉತ್ಪನ್ನಗಳು, ಮೌಲ್ಯವರ್ಧಿತ ಕರಾವಳಿ ಉತ್ಪನ್ನಗಳು, ವಿವಿಧ ಬಗೆಯ ಖಾದಿ ಉತ್ಪನ್ನಗಳು, ಬಾಳೆ ನಾರಿನಿಂದ ಉತ್ಪಾದಿಸಿದ ಉತ್ಪನ್ನಗಳು, ಗೃಹಾಲಂಕಾರಿಕ ವಸ್ತುಗಳು, ಆಯುರ್ವೇದ ಔಷಧಿಯುತ ಉತ್ಪನ್ನಗಳು, ಪಾರಂಪರಿಕ ವಸ್ತುಗಳು, ಗೃಹೋಪಯೋಗಿ ವಸ್ತುಗಳು, ನವೀನ ವಿನ್ಯಾಸದ ಆಭರಣಗಳು, ಆಹಾರ ಉತ್ಪನ್ನಗಳು ಸೇರಿದಂತೆ ಅನೇಕ ಉತ್ಪನ್ನಗಳು ಸಾರ್ವಜನಿಕರಿಗೆ ಕೈಗೆಟುಕುವ ಬೆಲೆಯಲ್ಲಿ ಲಭ್ಯವಿವೆ.

ಬೆಳಗಾವಿಗೆ ಆಗಮಿಸಿದ ಕಾಂಗ್ರೆಸ್ ನಾಯಕರು: ರಾಷ್ಟ್ರೀಯ ಕಾಂಗ್ರೆಸ್ ಅಧಿವೇಶನದ ಶತಮಾನೋತ್ಸವಕ್ಕೆ ಹಿನ್ನೆಲೆಯಲ್ಲಿ ಸಾಂಬ್ರಾ ವಿಮಾನ ನಿಲ್ದಾಣಕ್ಕೆ ದೇಶದ ವಿವಿಧ ಭಾಗಗಳಿಂದ ಬರುತ್ತಿರುವ ಗಣ್ಯರಿಗೆ ಸ್ಥಳೀಯ ಕಾಂಗ್ರೆಸ್ ಮಹಿಳಾಮಣಿಗಳು ಆರತಿ ಬೆಳಗಿ ಹಣೆಗೆ ಕುಂಕುಮ ಇಟ್ಟು ಸ್ವಾಗತಿಸಿದರು. ಕನ್ನಯ್ಯ ಕುಮಾರ್ ಸೇರಿದಂತೆ ದೆಹಲಿಯಿಂದ ವಿಶೇಷ ವಿಮಾನದಲ್ಲಿ ಆಗಮಿಸಿದ 120ಕ್ಕೂ ಅಧಿಕ ಗಣ್ಯರಿಗೆ ಸ್ವಾಗತಿಸಲಾಯಿತು. ದಾವಣಗೆರೆಯ ತಂಡದಿಂದ ಬಂಜಾರಾ ನೃತ್ಯದ ಮೂಲಕ ಸ್ವಾಗತ ಕೋರಲಾಯಿತು.

## ದರ ಏರಿಕೆ

ಈ ಹಿಂದೆ 2 ರೂ ಹಾಲಿನ ದರ ಹೆಚ್ಚಿಸಿ 50 ಎಂಎಲ್ ಹಾಲು ಹೆಚ್ಚಿಗೆ ಕೊಡಲಾಗುತ್ತಿತ್ತು. ಇನ್ನು ಸಂಕ್ರಾಂತಿ ಹಬ್ಬದ ಬಳಿಕ ನಂದಿನಿ ಹಾಲಿನ ದರ ಏರಿಕೆಯಾಗುವ ಸಾಧ್ಯತೆಯಿದೆ.

## ಯೋಧರಿಗೆ ಅಂತಿಮ ಗೌರವ

ಒದಗಿಸುತ್ತೇವೆ. ನಿಯಮಾನುಸಾರ ಹುತಾತ್ಮರ ಕುಟುಂಬಕ್ಕೆ ಸಲ್ಲಬೇಕಾದ ಸಕಲ ನೆರವನ್ನೂ ನೀಡಲಾಗುವುದು" ಎಂದು ಸಿಎಂ ಭರವಸೆ ನೀಡಿದರು.

ಬಿಜೆಪಿಯವರಿಗೆ ತಿರುಗೇಟು:

ಇದೇ ವೇಳೆ, ಮೈಸೂರಿನ ಕೆಆರ್ ಎಸ್ ರಸ್ತೆಗೆ ಸಿದ್ದರಾಮಯ್ಯ ಆರೋಗ್ಯ ರಸ್ತೆ ಎಂದು ಹೆಸರಿಡುವ ಬಗ್ಗೆ ಬಿಜೆಪಿ ವಿರೋಧ ವಿಚಾರಕ್ಕೆ ಪ್ರತಿಕ್ರಿಯಿಸಿದ ಸಿಎಂ, "ಯಾವುದೇ ಒಳ್ಳೆಯ ಕೆಲಸವನ್ನು ವಿರೋಧಿಸುವುದೇ ಬಿಜೆಪಿಯವರ ಅಭ್ಯಾಸ. ಆದರೆ ಬಿಜೆಪಿಯವರೇ ಆದ ಮಾಜಿ ಸಂಸದ ಪ್ರತಾಪ್ ಸಿಂಹ ಅವರು ಮೈಸೂರು ನಗರಪಾಲಿಕೆಯ ನಿರ್ಧಾರವನ್ನು ಸಮರ್ಥಿಸಿಕೊಂಡಿದ್ದಾರೆ" ಎಂದು ತಿರುಗೇಟು ಕೊಟ್ಟರು.

ಈ ವೇಳೆ ಸಚಿವರಾದ ಹೆಚ್.ಸಿ.ಮಹದೇವಪ್ಪ ಲಕ್ಷ್ಮೀ ಹೆಬ್ಬಾಳ್ಕರ್, ಶಾಸಕ ಅಶೋಕ ಪಟ್ಟಣ ಸೇರಿ ಸೇನಾಧಿಕಾರಿಗಳು, ಮೃತ ಯೋಧರ ಕುಟುಂಬಸ್ಥರು, ಮಾಜಿ ಸೈನಿಕರು ಮತ್ತಿತರರು ಇದ್ದರು.

## ನಕಲಿ ಗಾಂಧಿಗಳ ಅಧಿವೇಶನ

ಬೆಳಗಾವಿ ಅಧಿವೇಶನ ಆಚರಿಸುತ್ತಿರುವುದು ವಿಪರ್ಯಾಸ" ಎಂದಿದ್ದಾರೆ.

"ಗಾಂಧೀಜಿ ಮಾತ್ರವಲ್ಲ, ಸಂವಿಧಾನ ಶಿಲ್ಪಿ ಬಾಬಾಸಾಹೇಬ್ ಅಂಬೇಡ್ಕರ್ ಅವರೂ ಸಹ ಕಾಂಗ್ರೆಸ್ ಪಕ್ಷವನ್ನು ತಿರಸ್ಕಾರ ಮಾಡಿದ್ದರು. ಕಾಂಗ್ರೆಸ್ ಪಕ್ಷ ಸೇರುವುದು ಆತ್ಮಹತ್ಯೆ ಮಾಡಿಕೊಂಡಂತೆ ಎಂದು ಅಂಬೇಡ್ಕರರು ದಲಿತರಿಗೆ ಸಲಹೆ ನೀಡಿದ್ದರು. ಸ್ವತಂತ್ರ್ಯಕ್ಕಾಗಿ ತಮ್ಮ ಸರ್ವಸ್ವವನ್ನೂ ಸಮರ್ಪಿಸಿದ ಗಾಂಧಿ, ಸರ್ದಾರ್ ಪಟೇಲ್ ಅಂತಹ ಮೇರು ನಾಯರನ್ನು ಒಳಗೊಂಡಿದ್ದ ಸ್ವಾತಂತ್ರ್ಯ ಪೂರ್ವ ಕಾಂಗ್ರೆಸ್‌ಗೂ, ಅಧಿಕಾರಕ್ಕಾಗಿ ನಕಲಿ ಗಾಂಧಿಗಳು ನಡೆಸುತ್ತಿರುವ ಈಗಿನ ನಕಲಿ ಕಾಂಗ್ರೆಸ್‌ಗೂ ಸಂಬಂಧವೇ ಇಲ್ಲ" ಎಂದು ಟೀಕಿಸಿದ್ದಾರೆ.

"ದೇಶದ ಜನರಿಂದ ಪದೇ ಪದೇ ತಿರಸ್ಕಾರಗೊಳ್ಳುತ್ತಿರುವ ನಕಲಿ ಗಾಂಧಿಗಳನ್ನು ಮತ್ತೊಮ್ಮೆ ರೀಲಾಂಚ್ ಮಾಡಲು ರಾಜ್ಯದ 20 ಕೋಟಿ ರೂ. ತೆರಿಗೆ ಹಣ ಪೋಲು ಮಾಡುತ್ತಿರುವ ಸಿಎಂ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ, ನಕಲಿ ಗಾಂಧಿಗಳ ಗುಲಾಮಗಿರಿ ಮಾಡಲು ಕನ್ನಡಿಗರಿಗೆ ದ್ರೋಹ ಮಾಡುತ್ತಿದೆ" ಎಂದು ಆರ್.ಅಶೋಕ್ ವಾಗ್ದಾಳಿ ನಡೆಸಿದ್ದಾರೆ.

## ನಾಳೆ ಧರಣಿ

ಸ್ಥಳಗಳನ್ನು ಪ್ರಧಾನಿ ನರೇಂದ್ರ ಮೋದಿಜೀ ಅವರು ಪಂಚತೀರ್ಥಗಳನ್ನಾಗಿ ಅಭಿವೃದ್ಧಿ ಪಡಿಸಿದ್ದಾರೆ ಎಂದು ವಿವರಿಸಿದರು.

ಕಾಂಗ್ರೆಸ್ ಪಕ್ಷವು ರಾಜ್ಯದ ಜನರ ಕೋಟಿಗಟ್ಟಲೆ ತೆರಿಗೆ ಹಣವನ್ನು ಬಳಸಿಕೊಂಡು ಬೆಳಗಾವಿಯಲ್ಲಿ ಮಹಾಧಿವೇಶನ ಮಾಡಲು ಹೊರಟಿರುವುದು ಸರಿಯಲ್ಲ ಎಂದು ತಿಳಿಸಿದರು. ನಕಲಿ ಕಾಂಗ್ರೆಸ್ಸಿನ ಈ ನೀತಿಯ ವಿರುದ್ಧ ಬೆಳಗಾವಿಯಲ್ಲಿ ಕಾಂಗ್ರೆಸ್ ಮಹಾಧಿವೇಶನವನ್ನು ವಿರೋಧಿಸಿ ನಾಳೆ ಬೆಳಿಗ್ಗೆ 10.30ಕ್ಕೆ ಬೆಂಗಳೂರಿನ ಮಹಾತ್ಮ ಗಾಂಧಿ ಪ್ರತಿಮೆ ಮುಂದೆ ಧರಣಿ ನಡೆಸಲಿದ್ದೇವೆ. ವಿಧಾನಸಭೆ- ವಿಧಾನಪರಿಷತ್ತಿನ ಸದಸ್ಯರು ಇದರಲ್ಲಿ ಭಾಗವಹಿಸುವರು ಎಂದು ತಿಳಿಸಿದರು. ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ, ರಾಜ್ಯ ಪ್ರಧಾನ ಕಾರ್ಯದರ್ಶಿ ಪಿ. ರಾಜೀವ್ ಅವರು ಪತ್ರಿಕಾಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

## ವಿರಾಟ್ ಕೊಹ್ಲಿಗೆ ದಂಡ

ಜಗಳಕ್ಕಿಳಿದಿರುವುದು ಸ್ಪಷ್ಟವಾಗಿ ಕಾಣುತ್ತಿತ್ತು.

ಈ ಜಗಳ ತಾರಕ್ಕೇರುತ್ತಿದ್ದಂತೆ ಅಂಪೈರ್ ಮತ್ತು ಸಹ ಆಟಗಾರರು ಮಧ್ಯ ಪ್ರವೇಶಿಸಿದ್ದರು. ಇದೀಗ ಈ ಭುಜಬಲದ ವಿಡಿಯೋ ವೈರಲ್ ಆಗಿದ್ದು, ಇದರ ಬೆನ್ನಲ್ಲೇ ಈ ಘಟನೆಯನ್ನು ಪರಿಶೀಲಿಸಲು ಐಸಿಸಿ ಅಧಿಕಾರಿಗಳು ನಿರ್ಧರಿಸಿದ್ದಾರೆ ಎಂದು ಆಸ್ಟ್ರೇಲಿಯಾ ಮಾಧ್ಯಮಗಳು ವರದಿ ಮಾಡಿದೆ.

ಈ ಪಂದ್ಯದ ಮೊದಲ ಇನಿಂಗ್ಸ್‌ನಲ್ಲಿ ಬ್ಯಾಟಿಂಗ್ ಮಾಡುತ್ತಿದ್ದ ಆಸ್ಟ್ರೇಲಿಯಾ ತಂಡದ ಬ್ಯಾಟರ್ ಸ್ಯಾಮ್ ಕೊನ್‌ಸ್ಟಾಸ್ ಅವರನ್ನು ವಿರಾಟ್ ಕೊಹ್ಲಿ ಭುಜದಿಂದ ಗುದ್ದಿ ಕೆಣಕಿದ್ದರು. ಮೇಲ್ನೋಟಕ್ಕೆ ಉದ್ದೇಶ ಪೂರ್ವಕವಾಗಿ ನಡೆದಿದ್ದ ಈ ಘಟನೆಯನ್ನು ಗಂಭೀರವಾಗಿ ಪರಿಗಣಿಸಿರುವ ಮ್ಯಾಚ್ ರೆಫರಿ ಕೊಹ್ಲಿಯನ್ನು ವಿಚಾರಣೆಗೆ ಕರೆದಿದ್ದಾರೆ. ಈ ವೇಳೆ ಕೊಹ್ಲಿ ತಮ್ಮ ತಪ್ಪು ಒಪ್ಪಿಕೊಂಡಿದ್ದು, ಹೀಗಾಗಿ ದಂಡದ ಶಿಕ್ಷೆ ನೀಡಲಾಗಿದೆ ಎಂದು ತಿಳಿದು ಬಂದಿದೆ.

## ಮುನಿರತ್ನರಿಂದ ದೂರು

ಹಲವು ಬಾರಿ ಈ ರೀತಿಯ ಸಂಚುಗಳಾಗಿವೆ ಎಂದು ಆರೋಪ ಮಾಡಿದ್ದು, ಇನ್ನೂ ಎಫ್‌ಐಆರ್‌ನಲ್ಲಿ ನೂರಕ್ಕೂ ಹೆಚ್ಚು ಜನರ ಮೇಲೆ ದೂರು ನೀಡಿದ್ದು ಅವರ ವಿರುದ್ಧ ಕ್ರಮ ಜರುಗಿಸಬೇಕೆಂದು ತಿಳಿಸಿದ್ದಾರೆ.

ನನ್ನ ಜೀವಕ್ಕೆ ಅಪಾಯವಿದೆ ಎಂದು ಗನ್‌ಮ್ಯಾನ್ ಕೇಳಿದ್ದರೂ ಕೂಡ ಕೊಟ್ಟಿಲ್ಲ. ಪೊಲೀಸರು ಎಲ್ಲಿಯೂ ಹೊರ ಹೋಗದಂತೆ ಎಚ್ಚರಿಕೆ ನೀಡಿದ್ದಾರೆ. ಆದರೆ ನಂದಿನಿ ಲೇಔಟ್ ವ್ಯಾಪ್ತಿಯಲ್ಲಿ ಲಕ್ಷ್ಮೀದೇವಿನಗರ ವಾರ್ಡ್‌ನಲ್ಲಿ ಕಾರ್ಯಕ್ರಮ ಮುಗಿಸಿ ಬರೋ ವೇಳೆ ನನ್ನ ಮೇಲೆ ಮೊಟ್ಟೆಯಿಂದ ಹಲ್ಲೆ ನಡೆದಿದೆ ಎಂದು ದೂರಿನಲ್ಲಿ ಉಲ್ಲೇಖ ಮಾಡಿದ್ದಾರೆ

# ಸಂಭ್ರಮದ ಕ್ರಿಸ್‌ಮಸ್ ಆಚರಣೆ



ಚಾಮರಾಜನಗರ: ಜಿಲ್ಲಾದ್ಯಂತ ಕ್ರೈಸ್ತ ಬಾಂಧವರು ಸಡಗರ, ಸಂಭ್ರಮದಿಂದ ಕ್ರಿಸ್‌ಮಸ್ ಹಬ್ಬವನ್ನು ಆಚರಣೆ ಮಾಡಿದರು.
ಚಾಮರಾಜನಗರ ಜಿಲ್ಲೆಯ ಚಾಮರಾಜನಗರ, ಕೊಳ್ಳೇಗಾಲ, ಹನೂರು, ಗುಂಡ್ಲುಪೇಟೆ ತಾಲೂಕು ವ್ಯಾಪ್ತಿಯಲ್ಲಿರುವ ಕ್ರೈಸ್ತ ಬಾಂಧವರು ಚರ್ಚ್‌ಗಳಿಗೆ ತೆರಳಿ ಸಾಮೂಹಿಕ ಪ್ರಾರ್ಥನೆ ಸಲ್ಲಿಸಿದರು. ಪರಸ್ಪರ ಶುಭಾಶಯಗಳನ್ನು ವಿನಿಮಯ ಮಾಡಿಕೊಂಡು ಕೇಕ್ ವಿತರಿಸಿ ಸಂತಸ ಹಂಚಿಕೊಂಡರು. ಕ್ರಿಸ್‌ಮಸ್ ಹಿನ್ನೆಲೆಯಲ್ಲಿ ಚರ್ಚ್‌ಗಳನ್ನು ವಿದ್ಯುತ್ ದೀಪಗಳಿಂದ ಅಲಂಕರಿಸಲಾಗಿತ್ತು.
ಚಾಮರಾಜನಗರ ತಾಲೂಕಿನ ಮಾದಾಪುರ, ಮಸಗಾಪುರ, ಭೋಗಾಪುರ, ದೊಡ್ಡರಾಯಪೇಟೆ, ನಾಗವಳ್ಳಿ ಸೇರಿದಂತೆ ಇತರೆ ಹಲವು ಕಡೆಗಳಲ್ಲಿ ಕ್ರೈಸ್ತ ಬಾಂಧವರು ಚರ್ಚ್‌ಗಳಿಗೆ ತೆರಳಿ ಪ್ರಾರ್ಥನೆ ಸಲ್ಲಿಸಿ ಹಬ್ಬದ ಶುಭಾಶಯ ವಿನಿಮಯ ಮಾಡಿಕೊಂಡರು.
ಚಾಮರಾಜನಗರದ ಕ್ಯಾಥೋಲಿಕ್ ಹಾಗೂ ಪ್ರೊಟೆಸ್ಟೆಂಟ್ ಪಂಥದವರು ಹೊಸ ಬಟ್ಟೆ ತೊಟ್ಟು ಆಯಾ ಚರ್ಚ್‌ಗಳಿಗೆ ಭೇಟಿ ನೀಡಿ ಯೇಸುವಿಗೆ ಸಾಮೂಹಿಕ ಪ್ರಾರ್ಥನೆ ಸಲ್ಲಿಸಿದರು.

# ತೆರಕಣಾಂಬಿಯಲ್ಲಿ ಶಾ ವಿರುದ್ಧ ಪ್ರತಿಭಟನೆ

**ಚಾಮರಾಜನಗರ:** ಸಂಸತ್ ನಲ್ಲಿ ಅಂಬೇಡ್ಕರ್ ಬಗ್ಗೆ ಅವಹೇ ಳನಕಾರಿ ಹೇಳಿಕೆ ನೀಡಿದ ಕೇಂದ್ರ ಗೃಹ ಸಚಿವ ಅಮಿತ್ ಶಾ ವಿರುದ್ಧ ಜನ ಸಂಗ್ರಾಮ ಪರಿಷತ್ ಸಂಘಟನೆ ಕಾರ್ಯಕರ್ತರು ಚಾಮರಾಜನಗರ ಜಿಲ್ಲೆಯ ಗುಂಡ್ಲುಪೇಟೆ ತಾಲ್ಲೂಕಿನ ತೆರಕಣಾಂಬಿಯಲ್ಲಿ ಪ್ರತಿಭಟನೆ ನಡೆಸಿದರು.
ಚಾಮರಾಜನಗರ ಜಿಲ್ಲೆಯ ಗುಂಡ್ಲುಪೇಟೆ ತಾಲ್ಲೂಕಿನ ತೆರಕಣಾಂಬಿಯ ಹುಂಡಿಯ ಕೊತ್ತಲವಾಡಿ ರಸ್ತೆಯಿಂದ ಹೊರಟ ಪ್ರತಿಭಟನಾಕಾರರು ಕೇಂದ್ರ ಸಚಿವ ಅಮಿತ್ ಶಾ ವಿರುದ್ಧ ಧಿಕ್ಕಾರದ ಘೋಷಣೆ ಯನ್ನು ಕೂಗಿ ಆಕ್ರೋಶ ಹೊರಹಾಕಿದರು.
ದೇವರನ್ನು ಸ್ತುತಿಸುವುದೇ ಉತ್ತಮ. ಇದರಿಂದ ಸ್ವರ್ಗ ಪ್ರಾಪ್ತಿಯಾಗುತ್ತದೆ ಎಂದು ಅಮಿತ್ ಶಾ ಅವರು ಡಾ.ಬಿ.ಆರ್.ಅಂಬೇಡ್ಕರ್ ಅವರ ಕುರಿತು ಲೇವಡಿ ಮಾಡಿರುವುದು ಬಹುಸಂಖ್ಯಾತ ಭಾವನಗಳೆ ಧಕ್ಕೆಯಾಗಿದೆ. ಕೂಡಲೇ ಪ್ರಧಾನಿ ನರೇಂದ್ರ ಮೋದಿ ಅವರು ಅಮಿತ್ ಶಾರನ್ನು ಸಂಪುಟದಿಂದ ಕೈಬಿಡಬೇಕು ಎಂದು ಆಗ್ರಹಿಸಿದರು.
ಇಡೀ ವಿಶ್ವವೇ ಗೌರವಿಸುವ ಅಂಬೇಡ್ಕರ್‌ರನ್ನು ಅಮಿತ್ ಶಾ ಅವರು ಅಪಮಾನಿಸುವ ಮೂಲಕ ದೇಶದ ಸಂವಿಧಾನವನ್ನೇ ವಿರೋಧಿಸುವ ಹೇಳಿಕೆ ನೀಡಿರುವುದು ಖಂಡನೀಯ. ಇವರ ವಿರುದ್ಧ ಸೂಕ್ತ ಕಾನೂನು ಕ್ರಮ ಜರುಗಿಸಬೇಕು ಎಂದು ಒತ್ತಾಯಿಸಿದರು.
ಪ್ರತಿಭಟನೆಯಲ್ಲಿ ಜನ ಸಂಗ್ರಾಮ ಪರಿಷತ್ ಕಾರ್ಯಕರ್ತರು ಸೇರಿದಂತೆ ತೆರಕಣಾಂಬಿ ಹೋಬಳಿಯ ವಿವಿಧ ಗ್ರಾಮಗಳ ಸಾರ್ವಜನಿಕರು ಮತ್ತು ದಲಿತ ಸಂಘಟನೆ ಪದಾಧಿಕಾರಿಗಳು ಭಾಗವಹಿಸಿದ್ದರು.



# ವಿಶ್ವವಿದ್ಯಾಲಯದ ಮಂಡಳಿಗೆ ಮಹಾಂತೇಶಗೌಡ ಪಾಟೀಲ ನೇಮಕ

**ಕೊಪ್ಪಳ:** ಬಾಗಲಕೋಟೆಯ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ಗೌರವಾನ್ವಿತ ಆಡಳಿತ ಮಂಡಳಿ ನಾಮನಿರ್ದೇಶನ ಸದಸ್ಯರಾಗಿ ಕೃಷಿ ಉದ್ಯಮಿ ಮಹಾಂತೇಶಗೌಡ.ಬ. ಪಾಟೀಲ ಅವರನ್ನು ನೇಮಕ ಮಾಡಿ ರಾಜ್ಯಪಾಲರು ಆದೇಶ ಮಾಡಿದ್ದಾರೆ.
ರಾಜ್ಯಪಾಲರಾದ ಥಾವರ್ಚಂದ್ ಗೆಹ್ಲೋಟ್ ಅವರ ಅನುಮೋದನೆ ಮೇರೆಗೆ ರಾಜ್ಯಪಾಲರ ಅಧೀನ ಕಾರ್ಯದರ್ಶಿ ಪ್ರಶಾಂತಕುಮಾರ್ ಅವರು ಮಹಾಂತೇಶಗೌಡ . ಬ.ಪಾಟೀಲ ಅವರನ್ನು ಮುಂದಿನ ಮೂರು ವರ್ಷದ ಅವಧಿಗೆ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ಗೌರವಾನ್ವಿತ ಆಡಳಿತ ಮಂಡಳಿಯ ಸದಸ್ಯರಾಗಿ ನೇಮಕ ಮಾಡಿ ಆದೇಶ ಮಾಡಿದ್ದಾರೆ. ನೂತನ ಸದಸ್ಯರಾಗಿ ನೇಮಕವಾದ ಮಹಾಂತೇಶ್ ಗೌಡ ಅವರಿಗೆ ಮಾಜಿ ಸಂಸದ ಸಂಗಣ್ಣ ಕರಡಿ ಸನ್ಮಾನ ಮಾಡಿ ಗೌರವಿಸಿ ಅಭಿನಂದಿಸಿದರು. ಈ ಸಂದರ್ಭದಲ್ಲಿ ತಮ್ಮ ನೇಮಕಕ್ಕೆ ಕಾರಣರಾದ ಸಿ ಎಂ ಸಿದ್ದರಾಮಯ್ಯ, ಡಿಸಿಎಂ ಡಿ ಕೆ ಶಿವಕುಮಾರ್ ಸೇರಿದಂತೆ ಜಿಲ್ಲೆಯ ಶಾಸಕರು, ಸಂಸತ್ ಸದಸ್ಯರು, ಉಸ್ತುವಾರಿ ಸಚಿವರು, ಇತರ ಮುಖಂಡರಿಗೆ ಕೃತಜ್ಞತೆ ತಿಳಿಸಿದರು.

# ಬೋನಿಗೆ ಬಿದ್ದ ಚಿರತೆ

ಚಾಮರಾಜನಗರ: ಚಾಮರಾಜನಗರ ಜಿಲ್ಲೆಯ ಗುಂಡ್ಲುಪೇಟೆ ತಾಲೂಕಿನ ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದ ಗುಂಡ್ಲುಪೇಟೆ ಬಫರ್‌ಜೋನ್ ವ್ಯಾಪ್ತಿಯ ಅಣ್ಣೂರುಕೇರಿ ಗ್ರಾಮದಲ್ಲಿ ಅರಣ್ಯ ಇಲಾಖೆ ಇರಿಸಿದ್ದ ಬೋನಿನಲ್ಲಿ ಗಂಡು ಚಿರತೆಯೊಂದು ಸೆರೆಯಾಗಿದೆ.
ಜಿಲ್ಲೆಯ ಗುಂಡ್ಲುಪೇಟೆ ತಾಲೂಕಿನ ಅಣ್ಣೂರುಕೇರಿ ಗ್ರಾಮದ ರೈತ ರಂಗಶೆಟ್ಟಿ ಎಂಬುವವರ ಜಮೀನಿನಲ್ಲಿ ಅರಣ್ಯ ಇಲಾಖೆ ಇರಿಸಿದ್ದ ಬೋನಿಗೆ ಸುಮಾರು 2ರಿಂದ 3 ವಯಸ್ಸಿನ ಗಂಡು ಚಿರತೆ ಮಂಗಳವಾರ ತಡರಾತ್ರಿ ಬಿದ್ದಿದೆ. ಜಮೀನು ಮಾಲೀಕರು ನಂತರ ನೋಡಲಾಗಿ ಅರಿವಿಗೆ ಬಂದಿದ್ದು, ಅರಣ್ಯ ಇಲಾಖೆಯ ಅಧಿಕಾರಿಗಳಿಗೆ ಮಾಹಿತಿ ನೀಡಿದ್ದಾರೆ. ನಂತರ ಇಲಾಖೆ ಅಧಿಕಾರಿಗಳು ಸ್ಥಳಕ್ಕೆ ಧಾವಿಸಿ



ಮುಂದಿನ ಕ್ರಮ ಕೈಗೊಂಡಿದ್ದಾರೆ. ನಿಟ್ಟುಸಿರು ಬಿಟ್ಟ ಜನತೆ: ಅಣ್ಣೂರುಕೇರಿ, ಕೋಡಹಳ್ಳಿ ಸುತ್ತಮುತ್ತಲ ರೈತರ ಜಮೀನುಗಳಲ್ಲಿ ಆಗಾಗ್ಗೆ ಕಾಣಿಸಿಕೊಳ್ಳುತ್ತಿದ್ದ ಚಿರತೆ ಮೇಕೆ, ಜಾನುವಾರುಗಳ ಮೇಲೆ ದಾಳಿ ನಡೆಸಿ ಕೊಂದು ಹಾಕುತ್ತಿತ್ತು. ಇದರಿಂದ ರೈತರು ರಾತ್ರಿ ವೇಳೆ ಜಮೀನುಗಳಿಗೆ ಹೋಗಲು ಹಿಂದೇಟು ಹಾಕುತ್ತಿದ್ದರು. ಬೇಸತ್ತಿದ್ದ ರೈತರ ಮನವಿ ಮೇರೆಗೆ ಅರಣ್ಯ ಇಲಾಖೆ ಇರಿಸಿದ್ದ ಬೋನಿಗೆ ಇದೀಗ ಚಿರತೆ ಬಿದ್ದಿದೆ. ಇದರಿಂದ ಈ ಭಾಗದ ರೈತರು ಹಾಗೂ ಜನರು ನಿಟ್ಟುಸಿರು ಬಿಟ್ಟಿದ್ದಾರೆ.

# ಡಿ.29ರಂದು 4ನೇ ಮೈಸೂರು ಅಂತಾರಾಷ್ಟ್ರೀಯ ಫಿಲ್ಮ್ ಫೆಸ್ಟಿವಲ್



**ಮೈಸೂರು:** ಡಿ.29ರಂದು 4ನೇ ಮೈಸೂರು ಅಂತಾರಾಷ್ಟ್ರೀಯ ಫಿಲ್ಮ್ ಫೆಸ್ಟಿವಲ್ 2024 ಆಯೋಜನೆ ಮಾಡಲಾಗಿದ್ದು ಇಂದು ಸ್ಯಾಂಡಲ್ ವುಡ್ ನ ಖ್ಯಾತ ಉದಯೋನ್ಮುಖ ನಟ ಮತ್ತು ರಂಗಭೂಮಿ ಕಲಾವಿದ ಡಾಲಿ ಧನಂಜಯ್ ಪೋಸ್ಟರ್ ಬಿಡುಗಡೆ ಮಾಡಿದರು.
ಡಿಸೆಂಬರ್ 29 ರಂದು ಮೇಕ್ ಸೊಸೈಟಿ ಸ್ಮೈಲ್ ಫೌಂಡೇಶನ್ ವತಿಯಿಂದ ಮೈಸೂರಿನ ಜೆ.ಕೆ ಮೈದಾನದಲ್ಲಿ ಬೆಳಗ್ಗೆ 9:00 ರಿಂದ ರಾತ್ರಿ 10ರವರೆಗೂ 4ನೇ ಮೈಸೂರು ಅಂತಾರಾಷ್ಟ್ರೀಯ ಫಿಲ್ಮ್ ಫೆಸ್ಟಿವಲ್ 2024 ಮತ್ತು ಮೊದಲ ಬಾರಿಗೆ ಚಿತ್ರಸಂತೆ ಆಯೋಜಿಸಲಾಗಿದ್ದು, ಇದರ ಪ್ರಚಾರದ ಪೋಸ್ಟರ್ ಅನ್ನುನಟ ಡಾಲಿ ಧನಂಜಯ್ ಬಿಡುಗಡೆಗೊಳಿಸಿ ಶುಭ ಹಾರೈಸಿದರು. ಸಾಂಸ್ಕೃತಿಕ ನಗರಿ ಮೈಸೂರಿನಲ್ಲಿ ಚಿತ್ರ ಸಂತೆ ನಡೆಯುತ್ತಿರುವುದು ಸಂತಸ ವಿಚಾರ ಎಂದು ಹರ್ಷ ವ್ಯಕ್ತಪಡಿಸಿ, ಹೆಚ್ಚಿನ ಕಲಾ ಪ್ರೇಮಿಗಳು ಆಗಮಿಸಿ ಯಶಸ್ವಿಗೊಳಿಸಬೇಕೆಂದು ಕರೆ ನೀಡಿದರು.
ನಂತರ ಮಾತನಾಡಿದ ಮೈಸೂರು ಅಂತರಾಷ್ಟ್ರೀಯ ಚಲನಚಿತ್ರ ಉತ್ಸವದ ಆಯೋಜಕ ರಂಜಿತಾ ಸುಬ್ರಮಣ್ಯ, ಕಳೆದ 4 ವರ್ಷದಿಂದ ಸಿನಿಸಂತೆ ಆಯೋಜಿಸುತ್ತಾ ಬಂದಿದ್ದು ಈ ವರ್ಷ ವಿಶೇಷವಾಗಿ ಸಾರ್ವಜನಿಕರಿಗೆ ಗಾಯನ ಸ್ಪರ್ಧೆ, ಮಕ್ಕಳಿಗೆ ಅಲಂಕಾರಿಕ ಹುಡುಗಿ ಸ್ಪರ್ಧೆ ಹಾಗೂ ಚಿತ್ರಕಲಾ ಸ್ಪರ್ಧೆ ಆಯೋಜಲಾಗುತ್ತಿದೆ. ಪ್ರತಿ ವಿಭಾಗದ ಮೂರು ಸ್ಪರ್ಧೆಯ ವಿಜೇತರಿಗೆ ಆಕರ್ಷಕ ಬಹುಮಾನ ನೀಡಲಾಗುವುದು ಹಾಗೂ ಸಿನಿ ಸಂತೆಯಲ್ಲಿ ವಿವಿಧ ವಸ್ತುಗಳ ಪ್ರದರ್ಶನ ಹಾಗೂ ಮಾರಾಟ ಮಳಿಗೆ ಗಳನ್ನು ತೆರೆಯಲಾಗುವುದು. ಹೆಚ್ಚಿನ ಮಾಹಿತಿಗಾಗಿ 6360959871/6364632425 ನಂಬರ್‌ಗೆ ಸಂಪರ್ಕಿಸಬಹುದು ಎಂದು ತಿಳಿಸಿದರು.
ಇದೇ ಸಂದರ್ಭದಲ್ಲಿ ಶ್ರೀ ದುರ್ಗಾ ಫೌಂಡೇಶನ್ ಅಧ್ಯಕ್ಷರಾದ ರೇಖಾ ಶ್ರೀನಿವಾಸ್, ಸಂಪರ್ಕಾಧಿಕಾರಿ ಶಂಕರ್ ಎಸ್‌ಎನ್, ಉದ್ಯಮಿ ಗಗನ್ ದೀಪ್, ಸಿನಿ ಸಂತೆ ನಿರ್ದೇಶಕಿ ಮತ್ತು ಸಂಸ್ಥಾಪಕಿ ಸಂಧ್ಯಾ ರಾಣಿ, ಐಶ್ವರ್ಯ ಜಿ ಪ್ರಸಾದ್, ಹರ್ಷ, ರೂಪ ಹಾಗೂ ಇನ್ನಿತರರು ಹಾಜರಿದ್ದರು.

# ವಾಜಪೇಯಿರವರ ಆರ್ದಶ ಸಮಾಜಕ್ಕೆ ಸದಾ ದಾರಿದೀಪ


**ಮಾಲೂರು:** ದೇಶದ ಅಜಾತಶತ್ರು ಸರಳ ವ್ಯಕ್ತಿತ್ವ ಪ್ರಸ್ತುತ ರಾಜಕಾರಣಿಗಳಿಗೆ ಮಾದರಿಯಾಗಿರುವ ದಿ.ಮಾಜಿ ಪ್ರಧಾನಮಂತ್ರಿಗಳಾದ ಅಟಲ್ ಬಿಹಾರಿ ವಾಜಪೇಯಿರವರ ವ್ಯಕ್ತಿತ್ವ, ಆರ್ದಶ ಸಮಾಜಕ್ಕೆ ಸದಾ ದಾರಿದೀಪವಾಗಿದೆ ಎಂದು ತಾಲೂಕು ಬಿಜೆಪಿ ಅಧ್ಯಕ್ಷ ಟಿ.ಬಿ ಕೃಷ್ಣಪ್ಪ ತಿಳಿಸಿದರು.
ಪಟ್ಟಣದ ಸರ್ಕಾರಿ ಸಾರ್ವಜನಿಕ ಆಸ್ಪತ್ರೆಯಲ್ಲಿ ಮಾಜಿ ಪ್ರಧಾನಿ ದಿವಂಗತ ಅಟಲ್ ಬಿಹಾರಿ ವಾಜಪೇಯಿ ಅವರ ಜನ್ಮ ಶತಮಾನೋತ್ಸವ ಪ್ರಯುಕ್ತ ಹೊರ ಹಾಗೂ ಒಳರೋಗಿಗಳಿಗೆ ಹಣ್ಣು ಹಂಪಲು ವಿತರಿಸಿ ಮಾತನಾಡಿದರು
ಅಜಾತಶತ್ರು ಅಭಿವೃದ್ಧಿಯ ಹರಿಕಾರ ರಾಷ್ಟದ ಅಭಿವೃದ್ಧಿಗೆ ಮಾಜಿ ಪ್ರಧಾನಿ ವಾಜಪೇಯಿ ರವರು ನೀಡಿರುವ ಕೊಡುಗೆ ಅಪಾರವಾದದ್ದು ಅವರ ಕನಸಿನ ಚತುಷ್ಪತ ಹೆದ್ದಾರಿ ರಸ್ತೆಗಳು ನನಸು ಮಾಡುವಲ್ಲಿ ಯಶಸ್ವಿಯಾದರು ಪ್ರಸ್ತುತ ದೇಶದಲ್ಲಿ ರಾಷ್ಟೀಯ ಹೆದ್ದಾರಿಗಳು ಒಂದು ರಾಜ್ಯದಿಂದ ಮತ್ತೊಂದು ರಾಜ್ಯವನ್ನು ಸಂಪರ್ಕಿಸುತ್ತೇವೆ ಈ ಹಿಂದೆ ಮುರಾರ್ಜಿ ದೇಸಾಯಿ ರವರು ಪ್ರಧಾನ ಮಂತ್ರಿಗಳಾಗಿದ್ದ ಅವಧಿಯಲ್ಲಿ ವಾಜಪೇಯಿ ರವರು
ವಿದೇಶಾಂಗ ಸಚಿವರಾಗಿ ಕಾರ್ಯನಿರ್ವಹಿಸಿದ ರೀತಿ ನಿಜಕ್ಕೂಭಾರತದ ಘನತೆಯನ್ನು ಎತ್ತಿಹಿಡಿಯುವಂತಹ ಆಗಿದ್ದು ಅವರ ಮಾತುಗಾರಿಕೆ ಸಂಸತ್ತಿನ ಒಳಗು ಮತ್ತು ಹೊರಗು ಮನ್ನಣೆ ಪಡೆದಿತ್ತು ಎಂದರು.
ಅಟಲ್ ಬಿಹಾರಿ ವಾಜಪೇಯಿ ರವರು ಪ್ರಧಾನ ಮಂತ್ರಿಗಳಾಗಿದ್ದ ಅವಧಿಯಲ್ಲಿ ಅವಿಶ್ವಾಸ ನಿರ್ಣಯ



ಎದುರಿಸಬೇಕಾಯಿತು. ಆ ಸಂದರ್ಭದಲ್ಲಿ ವಾಜಪೇಯಿರವರಿಗೆ ತಮ್ಮ ಸರ್ಕಾರದ ಬಹುಮತ ಸಾಬೀತು ಪಡಿಸಲು ಕೇವಲ ಒಂದೇ ಒಂದು ಮತ ಕಡಿಮೆ ಇತ್ತು. ವಾಜಪೇಯಿ ಆದರೆ ವಾಜಪೇಯಿ ರವರು ಒಂದು ಮತವನ್ನು ಖರೀದಿ ಮಾಡದೆ ಸತ್ವ ಹಾಗೂ ಸತ್ಯರಾಜಕಾರಣಕ್ಕಾಗಿ ತಮ್ಮ ಅಧಿಕಾರವನ್ನೇ ಬಿಟ್ಟುಕೊಟ್ಟರು ಇದು ದೇಶದ ಚರಿತ್ರೆಯಲ್ಲಿ ಇಂದಿಗೂ ಸಹ ಅಚ್ಚಳಿಯದೆ ಉಳಿದ ಘಟನೆಯಾಗಿದೆ ಎಂದರು.
1989ರ ಅವಧಿಯಲ್ಲಿ ನಡೆದ ಲೋಕಸಭೆ ಚುನಾವಣೆಯಲ್ಲಿ 524 ಸ್ಥಾನಗಳ ಪೈಕಿ ಬಿಜೆಪಿ ಗಳಿಸಿದ್ದು, ಕೇವಲ ಎರಡು ಸ್ಥಾನಗಳು ಮಾತ್ರ ಅಂತಹ ಸಂಕಷ್ಟ ಪರಿಸ್ಥಿತಿಯಲ್ಲಿಯೂ ಸಹ ಪಕ್ಷದ ಚುಕ್ಕಾಣಿಯನ್ನು ಹಿಡಿದು ಪಕ್ಷವನ್ನು ಬಲಪಡಿಸುವಲ್ಲಿ ವಾಜಪೇಯಿ ರವರು ಪಟ್ಟ ಶ್ರಮ ಎಂದಿಗೂ ಯಾರು ಮರೆಯುವಂತಹಹುದಲ್ಲ ವಾಜಪೇಯಿ ರವರು ನಂತರ ಒಟ್ಟು 10 ಬಾರತ ದೇಶದ ಸಂಸತ್ ಚುನಾವಣೆಯಲ್ಲಿ ಲೋಕಸಭೆಯನ್ನು ಪ್ರವೇಶಿಸಿ ಸುಧೀರ್ಘ ಕಾಲ ರಾಷ್ಟ್ರ ರಾಜಕಾರಣದಲ್ಲಿಮಿಂಚಿದರು ಇದು ಸಹ ದೇಶದಲ್ಲಿ ದಾಖಲೆಯಾಗಿದೆ. ವಾಜಪೇಯಿ ಅವರ ಆದರ್ಶಗಳು ಮತ್ತು ವ್ಯಕ್ತಿತ್ವ ಪ್ರಸ್ತುತ ರಾಜಕಾರಣಿಗಳಿಗೆ ದಾರಿದೀಪವಾಗಿದೆ. ಪ್ರಸ್ತುತ ರಾಜಕೀಯ ಕ್ಷೇತ್ರದಲ್ಲಿ ಕಲುಷಿತ ವಾತಾವರಣ ನಿರ್ಮಾಣಗೊಳ್ಳುತ್ತಿದೆ ಇದಕ್ಕೆ ಸಾಕ್ಷಿ ಇತ್ತೀಚಿಗೆ ನಡೆದ ಬೆಳಗಾವಿಯಲ್ಲಿ ನಡೆದ ಅಧಿವೇಶನವೇ ಸಾಕ್ಷಿಯಾಗಿದೆ ಎಂದರು.
ಅಟಲ್ ಬಿಹಾರಿ ವಾಜಪೇಯಿ ಅವರ ಆದರ್ಶಗಳನ್ನು ಅಳವಡಿಸಿಕೊಂಡಿರುವ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ದೇಶದ ಅಭಿವೃದ್ಧಿಗಾಗಿ ಹಗಲಿರಳು ಶ್ರಮಿಸುತ್ತಿದ್ದಾರೆ ಎಂದರು.
ರಾಷ್ಟೀಯ ಸ್ವಯಂ ಸೇವಾ ಸಂಘಕ್ಕೆ 100 ವರ್ಷಗಳು ತುಂಬಿರುವ ಹಿನ್ನೆಲೆಯಲ್ಲಿ ಕೋಲಾರ ಜಿಲ್ಲೆ, ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಕಾರ್ಯಕರ್ತರು ಜಿಲ್ಲೆಯ ಒಕ್ಕಲೇರಿ ಗ್ರಾಮ ಪಂಚಾಯಿತಿಯಿಂದ ಕೋಲಾರ ಜಿಲ್ಲಾ ಕೇಂದ್ರದ ವರೆಗೆ 15 ಕಿಲೋಮೀಟರ್ ಕಾಲ್ನಡಿಗೆ ಮೂಲಕ ತೆರಳಿ ರಾಷ್ಟೀಯ ಸ್ವಯಂ ಸೇವಾ ಸಂಘದ ಉದ್ದೇಶ ಹಾಗೂ ಇತಿಹಾಸದ ಬಗ್ಗೆ ಜಾಗೃತಿ ಮೂಡಿಸಲಾಗುವುದು ಎಂದರು.
ಈ ಸಂದರ್ಭದಲ್ಲಿ ಪುರಸಭಾ ಸದಸ್ಯರಾದ ಅನಿತಾ ನಾಗರಾಜ್, ವೆಂಕಟೇಶ್, ಶ್ರೀನಿವಾಸ್, ಜಿ.ಪಂ.ಮಾಜಿ ಸದಸ್ಯ ಚಿನ್ನಸ್ವಾಮಿಗೌಡ ಮುಖಂಡರಾದ ಮುನಿಸ್ವಾಮಿ ಗೌಡ, ಕ್ಷೇತ್ರನಹಳ್ಳಿ ರಾಮಕೃಷ್ಣಪ್ಪ, ಕೆಪಿ ನಾರಾಯಣಸ್ವಾಮಿ, ಮಡಿವಾಳ ಚಂದ್ರಶೇಖರ್, ಗಾಂಧಿವೃತ್ತ ರಾಮಮೂರ್ತಿ, ಕೆಂಪಣ್ಣ, ಬೆಳ್ಳಾವಿ ಸೋಮಣ್ಣ, ದೊಡ್ಡಿ ರಾಜಪ್ಪ, ವೆಂಕಟೇಶ್ , ಚಲಪತಿ, ಮುನಿಕೃಷ್ಣ, ಮಹೇಶ್, ಕಿರಣ್ ಇನ್ನಿತರರು ಹಾಜರಿದ್ದರು.

# ಮಲೆ ಮಹದೇಶ್ವರಬೆಟ್ಟದ ಮಾದಪ್ಪನ ಹುಂಡಿಯಲ್ಲಿ 2.67 ಕೋಟಿ ಸಂಗ್ರಹ

**ಚಾಮರಾಜನಗರ:** ಚಾಮರಾಜನಗರ ಹನೂರು ತಾಲ್ಲೂಕಿನ ಮಲೆ ಮಹದೇಶ್ವರಬೆಟ್ಟದ ಮಾದಪ್ಪನ ಹುಂಡಿಗಳಲ್ಲಿ ಕಳೆದ 34 ದಿನಗಳ ಅವಧಿಯಲ್ಲಿ 2.67 ಕೋಟಿ ರೂ. ಸಂಗ್ರಹವಾಗಿದೆ.
ಚಾಮರಾಜನಗರ ಜಿಲ್ಲೆಯ ಮಹದೇಶ್ಬೆವರ ಬೆಟ್ಟದ ಬಸ್ ನಿಲ್ದಾಣದ ಬಳಿಯ ವಾಣಿಜ್ಯ ಸಂಕೀರ್ಣದಲ್ಲಿ ಸಾಲೂ ರು ಬೃಹನ್ ಮಠದ ಅಧ್ಯಕ್ಷರಾದ ಶ್ರೀ ಶಾಂತ ಮಲ್ಲಿಕಾರ್ಜುನ ಸ್ವಾಮೀಜಿ ಸಮ್ಮುಖದಲ್ಲಿ ಹುಂಡಿಗಳನ್ನು ತೆರೆಯಲಾಯಿತು.
ಬಳಿಕ ಸಿಸಿ ಕ್ಯಾಮೆರಾ ಕಣ್ಣಾವ ಲಿನಲ್ಲಿ ಎಣಿಕೆ ಕಾರ್ಯ ಪ್ರಾರಂಭಿಸಲಾಯಿತು. ಎಣಿಕೆ ಕಾರ್ಯವು ರಾತ್ರಿ 8 ಗಂಟೆಯವರೆಗೂ ನಡೆಯಿತು. ಕಾರ್ತಿಕ ಮಾಸ,ಬ ಭಟ್ಟಿ ಅಮಾ ವಾಸ್ಯೆ, ಸರ್ಕಾರಿ ರಜಾ ದಿನ, ಶಬರಿಮಲೆ, ಓಂ ಶಕ್ತಿ ಯಾತ್ರಾರ್ಥಿಗಳು ಹಾಗೂ ರಾಜ್ಯ
ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಗಳಲ್ಲೊಂದಾದ ಶಕ್ತಿ ಯೋಜನೆಯ ಉಚಿತ ಪ್ರಯಾಣದ ಹಿನ್ನೆಲೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ದೇವಸ್ಥಾನಕ್ಕೆ ಭೇಟಿ ನೀಡಿದ್ದರಿಂದ ಹರಕೆಯ ರೂಪದಲ್ಲಿ 2,67,99,396 ನಗದು 73 ಗ್ರಾಂ ಚಿನ್ನ ಹಾಗೂ 3.900ಗ್ರಾಂ ಬೆಳ್ಳಿ ಪದಾರ್ಥಗಳನ್ನು ಹುಂಡಿಗೆ ಹಾಕಿದ್ದಾರೆ.
ಅಲ್ಲದೇ ಇ ಹುಂಡಿಯಿಂದ 33.9258 ರೂ., ಒಮಾನ್‌ನ 10 ನೋಟುಗಳು ಸೇರಿದಂತೆ 3 ವಿದೇಶಿ ಕರೆನ್ಸಿಗಳು, ಚಲಾವಣೆಯಲ್ಲಿ ಇಲ್ಲದ 2000 ಮುಖಬೆಲೆಯ 21 ನೋಟುಗಳನ್ನು ಹುಂಡಿಯಲ್ಲಿ ಹಾಕಿದ್ದಾರೆ.
ಪ್ರಾಧಿಕಾರದ ಕಾರ್ಯದರ್ಶಿ ಎ.ಇ.ರಘು, ಉಪ ಕಾರ್ಯದರ್ಶಿ ಚಂದ್ರಶೇಖರ್, ಲೆಕ್ಕ ಪತ್ರ ಸಲಹೆಗಾರರಾದ ನಾಗೇಶ್, ಲೆಕ್ಕ ಅಧೀಕ್ಷಕ ಗುರುಮಲ್ಲಯ್ಯ, ಜಿಲ್ಲಾಡಳಿತ ಕಚೇರಿಯ ಸಿಬ್ಬಂದಿ ಹರೀಶ್, ಬ್ಯಾಂಕ್ ಆಫ್ ಬರೋಡ ನೌಕರರು ಹಾಗೂ ಪ್ರಾಧಿಕಾರದ ಸಿಬ್ಬಂದಿ ಎಣಿಕೆ ಕಾರ್ಯದಲ್ಲಿ ಭಾಗವಹಿಸಿದ್ದರು.



# ಜ.1ಕ್ಕೆ ಭಾರತ, ಮನುಸ್ಮೃತಿ ನಾಟಕ




**ಮಾಲೂರು:** ಭೀಮಾ ಕೋರೇಂಗಾವ್ ವಿಜಯೋತ್ಸವ ಅಂಗವಾಗಿ ಪ್ರಸ್ತುತ ಭಾರತ, ಮನುಸ್ಮೃತಿ ಎಂಬ ಸಾಮಾಜಿಕ ಪರಿವರ್ತನೆಯ ನಾಟಕವನ್ನು ಕರ್ನಾಟಕ ದಲಿತ ಸಂಘರ್ಷ ಸಮಿತಿ ಪ್ರೊ.ಬಿ.ಕೃಷ್ಣಪ್ಪ ಬಣದ ವತಿಯಿಂದ ಜ.1 ರಂದು ಆಯೋಜಿಸಿಲಾಗಿದೆ ಎಂದು ತಾಲ್ಲೂಕು ಸಂಚಾಲಕ ಎಸ್.ಎಂ.ವೆಂಕಟೇಶ್ ತಿಳಿಸಿದರು.
ಪಟ್ಟಣದ ಕಾರ್ಯನಿರತ ಪತ್ರಕರ್ತರ ಭವನದಲ್ಲಿ ಜಿಲ್ಲಾ ಸಂಘಟನಾ ಸಂಚಾಲಕ ಚವ್ವೇನಹಳ್ಳಿ ವಿಜಿ ಅವರ ಅಧ್ಯಕ್ಷತೆಯಲ್ಲಿ ಪತ್ರಿಕಾಗೋಷ್ಠಿಯಲ್ಲಿ ಭಾಗವಹಿಸಿ ಮಾತನಾಡಿದರು.
ಕರ್ನಾಟಕ ದಲಿತ ಸಂಘರ್ಷ ಸಮಿತಿವತಿಯಿಂದ ನಾಟಕವನ್ನು ಜ.1–2025ರ ಬುಧವಾರ 4.30 ಗಂಟೆಗೆ ಪಟ್ಟಣದ ಮಹಾರಾಜ ವೃತ್ತದಲ್ಲಿ ಭೀಮಾ ಕೋರೇಂಗಾವ್ ವಿಜಯೋತ್ಸವದ ಅಂಗವಾಗಿ ಪ್ರಸ್ತುತ ಭಾರತದ ಸಂವಿಧಾನತ/ ಮನುಸ್ಮೃತಿ ಎಂಬಾ ಸಾಮಾಜಿಕ ಪರಿವರ್ತನೆಯ ನಾಟಕವನ್ನು ಆಯೋಜಿಸಲಾಗಿದ್ದು ಕಾರ್ಯಕ್ರಮಕ್ಕೆ ತಾಲ್ಲೂಕಿನ ದಲಿತ ಪರ, ಕನ್ನಡ ಪರ, ರೈತಪರ ಸಂಘಟನೆಗಳು, ಚಿಂತಕರು, ಸಾಹಿತಿಗಳು, ಅಂಬೇಡ್ಕರ್ ಅಭಿಮಾನಿಗಳು ಪಕ್ಷಾತೀತ, ಜಾತ್ಯಾತೀತವಾಗಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಮನವಿ ಮಾಡಿದರು.
ಈ ಸಂದರ್ಭದಲ್ಲಿ ಜಿಲ್ಲಾ ಸಂಘಟನಾ ಸಂಚಾಲಕ ಚವ್ವೇನಹಳ್ಳಿ ವಿಜಿ, ಡಿ.ಎನ್. ನಾರಾಯಣಸ್ವಾಮಿ, ನೀಲಕಂಠ ಅಗ್ರಹಾರ ಶ್ಯಾಮಣ್ಣ, ಟೇಕಲ್ ಹೋಬಳಿ ಅಧ್ಯಕ್ಷ ಉಳ್ಳೇರಹಳ್ಳಿ ಮುನಿರಾಜು, ಮಾಸ್ತಿ ಹೋಬಳಿ ಅಧ್ಯಕ್ಷ ವರದಾಪುರ ನಾರಾಯಣಸ್ವಾಮಿ, ಮಾಸ್ತಿ ವೆಂಕಟೇಶಪ್ಪ, ತಿರುಮಲೇಶ್, ಯಶವಂತಪುರ ಮುನಿರಾಜು, ಗಾಂಧಿವೃತ್ತಬಾಬು, ಬಂಡಹಟ್ಟಿ ನಾರಾಯಣಸ್ವಾಮಿ, ಮೇಲನೂರು ಚಲಪತಿ, ರಾಂಪುರ ವೆಂಕಟೇಶ್,ಅಂಗಶೆಟ್ಟಹಳ್ಳಿನಾರಾಯಣಸ್ವಾಮಿ, ಬಂಡಹಟ್ಟಿ ನಾರಾಯಣಸ್ವಾಮಿ ಸೇರಿದಂತೆ ಕಾರ್ಯಕರ್ತರು ಹಾಜರಿದ್ದರು.

# ಯಾವುದೇ ಅಹಿತಕರ ಘಟನೆಗಳು ಸಂಭವಿಸದಿರಲಿ

**ಮುಳಬಾಗಿಲು:** ತಾಲೂಕಿನಲ್ಲಿ 2025 ವರ್ಷದಲ್ಲಿ ರೈತಾಪಿ ವರ್ಗದಲ್ಲಿ ಒಳ್ಳೆಯ ಮಳೆಯಾಗಿ ಒಳ್ಳೆಯ ಬೆಳೆಯಾಗಿ ರೈತರು ಚೆನ್ನಾಗಿರಲಿ ಹಾಗೂ ನಮ್ಮ ತಾಲೂಕಿನಲ್ಲಿ ಯಾವುದೇ ಅಹಿತಕರ ಘಟನೆಗಳು ಸಂಭವಿಸದೆ ಜನರು ಒಳ್ಳೆಯ ಅರೋಗ್ಯದಿಂದ ಉತ್ತಮವಾಗಿ ಜೀವನ ನಡೆಸಲಿ ಎಂದು ಮುಳಬಾಗಿಲು ತಾಲೂಕು ಆವಣಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಎಂ . ಸಿ. ನೀಲಕಂಠೇಗೌಡ ತಾಲೂಕಿನ ಜನತೆಗೆ ಶುಭ ಹಾರೈಸಿದರು.
ನಗರದ ಹೊರವಲಯದ ಕಾಂಗ್ರೆಸ್ ಕಚೇರಿಯಲ್ಲಿ ಕಾಂಗ್ರೆಸ್ ಪಕ್ಷದಿಂದ 2025 ರ ನೂತನ ವರ್ಷದ ಕ್ಯಾಲೆಂಡರ್ ಬಿಡುಗಡೆ ಕಾರ್ಯ ಕ್ರಮದಲ್ಲಿ ಭಾಗವಹಿಸಿ ಮಾತನಾಡಿ ತಾಲೂಕಿನ ಎಲ್ಲಾ ಗ್ರಾಮಗಳಿಗೂ ಹಾಗೂ ಅಂಗಡಿಗಳಿಗೆ ಕಾಂಗ್ರೆಸ್ ಪಕ್ಷದ ಕ್ಯಾಲೆಂಡರ್ ವಿತರಣೆ ಮಾಡುವ ಮೂಲಕ ಕಾಂಗ್ರೆಸ್ ಪಕ್ಷವನ್ನು ಇನ್ನಷ್ಟು ಬಲಪಡಿಸಿ ಮುಂದಿನ ದಿನಗಳಲ್ಲಿ ನಡೆಯುವ ಚುನಾವಣೆಗಳಲ್ಲಿ ನಮ್ಮ ಅಭ್ಯರ್ಥಿಗಳನ್ನು ಹೆಚ್ಚು ಮತಗಳನ್ನು ಪಡೆಯುವ ಮೂಲಕ ಕೆಲಸ ಮಾಡುತ್ತೇವೆ ಎಂದು ತಿಳಿಸಿದರು.
ನಮ್ಮ ಕೋಲಾರ ಶಾಸಕರಾದ ಕೊತ್ತೂರ್ ಮಂಜುನಾಥ್ ಮತ್ತು 2023ರ ಕಾಂಗ್ರೆಸ್ ಪರಜಿತ ಅಭ್ಯರ್ಥಿ ವಿ. ಆದಿನಾರಾಯಣರವರ ಮಾರ್ಗದರ್ಶನದಲ್ಲಿ ಕಾಂಗ್ರೆಸ್ ಪಕ್ಷದ ಕ್ಯಾಲೆಂಡರ್ ನಲ್ಲಿ ನಮ್ಮ ಪಕ್ಷದ ಗ್ಯಾರಂಟಿಗಳ ಯೋಜನೆಗಳನ್ನು ಮುದ್ರಿಸಿ ನಮ್ಮ ತಾಲೂಕಿನ ತಾಯಂದಿರಿಗೆ ತಿಳಿಸುವ ಕಾರ್ಯ ಮಾಡುತಿದ್ದೇವೆ ಎಂದು ಹಾಗೂ ಮುಂದಿನ ದಿನಗಳಲ್ಲಿ ರಾಜ್ಯ ಮತ್ತು ನಮ್ಮ ತಾಲ್ಲೂಕಿನಲ್ಲಿ ನಮ್ಮ ಪಕ್ಷದಲ್ಲಿ ರಾಜಕೀಯ ಬದಲಾವಣೆಗಳು ಆಗುತ್ತೆ ಎಂದು ತಿಳಿಸಿದರು.
ಈ ಸಂಧರ್ಭದಲ್ಲಿ ಟೌನ್ ಬ್ಲಾಕ್ ಅಧ್ಯಕ್ಷ ಅಮಾನುಲ್ಲಾ, ಆರ್. ಆರ್. ರಾಜೇಂದ್ರ ಗೌಡ, ಗುಜ್ಜನಹಳ್ಳಿ ಮಂಜುನಾಥ್, ಜಮ್ಮನಹಳ್ಳಿ ಕೃಷ್ಣಪ್ಪ, ಆವಣಿ ಕೃಷ್ಣಪ್ಪ, ತ್ರಿವೇಣಮ್ಮ, ವಿವೇಕಾನಂದ ಗೌಡ, ಎಂ.ಗೊಲ್ಲಹಳ್ಳಿ ಉದಯಕುಮಾರ್ ರೆಡ್ಡಿ, ಹೆಬ್ಬಣಿ ವೇಣುಗೋಪಾಲ್ ರೆಡ್ಡಿ, ಹೆಚ್.ಬೈಪ್ಪನಹಳ್ಳಿ ಶಂಕರ್ ರೆಡ್ಡಿ, ಮೆಕಾನಿಕ್ ಶ್ರೀನಿವಾಸ್, ಹೆಚ್.ಗೊಲ್ಲಹಳ್ಳಿ ವೆಂಕಟೇಶ್, ಜಬಿಉಲ್ಲಾ, ತಾಯಲೂರು ಮುರಳಿ, ಹರೀಶ್ ಹಾಗೂ ಕಾಂಗ್ರೆಸ್ ಹಿರಿಯ ಮುಖಂಡರು, ಕಾರ್ಯಕರ್ತರು ಭಾಗವಹಿಸಿದ್ದರು.

# ಸುಳ್ವಾಡಿಯಲ್ಲಿ ಸಂಭ್ರಮದ ಕ್ರಿಸ್‌ಮಸ್ ಆಚರಣೆ



**ಚಾಮರಾಜನಗರ:** ಜಿಲ್ಲೆಯ ಹನೂರು ತಾಲೂಕಿನ ಸುಳ್ವಾಡಿ ಗ್ರಾಮದಲ್ಲಿ ಕ್ರಿಸ್‌ಮಸ್ ಹಬ್ಬವನ್ನು ಸಡಗರ ಸಂಭ್ರಮ ದಿಂದ ಆಚರಿಸಲಾಯಿತು. ಮಾರ್ಟಳ್ಳಿ ಸುತ್ತಮುತ್ತಲಿನ ಗ್ರಾಮಗಳಲ್ಲಿ ಪವಿತ್ರ ಹಬ್ಬ ಕ್ರಿಸ್ಮಸ್ ಸಂಭ್ರಮ ಮನೆ ಮಾಡಿದ್ದು, ವಿವಿಧ ಚರ್ಚ್‌ಗಳಲ್ಲಿ ಮಂಗಳವಾರ ರಾತ್ರಿಯಿಂದಲೇ ಕ್ರಿಸ್ಮಸ್ ಆಚರಣೆ ನಡೆಯಿತು.

ಕ್ರಿಸ್ಮಸ್ ಹಿನ್ನೆಲೆಯಲ್ಲಿ ಸುಳ್ವಾಡಿ ಸಂತ ಫಾತಿಮಾ ಮಾತೆಯ ಚರ್ಚ್‌ನಲ್ಲಿ ಮಂಗಳವಾರ ರಾತ್ರಿ 11ಕ್ಕೆ ಹಾಡುಗಳೊಂದಿಗೆ ಕಾರ್ಯಕ್ರಮ ಆರಂಭಗೊಂ ಡಿತು. ಬಳಿಕ 11.30ರಿಂದ ಜಾಗರಣೆ ಕ್ರಿಸ್ಮಸ್ ಬಲಿಪೂಜೆ ನಡೆಯಿತು. ರಾತ್ರಿ 12 ಗಂಟೆಗೆ ಬಾಲ ಯೇಸುವಿನ ಮೆರವಣಿಗೆ ಮೂಲಕ ಗೋದಲಿಯಲ್ಲಿ ಪ್ರತಿಷ್ಠಾಪನೆ ಮಾಡಲಾಯಿತು. ಸುಳ್ವಾಡಿ ಚರ್ಚ್‌ನ ಧರ್ಮಗುರು ಫಾದರ್ ಟೆನ್ನಿ ಕುರಿಯನ್ ನೇತೃತ್ವದಲ್ಲಿ ಪೂಜಾ ವಿಧಿ ವಿಧಾನಗಳು ನೆರವೇರಿದವು. ನಂತರ ಎಲ್ಲರಿಗೂ ಕೇಕ್, ಸಿಹಿ ಹಂಚಿ ಹಬ್ಬದ ಶುಭಾಷಯಗಳ ವಿನಿಮಯ ನಡೆಯಿತು.ಕ್ರಿಸ್‌ಮಸ್ ಹಬ್ಬದ ಹಿನ್ನೆಲೆಯಲ್ಲಿ ಮಾರ್ಟಳ್ಳಿ ಸುತ್ತಮುತ್ತಲಿನ ಚರ್ಚ್‌ಗಳು ಸಿಂಗಾರಗೊಂಡಿದ್ದು, ಮಂಗಳವಾರ ರಾತ್ರಿಯಿಂದಲೇ ಚರ್ಚ್‌ಗಳಲ್ಲಿ ವಿಶೇಷ ಪ್ರಾರ್ಥನೆ ನಡೆಯಿತು. ಕ್ರಿಸ್‌ಮಸ್ ಹಬ್ಬದ ಹಿನ್ನೆಲೆಯಲ್ಲಿ ಗ್ರಾಮದ ಚರ್ಚ್‌ಗಳು ವಿದ್ಯುತ್ ದೀಪಗಳಿಂದ ಕಂಗೊಳಿಸಿದವು.

# ಕಾನೂನು ಕ್ರಮ ಕೈಗೊಳ್ಳಲಾಗುವುದು:ಎಚ್ಚರಿಕೆ



**ಶಿಡ್ಲಘಟ್ಟ:** ಈ ಮುಂಗಾರು ಹಂಗಾಮಿನಲ್ಲಿ ಬಿತ್ತನೆ ಮಾಡಿರುವ ರಾಗಿ ಬೆಳೆಯನ್ನು ಬಹುತೇಕ ರೈತರು ಕೂಲಿ ಆಳುಗಳ ಅಭಾವದಿಂದ ಯಂತ್ರಗಳ ಮೂಲಕ ಕಟಾವು ಮಾಡುತ್ತಿದ್ದು, ಖಾಸಗಿ ಕಟಾವು ಯಂತ್ರಗಳ ಮಾಲೀಕರು ರೈತರಿಂದ ಪ್ರತಿ ಗಂಟೆಗೆ 3 ಸಾವಿರದ 500 ರೂ.ರಿಂದ 4 ಸಾವಿರ ರೂ.ಗಳ ವರೆಗೆ ಬಾಡಿಗೆ ದರ ನಿಗದಿಪಡಿಸುತ್ತಿರುವ ಬಗ್ಗೆ ದೂರು ಬಂದಿದ್ದು, ಈ ಕುರಿತಾಗಿ ಈಗಾಗಲೇ ಜಿಲ್ಲಾಧಿಕಾರಿ ಅವರಿಂದ ನಿರ್ದೇಶನ ಬಂದಿದೆ, ರಾಗಿ ಕಟಾವು ಯಂತ್ರಕ್ಕೆ ಪ್ರತಿ ಗಂಟೆಗೆ 2,700 ರೂ. ಮೀರದಂತೆ ಬಾಡಿಗೆ ನಿಗದಿಪಡಿಸಿರುವರು, ತಪ್ಪಿದ್ದಲ್ಲಿ ರಾಗಿ ಕಟಾವು ಯಂತ್ರದ ಮಾಲೀಕರ ವಿರುದ್ಧ ವಿಪತ್ತು ನಿರ್ವಹಣೆ ಕಾಯಿದೆ 2005 ರ ಪ್ರಕಾರ ಕಾನೂನು ಕ್ರಮ ಕೈಗೊಳ್ಳಲಾಗುವುದೆಂದು ಕೃಷಿ ಇಲಾಖೆ ಸಹಾಯಕ ನಿರ್ದೇಶಕರಾದ ಪಿ.ರವಿ ಅವರು ಎಚ್ಚರಿಕೆ ನೀಡಿದ್ದಾರೆ.

# ಯುವ ರೈತ ರತ್ನ ಪ್ರಶಸ್ತಿ ಪ್ರಧಾನ

**ನಾಗಮಂಗಲ:** ನಾಗಮಂಗಲದಲ್ಲಿ ರಾಷ್ಟ್ರೀಯ ರೈತ ದಿನಾಚರಣೆ ಪ್ರಯುಕ್ತ ಸಾವಯುವ ಕೃಷಿ ಮೇಳ ಮತ್ತು ಯುವ ರೈತ ರತ್ನ ಪ್ರಶಸ್ತಿ ಪ್ರಧಾನ ಸಮಾರಂಭವನ್ನು ಆಯೋಜನೆ ಮಾಡಲಾಗಿದೆ.

ನಾಗಮಂಗಲದಲ್ಲಿ ಕರ್ನಾಟಕ ಯುವ ರೈತ ಸೇನೆ ಜಿಲ್ಲಾ ಕೃಷಿ ಮತ್ತು ತೋಟಗಾರಿಕೆ ಸಹಕಾರದೊಂದಿಗೆ ಡಿ. 27 28 29ರಂದು ಮೂರು ದಿನಗಳ ಕಾಲ ನಾಗಮಂಗಲದ ಬಡಗೋಡಮ್ಮ ದೇವಸ್ಥಾನದ ಆವರಣದಲ್ಲಿ ಏರ್ಪಡಿಸಲಾಗಿದೆ.

ಇದೇ ಸಂದರ್ಭದಲ್ಲಿ ಕೃಷಿ ಪೂರಕವಾದ ಸಾವಯುವ ಕೃಷಿ ಉತ್ಪನ್ನಗಳ ಮಾರಾಟ ಮಳಿಗೆಗಳನ್ನು ತೆರೆಯಲಾಗುತ್ತದೆ ರೈತರು ಇದರ ಸದುಪಯೋಗ ಪಡಿಸಿಕೊಳ್ಳುವಂತೆ ಆಯೋಜಕರು ತಿಳಿಸಿದ್ದಾರೆ.

# ಪದಾಧಿಕಾರಿಗಳ ನೇಮಕ

ಚಾಮರಾಜನಗರ: ಜಿಲ್ಲಾ ದಲಿತ ಸಾಹಿತ್ಯ ಪರಿಷತ್ತಿನ 2025 ನೇ ಸಾಲಿನ ನೂತನ ಪದಾಧಿಕಾರಿಗಳನ್ನು ಈ ಕೆಳಕಂಡಂತೆ ನೇಮಕ ಮಾಡಲಾಗಿದೆ ಎಂದು ಜಿಲ್ಲಾ ದಲಿತ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಸಿಎಂ ನರಸಿಂಹಮೂರ್ತಿ ತಿಳಿಸಿದ್ದಾರೆ.

ಗೌರವ ಸಲಹೆಗಾರರು: ಡಾ. ಮೂಡ್ನಾಕೂಡು ಚಿನ್ನಸ್ವಾಮಿ, ಮಹಾದೇವ ಶಂಕನಪುರ ಅಧ್ಯಕ್ಷರು: ಸಿ.ಎಂ. ನರಸಿಂಹಮೂರ್ತಿ, ಉಪಾಧ್ಯಕ್ಷರು: ಡಾ.ಲಕ್ಷ್ಮೀ ಪ್ರೇಮ್ ಕುಮಾರ್, ಗೋವಿಂದರಾಜು ಕನ್ನಡ ಪುಸ್ತಕ ಮಳಿಗೆ ಪ್ರಧಾನ ಕಾರ್ಯದರ್ಶಿ: ಬಸವಣ್ಣ ಮೂಕಹಳ್ಳಿ ಸಂಘಟನಾ ಕಾರ್ಯದರ್ಶಿ: ಅಜಯ್ ಕುಮಾರ್ ಗುಂಬಳ್ಳಿ ಸಹ ಕಾರ್ಯದರ್ಶಿ: ಕೃಷ್ಣಮೂರ್ತಿ ಚಂಗಚಹಳ್ಳಿ, ಸಾಹಿತ್ಯ ಸಲಹೆಗಾರರು: ಡಾ. ಹೆಚ್ ಎಸ್. ಆನಂದ್ ಕುಮಾರ್,ಡಾ. ಎನ್ ಕೆ ದಿಲೀಪ್ ಕುಮಾರ್ ಖಜಾಂಚಿ: ರಂಗನಾಥ್, ಕಾನೂನು ಸಲಹೆಗಾರರು: ಕಾಳಸ್ವಾಮಿ ಗುಂಡ್ಲುಪೇಟೆ, ನಿರ್ದೇಶಕರು: ಡಾ. ಕೃಷ್ಣಕುಮಾರ್, ಡಾ. ಶಿವರಾಜು ಬೂದಿತಿಟ್ಟು, ಸಿ ಕೆ ಮಂಜುನಾಥ್, ಜಿ ರಾಜಪ್ಪ ರಾಮಸಮುದ್ರ, ರಾಜಶೇಖರ್ ಬಸವನಪುರ, ಶಿವಕುಮಾರ್ ಕೆಂಪನಪುರ, ಕಾಳಿಂಗ ಸ್ವಾಮಿ ಸಿದ್ದಾರ್ಥ, ಚಾಮರಾಜನಗರ ತಾಲೂಕು ಅಧ್ಯಕ್ಷರು: ಶಿವಕುಮಾರ್ ಸರಗೂರು, ಕೊಳ್ಳೇಗಾಲ ತಾಲೂಕು ಅಧ್ಯಕ್ಷರು: ಡಾ. ಕವಿತಾ ಡಿಎಲ್, ಯಳಂದೂರು ತಾಲೂಕು ಅಧ್ಯಕ್ಷರು: ಬಳೆಪೇಟೆ ಪ್ರಕಾಶ್, ಗುಂಡ್ಲುಪೇಟೆ ತಾಲೂಕು ಅಧ್ಯಕ್ಷರು: ಕೆ ಯೋಗೇಶ್, ಹನೂರು ತಾಲೂಕು ಅಧ್ಯಕ್ಷರು: ಲಿಂಗರಾಜು

ಮಹಿಳಾ ಘಟಕದ ಜಿಲ್ಲಾಧ್ಯಕ್ಷರು: ಡಾ.ಪ್ರೇಮಾ, ವಿದ್ಯಾರ್ಥಿ ಘಟಕದ ಜಿಲ್ಲಾಧ್ಯಕ್ಷರು: ವಾಸು ಹೊಂಡರಬಾಳುರವರುಗಳು ನೇಮಕಗೊಂಡಿದ್ದಾರೆ ಎಂದು ನರಸಿಂಹಮೂರ್ತಿ ತಿಳಿಸಿದ್ದಾರೆ.

# ಕೃಷಿ ಪತ್ತಿನ ಸಹಕಾರಿ ಸಂಘಕ್ಕೆ ನಿರ್ದೇಶಕರ ಅವಿರೋಧ ಆಯ್ಕೆ

**ಕುಕನೂರು:** ತಾಲೂಕಿನ ಬಳಗೇರಿಯ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಕ್ಕೆ 12 ಜನ ನಿರ್ದೇಶಕರನ್ನು ಅವಿರೋಧವಾಗಿ ಆಯ್ಕೆ ಮಾಡಲಾಗಿದೆ ಎಂದು ಚುನಾವಣೆ ಅಧಿಕಾರಿ ಶರಣಪ್ಪ ವಿರಾಪುರ ತಿಳಿಸಿದ್ದಾರೆ.

ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘದ ನೂತನ ಆಡಳಿತ ಮಂಡಳಿ ನಿರ್ದೇಶಕರಾಗಿ ಮಲ್ಲಪ್ಪ ಅಣ್ಣಿಗೇರಿ, ಹನುಮರಡ್ಡಿ ರಡ್ಡೇರ್, ಗುಡದಪ್ಪ ಕಮತರ, ಯಲ್ಲಪ್ಪ ಹಳ್ಳಿಗುಡಿ, ಶಿವಪುತ್ರಪ್ಪ ಕರೇಗೌಡ್ರ, ಆಶಾ ಮೇಘರಾಜ್ ಬಳಗೇರಿ, ವೀರಮ್ಮ ಅಂಗಡಿಕಾರ, ಹನಮವ್ವ ಚಾಕರಿ, ಮುಕ್ಕಣ್ಣ ಕನಕಗಿರಿ, ಈರಪ್ಪ ಹಿರೇಮನಿ, ಭೀಮಪ್ಪ ತಳವಾರ್, ದೊಡ್ಡಪ್ಪ ಕೋಮಾರ ಈ 12 ಜನ ನಿರ್ದೇಶಕರು ಅವಿರೋದವಾಗಿ ಆಯ್ಕೆಯಾದವರು. ಆಯ್ಕೆಯಾದ ಎಲ್ಲರಿಗೂ ಕಾಂಗ್ರೆಸ್ ಮುಖಂಡ ಮೇಘರಾಜ್ ಬಳಗೇರಿ, ವಕ್ತಾರ ಯಮನೂರಪ್ಪ ಕಟ್ಟಿಮನಿ ಅಭಿನಂದನೆ ತಿಳಿಸಿದ್ದಾರೆ.

# ನೂತನ ತಾಂತ್ರಿಕತೆ ಬಳಸಿ; ಗುಣಮಟ್ಟದ ರೇಷ್ಮೆ ಉತ್ಪಾದಿಸಿ

**ಶಿಡ್ಲಘಟ್ಟ:** ರೇಷ್ಮೆ ಕೃಷಿ ಕ್ಷೇತ್ರದಲ್ಲೂ ಅಗಾದ ತಾಂತ್ರಿಕತೆ ಬಂದಿದೆ ರೈತರು ನೂತನ ತಾಂತ್ರಿಕತೆ ಬಳಸಿಕೊಂಡು ಗುಣಮಟ್ಟದ ರೇಷ್ಮೆಗೂಡನ್ನು ಉತ್ಪಾದಿಸಿ ಹೆಚ್ಚಿನ ಇಳುವರಿ ಪಡೆದರೆ ಮಾತ್ರವೇ ರೇಷ್ಮೆ ಕೃಷಿ ಲಾಭದಾಯಕ ವಾಗಲಿದೆ ಎಂದು ರೇಷ್ಮೆ ಇಲಾಖೆ ಉಪ ನಿರ್ದೇಶಕ ಭೋಜಣ್ಣ ತಿಳಿಸಿದರು.

ನಗರದ ಸರ್ಕಾರಿ ರೇಷ್ಮೆಬಿತ್ತನೆ ಕೋಠಿ ಸಭಾಂಗಣದಲ್ಲಿ ಕೌಶಲಾಭಿವೃದ್ಧಿ ಕೇಂದ್ರ, ಕೃಷಿ ವಿಶ್ವವಿದ್ಯಾಲಯ, ಕೃಷಿ ಮಹಾ ವಿದ್ಯಾಲಯ ರೇಷ್ಮೆ ಕೃಷಿ ವಿಭಾಗ ಹಾಗೂ ಶಿಡ್ಲಘಟ್ಟ ರೇಷ್ಮೆ ಇಲಾಖೆ ಆಶ್ರಯದಲ್ಲಿ ನಡೆದ ರೈತ ಹಾಗೂ ರೈತ ಮಹಿಳೆಯರಿಗೆ ಕೌಶಲಾಭಿವೃದ್ಧಿ ತರಬೇತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ರಸಗೊಬ್ಬರಗಳನ್ನು ಕಡಿಮೆ ಮಾಡಿ ಅಗತ್ಯಕ್ಕೆ ತಕ್ಕ ಪ್ರಮಾಣದಲ್ಲಿ ಕೊಟ್ಟಿಗೆ ಗೊಬ್ಬರ ಕೊಟ್ಟಾಗಲೇ ಗುಣಮಟ್ಟದ ರಸಭರಿತ ಹಿಪ್ಪುನೇರಳೆ ಸೊಪ್ಪನ್ನು ಉತ್ಪಾದಿಸಲು ಸಾಧ್ಯ ಆ ನಿಟ್ಟಿನಲ್ಲಿ ರೈತರು ಹೆಚ್ಚು ಗಮನ ಹರಿಸಬೇಕು ಸರ್ಕಾರವು ಇಲಾಖೆ ಮೂಲಕ ಕಾಲಕಾಲಕ್ಕೆ ರೈತರಿಗೆ ತರ ಬೇತಿ ನೀಡಲಿದ್ದು, ತಜ್ಞರಿಂದ ಸೂಕ್ತ ತರ ಬೇತಿ, ಮಾಹಿತಿ ನೀಡಲಾಗುವುದು ಎಂದು ಹೇಳಿದರು.

ಗುಣಮಟ್ಟದ ರೇಷ್ಮೆಗೂಡನ್ನು ಉತ್ಪಾದಿಸಲು ಗುಣಮಟ್ಟದ ಹಿಪ್ಪುನೇರಳೆ ಸೊಪ್ಪನ್ನು ನೀಡಬೇಕಾಗುತ್ತದೆ ಅದಕ್ಕಾಗಿ ಹಿಪ್ಪುನೇರಳೆ ತೋಟ ಹಾಗೂ ರೇಷ್ಮೆ ಹುಳು ಸಾಕಣೆ ಮನೆಯ ಉತ್ತಮ ನಿರ್ವಹಣೆಯೂ ಪ್ರಮುಖ ಪಾತ್ರ ವಹಿಸುತ್ತದೆ ಎಂದರು.





ರೇಷ್ಮೆಗೂಡು ಮಾರುಕಟ್ಟೆ ಸಹಾಯಕ ನಿರ್ದೇಶಕ ಕೆ.ತಿಮ್ಮರಾಜು ಮಾತನಾಡಿ ರೈತರು ಮಾರುಕಟ್ಟೆಗೆ 5–6 ದಿನಗಳ ರೇಷ್ಮೆ ಗೂಡನ್ನು ತನ್ನಿ ಇದರಿಂದ ರೇಷ್ಮೆಗೂಡಿಗೆ ಉತ್ತಮ ಬೆಲೆ ಸಿಗಲಿದೆ ಆದರೆ ಬಹುತೇಕ ರೈತರು 4–5 ದಿನಗಳ ಗೂಡನ್ನು ಹೆಚ್ಚಾಗಿ ತರುತ್ತಿದ್ದಾರೆ ಎಂದು ಬೇಸರ ವ್ಯಕ್ತಪಡಿಸಿದರು.

ಚಳಿಗಾಲದಲ್ಲಿ ಸುಣ್ಣಕಟ್ಟು ರೋಗ ಸೇರಿದಂತೆ ಹಲವು ರೋಗಗಳು ರೇಷ್ಮೆ ಹುಳುಗಳನ್ನು ಕಾಡುವುದುಂಟು ವಾತಾವರಣದಲ್ಲಿನ ಥಂಡಿ ವಾತಾವರಣ, ಮಂಜಿನ ಹನಿಯ ತೇವಾಂಶ ಇರುವ ಹಿಪ್ಪುನೇರಳೆ ಸೊಪ್ಪನ್ನು ನೀಡುವುದು ಕೂಡ ಸುಣ್ಣ ಕಟ್ಟು ರೋಗ ಹೆಚ್ಚಲು ಕಾರಣವಾಗುತ್ತದೆ ಎಂದರು.

ಸಾಮಾನ್ಯವಾಗಿ ರೈತರು ತಿಂಗಳು ಪೂರ್ತಿ ರೇಷ್ಮೆ ಹುಳುಗಳನ್ನು ಕಣ್ಣಲ್ಲಿ ಕಣ್ಣಿಟ್ಟು ನೋಡಿಕೊಳ್ಳುತ್ತಾರೆ ಆದರೆ ಹಣ್ಣಾದ ದಿನ ಸ್ವಲ್ಪ ನಿರ್ಲಕ್ಷ್ಯ ವಹಿಸುತ್ತಾರೆ ಹಣ್ಣಾದ ಮತ್ತು ಅದಕ್ಕೂ ಮೊದಲ ದಿನ ಹೆಚ್ಚಿನ ಕೆಲಸ ಇರುವ ಕಾರಣ ರೈತರು ಸುಸ್ತಾಗಿ ಹಣ್ಣು ಹುಳುಗಳ ನಿರ್ವಹಣೆಯಲ್ಲಿ ಸ್ವಲ್ಪಮಟ್ಟಿಗೆ ನಿರ್ಲಕ್ಷ್ಯ ಮಾಡುವ ಕಾರಣ ಗುಣಮಟ್ಟದ ರೇಷ್ಮೆಗೂಡು ಉತ್ಪಾದನೆ ಮೇಲೆ ಪರಿಣಾಮ ಬೀರಲಿದೆ.

ಹಿಪ್ಪುನೇರಳೆ ಬೆಳೆಯಲ್ಲಿ ಲಘು ಪೋಷ ಕಾಂಶ, ಹಸಿರೆಲೆ ಮತ್ತು ಜೈವಿಕ ಗೊಬ್ಬರ ಬಳಕೆ ಕುರಿತು ಚಿಂತಾಮಣಿಯ ರೇಷ್ಮೆ ಕೃಷಿ ಮಹಾ ವಿದ್ಯಾಲಯದ ಸಹಾಯಕ ಪ್ರಾಧ್ಯಾ ಪಕ ಡಾ.ಎನ್.ಅಮರನಾಥ್ ಮಾಹಿತಿ ನೀಡಿದರು.

> **ಚಳಿಗಾಲದಲ್ಲಿ ರೇಷ್ಮೆ ಹುಳುಗಳನ್ನು ಕಾಡುವ ಸುಣ್ಣಕಟ್ಟು ರೋಗ ನಿಯಂತ್ರಣಕ್ಕೆ ಕೈಗೊಳ್ಳಬೇಕಾದ ಕ್ರಮಗಳು, ಗುಣಮಟ್ಟದ ರೇಷ್ಮೆಗೂಡು ಉತ್ಪಾದನೆಗಾಗಿ ಹೇಗೆ ಹಣ್ಣಾದ ರೇಷ್ಮೆ ಹುಳುಗಳನ್ನು ನಿರ್ವಹಣೆ ಮಾಡಬೇಕು, ರೇಷ್ಮೆಗೂಡನ್ನು ಶಬ್ಬಿ(ಹದ) ಮಾಡುವ ವಿಧಾನ, ಗ್ರೇಡಿಂಗ್ ಮಾಡುವುದು ಎಷ್ಟು ದಿನದ ಗೂಡನ್ನು ಮಾರು ಕಟ್ಟೆಗೆ ತಂದರೆ ಉತ್ತಮ ಬೆಲೆ ಸಿಗಲಿದೆ ಎಂಬುದರ ಬಗ್ಗೆ ಅವರು ಮಾಹಿತಿ ನೀಡಿದರು.**
>
> **ಕೆ.ತಿಮ್ಮರಾಜು | ರೇಷ್ಮೆಗೂಡು ಮಾರುಕಟ್ಟೆ ಸಹಾಯಕ ನಿರ್ದೇಶಕ**

ಹಿಪ್ಪುನೇರಳೆ ಬೆಳೆಗೆ ತಗಲುವ ಪ್ರಮುಖ ರೋಗಗಳ ನಿರ್ವಹಣೆ ಕುರಿತು ರೇಷ್ಮೆ ಇಲಾಖೆ ಸಹಾಯಕ ನಿರ್ದೇಶಕ ಅಕ್ಬಲ್ ಪಾಷ, ಹಿಪ್ಪುನೇರಳೆ ಬೆಳೆಯಲ್ಲಿ ಪ್ರಮುಖ ಪೀಡೆಗಳ ನಿರ್ವಹಣೆ ಕುರಿತು ಚಿಂತಾಮಣಿ ಕೃಷಿ ವಿಜ್ಞಾನ ಕೇಂದ್ರದ ರೇಷ್ಮೆ ಕೃಷಿ ತಜ್ಞೆ ಡಾ.ಜಿ.ಆರ್. ಅರುಣ ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಬೆಂಗಳೂರು ಕೃಷಿ ಮಹಾ ವಿದ್ಯಾಲಯದ ರೇಷ್ಮೆ ಕೃಷಿ ವಿಭಾಗದ ಪ್ರಾಧ್ಯಾಪಕ ಡಾ. ಮಂಜುನಾಥ್‌ಗೌಡ, ಡಾ.ಎನ್.ಅಮರನಾಥ್, ಡಾ.ಜಿ.ಆರ್.ಅರುಣಾ, ಅಕ್ಮಲ್ ಪಾಷ, ಮಧುಸೂದನ್ ಮುಂತಾದವರು ಹಾಜರಿದ್ದರು.

# ಗ್ರಾಮೀಣ ಕ್ರೀಡೆಗಳ ಮೂಲಕ ಒಗ್ಗಟ್ಟು ಪ್ರದರ್ಶನ

**ಶಿಡ್ಲಘಟ್ಟ:** ಈ ಹಿಂದೆ ನಮ್ಮ ಹಿರಿಯರು ಊರಿಗೆ ಬೇಕಿರುವ ಕೆರೆ–ಕುಂಟೆ, ಕಾಲುವೆ, ಸಮುದಾಯ ಭವನ ಚಾವಡಿಯನ್ನು ತಾವೇ ಎಲ್ಲರೂ ಸೇರಿ ವಾರದ ಕೆಲಸ ಮಾಡುವ ಮೂಲಕ ನಿರ್ಮಿಸಿಕೊಳ್ಳುತ್ತಿದ್ದರು ಆ ಮೂಲಕ ಗ್ರಾಮದ ಅಭಿವೃದ್ಧಿಯೂ ಆಗುತ್ತಿತ್ತು, ಸಾಮರಸ್ಯವೂ ಮೂಡುತ್ತಿತ್ತು ಆ ನಿಟ್ಟಿನಲ್ಲಿ ಅನೇಕ ರೀತಿಯ ಪೌರಾಣಿಕ ನಾಟಕ, ಕಬಡ್ಡಿಯಂತಹ ಗ್ರಾಮೀಣ ಕ್ರೀಡೆಗಳನ್ನು ಆಡುವ ಮೂಲಕ ಒಗ್ಗಟ್ಟು ಪ್ರದರ್ಶಿಸುತ್ತಿದ್ದರು ಆದರೆ ಇತ್ತೀಚಿನ ದಿನಗಳಲ್ಲಿ ಆ ವಾತಾವರಣ ಇಲ್ಲವಾಗಿದೆ ಇಂತಹ ದಿನಗಳಲ್ಲಿ ದೇವರಮಳ್ಳೂರು ಗ್ರಾಮದಲ್ಲಿ ಇಂತಹ ಪ್ರಯತ್ನ ನಡೆದಿರು ವುದು ಶ್ಲಾಘನೀಯ ಎಂದು ಬಿಜೆಪಿ ಮುಖಂಡ ಸೀಕಲ್ ರಾಮಚಂದ್ರಗೌಡ ತಿಳಿಸಿದರು.

ತಾಲ್ಲೂಕಿನ ದೇವರಮಳ್ಳೂರು ಗ್ರಾಮದಲ್ಲಿ ಶ್ರೀ ಮಳ್ಳೂರಾಂಭ ದೇವಿಯ ಬ್ರಹ್ಮರಥೋತ್ಸವ ಅಂಗವಾಗಿ ಶ್ರೀಬಾಲಾಜಿ ಸೇವಾ ಟ್ರಸ್ಟ್‌ನಿಂದ ಹಮ್ಮಿಕೊಂಡಿದ್ದ ರಾಜ್ಯ ಮಟ್ಟದ ಹೊನಲು ಬೆಳಕಿನ ಕಬಡ್ಡಿ ಪಂದ್ಯಾವಳಿಯಲ್ಲಿ ವಿಜೇತ ತಂಡಕ್ಕೆ ನಗದು ಬಹುಮಾನ ಹಾಗೂ ಟ್ರೋಫಿ ವಿತರಿಸಿಅವರು ಮಾತನಾಡಿದರು. ಗ್ರಾಮೀಣ ಭಾಗದ ಕಬಡ್ಡಿಯಂತಹ ಅನೇಕ ಕ್ರೀಡೆಗಳು ಮರೆಯಾಗುತ್ತಿವೆ ಕೇವಲ ಸ್ಪರ್ಧಾಕೂಟಗಳಲ್ಲಿ ಮಾತ್ರ ಕಾಣುವಂತಾಗಿದೆ ಇವು ಕೇವಲ ಕ್ರೀಡೆಗಳಷ್ಟೆ ಅಲ್ಲ, ಅವುಗಳಲ್ಲಿ ಗ್ರಾಮೀಣ ಭಾಗದ ಜನರ ಬದುಕಿನ ಅರ್ಥ ಅಡಗಿದೆ ಎಂದರು.



ಈ ವರ್ಷ ಮಾತ್ರವಲ್ಲ, ಪ್ರತಿ ವರ್ಷದ ಬ್ರಹ್ಮರಥೋತ್ಸವದಲ್ಲೂ ಈ ರೀತಿಯ ಗ್ರಾಮೀಣ ಕ್ರೀಡಾಕೂಟಗಳನ್ನು, ಸಾಂಸ್ಕೃತಿಕ ಸ್ಪರ್ಧೆಗಳನ್ನು ಏರ್ಪಡಿಸುವ ಕೆಲಸ ಆಗಲಿಅದಕ್ಕೆ ನಮ್ಮ ಬಾಲಾಜಿ ಸೇವಾ ಟ್ರಸ್ಟ್‌ನಿಂದ ಎಲ್ಲಾ ರೀತಿಯ ನೆರವು ನೀಡಲಿದ್ದೇನೆ ಎಂದು ಅವರು ಭರವಸೆ ನೀಡಿದರು.

ಇದೇ ವೇಳೆ ಪ್ರಥಮ ಸ್ಥಾನ ಪಡೆದ ಚಂದು ಬಾಯ್ಸ್ ತಂಡಕ್ಕೆ 30 ಸಾವಿರ ನಗದು, ಟ್ರೋಫಿ, ದ್ವಿತೀಯ ಸ್ಥಾನ ಗಳಿಸಿದ ಯಂಗ್ ಸ್ಟಾರ್ಸ್ –20 ಸಾವಿರ ನಗದು ಹಾಗೂ ಟ್ರೋಫಿ, ತೃತೀಯ ಸ್ಥಾನ ಪಡೆದ ಜೈ ಭೀಮ್ ತಂಡಕ್ಕೆ 10 ಸಾವಿರ ನಗದು, ಟ್ರೋಫಿ ಹಾಗೂ 4ನೇ ಸ್ಥಾನಕ್ಕೆ ತೃಪ್ತಿಪಟ್ಟ ದೇವರ ಮಳ್ಳೂರು ಯುವಕರ ಕಬಡ್ಡಿ ತಂಡಕ್ಕೆ 5 ಸಾವಿರನಗದು ಮತ್ತು ಟ್ರೋಫಿಯನ್ನು ನೀಡಲಾಯಿತು.

ಸುಗಮವಾಗಿ ಕಬಡ್ಡಿಪಂದ್ಯಾವಳಿಯನ್ನು ನಡೆಸಿಕೊಟ್ಟ ತೀರ್ಪುಗಾರರು, ಕ್ರೀಡಾ ಆಯೋಜಕರು, ರಕ್ಷಣೆ ನೀಡಿದ ಪೊಲೀಸ್ ಸಿಬ್ಬಂದಿ, ಕ್ರೀಡಾಕೂಟ ಆಯೋಜನೆಗೆ ಸಹ ಕರಿಸಿದವರನ್ನು ಗ್ರಾಮಸ್ಥರು ಸನ್ಮಾನಿಸಿದರು.

ಈ ಸಂದರ್ಭದಲ್ಲಿ ಬಾಲಾಜಿ ಸೇವಾ ಟ್ರಸ್ಟ್‌ನ ಸೀಕಲ್ ಆನಂದಗೌಡ, ತಲದುಮ್ಮನಹಳ್ಳಿ ಮಧು, ಪಲಿಚೇರ್ಲು ಸೋಮಶೇಖರ್, ಚಾತುರ್ಯ, ಸಂಜೀವಪ್ಪ, ಮಳ್ಳೂರಾಂಭದೇವಿ ಅಭಿವೃದ್ಧಿ ಸಮಿತಿ ಅಧ್ಯಕ್ಷ ವಕೀಲ ಮುನಿರಾಜುಗೌಡ, ಸುಬ್ರಮಣ್ಯಪ್ಪ, ರೆಡ್ಡಿಸ್ವಾಮಿ, ಚನ್ನಕೃಷ್ಣ ಮತ್ತೀತರು ಹಾಜರಿದ್ದರು.

# ಸರ್ಕಾರಿ ಕಾಲೇಜಿಗೆ ನಿಮ್ಮ ಮಕ್ಕಳನ್ನು ಸೇರಿಸಿ

**ಶಿಡ್ಲಘಟ್ಟ:** ಪೋಷಕರು ಕಾಲೇಜಿಗೆ ಬಂದು ತಮ್ಮ ಮಕ್ಕಳ ಕಲಿಕೆಯ ಪ್ರಗತಿಯ ಬಗ್ಗೆ ತಿಳಿಯಬೇಕು ಹೆಚ್ಚಿನ ಸಂಖ್ಯೆಯಲ್ಲಿ ಸರ್ಕಾರಿ ಕಾಲೇಜಿಗೆ ನಿಮ್ಮ ಮಕ್ಕಳನ್ನು ಸೇರಿಸಿ ಹಾಗೂ ನಿಮ್ಮ ಅಕ್ಕಪಕ್ಕದ ಮನೆಯವರಿಗೂ ಸರ್ಕಾರಿ ಕಾಲೇಜಿಗೆ ತಮ್ಮ ಮಕ್ಕಳನ್ನು ಸೇರಿಸಲಾಗಿದೆ ತಿಳಿಸಬೇಕು ಎಂದು ಪ್ರಭಾರಿ ಪ್ರಾಂಶುಪಾಲ ವೆಂಕಟಶಿವಾರೆಡ್ಡಿ ತಿಳಿಸಿದರು.

ನಗರದ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಪೋಷಕರ ಸಭೆಯಲ್ಲಿ ಅವರು ಮಾತನಾಡಿದರು..

ನಮ್ಮ ಕಾಲೇಜಿನಲ್ಲಿ ತೀರಾ ಕಡಿಮೆ ದಾಖಲಾತಿ ಶುಲ್ಕವಿರುತ್ತದೆ ಹಾಗೂ ದಾಖಲಾತಿ ಶುಲ್ಕ ಕಟ್ಟಲು ಸಾಧ್ಯವಾಗದ ಬಡ ಮಕ್ಕಳಿಗೆ ನಾನೇ ಶುಲ್ಕವನ್ನು ಕೊಡುತ್ತೇನೆ ಎಂದರು. ನಮ್ಮ ಕಾಲೇಜಿನಲ್ಲಿ ಅನುಭಲವಿರುವ ನುರಿತ ಉಪನ್ಯಾಸಕರು ಇದ್ದಾರೆ ಉತ್ತಮ ಗ್ರಂಥಾಲಯದ ಸೌಲಭ್ಯವಿದೆ ವಿಜ್ಞಾನ ವಿಭಾಗದ ಮಕ್ಕಳಿಗೆ ಹಾಗೂ ನೀಟ್ ಪರೀಕ್ಷೆಗಳಿಗೆ ಕೋಚಿಂಗ್ ನೀಡಲಾಗುತ್ತಿದೆ ಎಂದರು.

ಉಪನ್ಯಾಸಕ ಎಚ್.ಸಿ.ಮುನಿರಾಜು ಮಾತನಾಡಿ, ಪೋಷಕರು ತಮ್ಮ ಮನೆಗಳಲ್ಲಿ ನಿಮ್ಮ ಮಕ್ಕಳಿಗೆ ಉತ್ತಮ ಕಲಿಕಾ ವಾತಾವರಣವನ್ನ ಕಲ್ಪಿಸಿಕೊಡಬೇಕು ಮಕ್ಕಳ ಮೇಲೆ ಹೆಚ್ಚಿನ ಒತ್ತಡ ಹಾಕಬಾರದು ಮೊಬೈಲ್ ಹಾಗೂ ದೂರದರ್ಶನಗಳಿಗೆ ವ್ಯಸನಿಗಳಾಗದಂತೆ ನೋಡಿಕೊಳ್ಳಬೇಕು ವಿಶೇಷವಾಗಿ ಪರೀಕ್ಷಾ ಸಮಯದ ಮೂರು ತಿಂಗಳು ಮುಂಚಿತವಾಗಿ ನೀವು ಸಹ ಟೀವಿಗಳನ್ನು ಮನೆಯಲ್ಲಿ ನೋಡದೆ ನಿಮ್ಮ ಮಕ್ಕಳ ಮುಂದಿನ ಭವಿಷ್ಯತ್ತನ್ನು ರೂಪಿಸಲು ಪಣ ತೊಡಬೇಕು ಎಂದರು. ಈ ವೇಳೆ ಪೋಷಕರ ಸಭೆಯಲ್ಲಿ ಭಾಗವಹಿಸಿದ ಎಲ್ಲಾ ಪೋಷಕರಿಗೂ ತಮ್ಮ ಮಕ್ಕಳ ಕಲಿಕಾ ಪ್ರಗತಿ ಪತ್ರಗಳನ್ನು ತೋರಿಸಿ ಹಲವಾರು ಸಲಹೆ ಸೂಚನೆಗಳನ್ನು ನೀಡಲಾಯಿತು. ಈ ಸಂದರ್ಭದಲ್ಲಿ ಉಪನ್ಯಾಸಕರಾದ ಲಕ್ಷ್ಮಯ್ಯ ಬಾಬಾಜಾನ್, ಶ್ರೀಕೃಷ್ಣ ಪರಮಾತ್ಮ ,ಚಂದ್ರಶೇಖರ್, ರಮೇಶ್, ನಾಗಾರ್ಜುನ, ಶ್ರೀಧರ್ ಹಾಗೂ ನಯಿದಾ ಸುಲ್ತಾನ,ನಾಗವೇಣಮ್ಮ ಸಾವಿತ್ರಮ್ಮ ಮುಂತಾದವರು ಭಾಗವಹಿಸಿದ್ದರು.

# ಜಿಲ್ಲಾದ್ಯಂತ ಸಡಗರ, ಸಂಭ್ರಮದ ಕ್ರಿಸ್‌ಮಸ್



**ಚಿಕ್ಕಬಳ್ಳಾಪುರ:** ವಿಶ್ವಕ್ಕೆ ಶಾಂತಿ ಮತ್ತು ಸತ್ಯದ ಸಂದೇಶ ಸಾರಿದ ಏಸುಕ್ರಿಸ್ತರ ಜನ್ಮದಿನ ಕ್ರಿಸ್ ಮಸ್ ಹಬ್ಬವನ್ನು ಬುಧವಾರ ಕ್ರೈಸ್ತ ಬಾಂಧವರು ಜಿಲ್ಲಾದ್ಯಂತ ಸಡಗರ, ಸಂಭ್ರಮದಿಂದ ಆಚರಿಸಿದರು.

ನಗರದ ಸಂತ ಕ್ಷೇವಿಯರ್ ಚರ್ಚ್, ಸಿಎಸ್ಐ ಚರ್ಚ್ ಸೇರಿದಂತೆ ನಗರ ಮತ್ತು ಗ್ರಾಮಾಂತರದ ವಿವಿಧ ಕಡೆಗಳಲ್ಲಿ ಚರ್ಚ್ ಗಳಲ್ಲಿ ಕ್ರೈಸ್ತ ಬಾಂಧವರು ಸಾಮೂಹಿಕ ಪ್ರಾರ್ಥನೆ ಸಲ್ಲಿಸಿದರು. ಕ್ರಿಸ್ ಮಸ್ ಹಬ್ಬದ ಪ್ರಯುಕ್ತ ಚರ್ಚ್‌ಗಳಲ್ಲಿ ವೈವಿಧ್ಯಮಯ, ವರ್ಣಮಯ ವಿದ್ಯುತ್ ದೀಪಾಲಂಕಾರ ಹಾಗೂ ಚಿತ್ತಾಕರ್ಷಕ ನಕ್ಷತ್ರಗಳಿಂದ ಕಂಗೊಳಿಸುತಿತ್ತು.

ಗೋದಲಿಯಲ್ಲಿ ಬಾಲ ಯೇಸುಮೂರ್ತಿಯನ್ನು ಇಟ್ಟು ದೇವರ ಸ್ತುತಿ, ಜೋಗಳುದ ಮೂಲಕ ಭಕ್ತಾಧಿಗಳು ಆರಾಧಿಸಿದರು. ಮೇಣದ ಬತ್ತಿಗಳನ್ನು ಬೆಳಗಿ ಯೇಸು ಜನ್ಮ ದಿನವನ್ನು ಸ್ವಾಗತಿಸಿದರು.

ಕ್ರಿಸ್‌ಮಸ್ ಹಬ್ಬವು ಧಾರ್ಮಿಕ ಮತ್ತು ಸಾಂಸ್ಕೃತಿಕ ಮಹತ್ವವನ್ನು ಹೊಂದಿದೆ. ಬುಧವಾರ ಬೆಳಗ್ಗೆ ಜನರು ಚರ್ಚ್‌ಗೆ ಹೋಗಿ ವಿಶೇಷವಾಗಿ ಪಾರ್ಥನೆ ಸಲ್ಲಿಸುವುದರೊಂದಿಗೆ ಮನೆಯನ್ನು ಕ್ರಿಸ್‌ಮಸ್ ಟ್ರೀ ಹಾಗೂ ಹೂವುಗಳಿಂದ ಅಲಂಕರಿಸಿದ್ದರು. ಸಂಬಂಧಿಕರು, ಸ್ನೇಹಿತರೆಲ್ಲಾ ಒಟ್ಟಾಗಿ ಸೇರಿ ವಿಶೇಷ ಆಹಾರಗಳನ್ನು ಮಾಡಿ ಸವಿದರು.ಕ 'ಲ ರಾಜಕಾರಣಿಗಳು ನಗರದ ಸಂತ ಕ್ಷೇವಿಯರ್ ಚರ್ಚ್, ಸಿಎಸ್ಐ ಚರ್ಚ್‌ಗಳಿಗೆ ಬೇಟಿ ನೀಡಿ ಕ್ರೈಸ್ತ ಭಾಂಧವರಿಗೆ ಶುಭಾಷಯಗಳನ್ನು ಕೋರಿದರು.

ಈ ಸಂಧರ್ಭದಲ್ಲಿ ಕ್ರೈಸ್ತಭಾಂಧವರು ಪರಸ್ಪರ ಸಿಹಿ ಹಂಚಿಕೊಂಡರು.ಈ ವೇಳೆ ಕ್ರೈಸ್ತಭಾಂಧವರಾದ ಜೆ.ಅಂತೋಣಿ, ಹೆನ್ರಿ ಪ್ರಸನ್ನ ಕುಮಾರ್ ,ಅರುಣ್,ದಾಸ್, ಜಯರಾಜ್,ಜೆಎಂಜೆ ರಾಜು, ಸಾಮ್ಯುಯೆಲ್ ಸಂದೀಪ್, ಅರಳಪ್ಪ,ಮತ್ತಿತರರು ಇದ್ದರು.

# 'ಆಶ್ರಯ' ನಿವೇಶನಕ್ಕೆ ಗುದ್ದಲಿ ಪೂಜೆ

**ಶಿರಾ:**ಆಶ್ರಯ ನಿವೇಶನ ಭೂಮಿಯ ನೀಲನಕ್ಷೆಯನ್ನು ರಾಜ್ಯ ಸರ್ಕಾರದ ದೆಹಲಿ ವಿಶೇಷ ಪ್ರತಿನಿಧಿ ಶಾಸಕ ಟಿ.ಬಿ.ಜಯಚಂದ್ರ ಪರಿಶೀಲಿಸಿದರು.

ಶಿರಾ ನಗರಸಭೆ ವ್ಯಾಪ್ತಿಯಲ್ಲಿ ನಗರಸಭೆ ನೌಕರರಿಗೆ ಸೇರಿದಂತೆ ಇತ್ತರರಿಗೆಆಶ್ರಯ ನಿವೇಶನ ಅರ್ಹ ಫಲಾನುಭವಿಗಳಿಗೆ ಆಶ್ರಯ ಯೋಜನೆಯಡಿ ನಿವೇಶನ ಹಂಚಿಕೆ ಮಾಡಲಾಗುವುದು' ಎಂದು ಶಾಸಕ ಟಿ.ಬಿ.ಜಯಚಂದ್ರ ತಿಳಿಸಿದರು.

ನಗರದಶಿರಾ ನಗರದ ಸರ್ವೆ ನಂಬರ್ 100ರಲ್ಲಿ ನಗರಸಭಾ ವ್ಯಾಪ್ತಿಯ ಬಡವರಿಗೆ ನಿವೇಶನ ಹಂಚಿಕೆಗೆ ಬಡಾವಣೆ ನಿರ್ಮಾಣ ಮಾಡಲು ಗುದ್ದಲಿ ಪೂಜೆ ನೇರವೇರಿಸಿದೆ.

ಆಶ್ರಯ ಯೋಜನೆಯಡಿ ಮಂಜೂರಾಗಿರುವ ಜಮೀನಿಗೆ ಭೂಮಿ ಪೂಜೆ ನೆರವೇರಿಸಿ ಅವರು ಮಾತನಾಡಿದರು. 'ಸ್ವಂತ ಸೂರಿಲ್ಲದವರಿಗೆ ನಿವೇಶನ ಹಂಚಿಕೆ ಮಾಡಲು ಜಾಗವನ್ನು ಗುರುತಿಸಲಾಗಿದೆ. ಕೆಲವು ಮಾನದಂಡಗಳ ಮೂಲಕ ಅರ್ಹ ಫಲಾನುಭವಿಗಳನ್ನು ಗುರುತಿಸಿ, ನಿವೇಶನ ಹಂಚಿಕೆ ಮಾಡಲಾಗುವುದು. ಬಡವರಿಗಾಗಿ ಬಹುಮಹಡಿ ಕಟ್ಟಡ ನಿರ್ಮಾಣ ಕಾರ್ಯ ಪ್ರಗತಿಯಲ್ಲಿದ್ದು, ಶೀಘ್ರ ಹಂಚಿಕೆಯಾಗಲಿದೆ' ಎಂದು ಹೇಳಿದರು.

ನಗರಸಭೆ ವ್ಯಾಪ್ತಿಯಲ್ಲಿರುವ ನಿವೇಶನ ರಹಿತರ ಆಯ್ಕೆ ಪಟ್ಟಿ ಸಿದ್ಧಪಡಿಸಲಾಗುವುದು. ಈ ಸಂದರ್ಭದಲ್ಲಿ ನಗರಸಭೆ ನಗರಸಭೆ ಆಶ್ರಯ ಸಮಿತಿಯ ಸದಸ್ಯರು ಸೇರಿದಂತೆ ನಗರಸಭೆ ಸದಸ್ಯರು ಆಯುಕ್ತ ರುದ್ರೇಶ್ ಮತ್ತಿತರ ಹಾಜರಿದ್ದರು.

ನಂತರ ಅವರು ಗೌಡಗೆರೆ ಹೋಬಳಿಯ ಮೆಳೆಕೋಟೆ,ಹೇರೂರು ಮತ್ತು ನಾರಾಯಣಪುರ ಗ್ರಾಮಗಳ ಬಳಿ ಹೇಮಾವತಿ ನೀರಿನಿಂದ ತುಂಬಿರುವ ಬ್ಯಾರೇಜ್ಗ ಗೆ ಗ್ರಾಮಸ್ಥರು ಹಾಗೂ ಮುಖಂಡರು,ಕಾರ್ಯಕರ್ತರ ಜೊತೆಗೂಡಿ ಗಂಗಾಪೂಜೆ ನೆರವೇರಿಸಿ ಬಾಗೀನ ಅರ್ಪಣೆ ಮಾಡಿ ನಂತರ ಅಭಿನಂದನೆ ಸ್ವೀಕರಿಸಿದರು .




# ಅಂಗಡಿ ಮಳಿಗೆಗೆ ನೋಟಿಸ್ ನೀಡಿದ ಪೊಲೀಸ್ ಇಲಾಖೆ!

**ಚಾಮರಾಜನಗರ:** ಸೂಕ್ತ ಪಾರ್ಕಿಂಗ್ ವ್ಯವಸ್ಥೆ ಇಲ್ಲದೆ ಪಾರ್ಕಿಂಗ್ ಅವ್ಯವಸ್ಥೆ ಹಿನ್ನಲೆಯಲ್ಲಿ ಚಾಮರಾಜನಗರ ಸಂಚಾರಿ ಪೊಲೀಸರು ತಿಳುವಳಿಕೆ ನೋಟಿಸ್ ನೀಡಿದ್ದಾರೆ.

ನಗರ ಜೋಡಿರಸ್ತೆ ಅದರಲ್ಲೂ ಎಸ್ಪಿ ಕಛೇರಿ ಮುಂಭಾಗವಿರುವ ವಿಶಾಲ್ ಮಾರ್ಟ್ ಅಂಗಡಿ ವ್ಯವಸ್ಥಾಕರಿಗೆ ನೋಟಿಸ್ ನೀಡಿದ್ದಾರೆ.

ನೋಟಿಸಿನಲ್ಲೇನಿದೆ;–ಚಾಮರಾಜನಗರ ಸಂಚಾರ ಪೊಲೀಸ್ ಠಾಣೆ ವ್ಯಾಪ್ತಿಯ ಬಿ.ರಾಚಯ್ಯ ಜೋಡಿ ರಸ್ತೆಯಲ್ಲಿ ತಮ್ಮ ಶಾಖೆಯನ್ನು ತೆರೆದಿದ್ದು, ನಿಮ್ಮ ಶಾಖೆಯ ಮುಂಭಾಗದ ಜೋಡಿ ರಸ್ತೆಯಲ್ಲಿ ತಮ್ಮ ಮಾರ್ಟ್‌ಗೆ ಬರುವ ಗ್ರಾಹಕರು ತಮ್ಮ ವಾಹನಗಳನ್ನು ಸಾರ್ವಜನಿಕ ರಸ್ತೆಯಲ್ಲಿ ಅಡ್ಡದಿಡ್ಡಿಯಾಗಿ ವಾಹನಗಳನ್ನು ನಿಲ್ಲಿಸುತ್ತಿದ್ದು, ಇದ್ದರಿಂದ ಸಾರ್ವಜನಿಕರಿಗೆ ಮತ್ತು ಶಾಲಾ ವಿದ್ಯಾರ್ಥಿಗಳಿಗೆ ಸುಗಮ ಸಂಚಾರಕ್ಕೆ ತೊಂದರೆ ಉಂಟಾಗುತ್ತಿರುತ್ತದೆ.

ಆದ ಆದ ಕಾರಣ 05 ಸೆಕ್ಯೂರಿಟಿ ಗಾರ್ಡ್ಸ್ಗ ನೇಮಿಸಿಕೊಂಡು ತಮ್ಮ ಮಾರ್ಟ್‌ನ ಪಕ್ಕದಲ್ಲಿ ಪಾರ್ಕಿಂಗ್ ಜಾಗವನ್ನು ವ್ಯವಸ್ಥೆ ಮಾಡಿಕೊಂಡು ವ್ಯವಸ್ಥಿತವಾಗಿ ವಾಹನಗಳನ್ನು ನಿಲ್ಲಿಸಿ ಸುಗಮ ಸಂಚಾರಕ್ಕೆ ಅನುವು ಮಾಡಿಕೊಡಬೇಕಾಗಿ ಕೋರಿದೆ. ಇಲ್ಲವಾದಲ್ಲಿ ನಿಮ್ಮ ಮೇಲೆ ಸೂಕ್ತ ಕಾನೂನು ರೀತ್ಯಾ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ .



The Sub-Inspector of Police
Traffic Police Station
Chamarajanagar Town
Chamarajanagar Dist.
Karnataka State
Phone: 08226-222020
E-mail: trafficchn@ksp.gov.in

ಪೊಲೀಸ್ ಸಬ್-ಇನ್ಸ್‌ಪೆಕ್ಟರ್
ಸಂಚಾರ ಪೊಲೀಸ್ ಠಾಣೆ
ಚಾಮರಾಜನಗರ ಪಟ್ಟಣ
ಚಾಮರಾಜನಗರ ಜಿಲ್ಲೆ
ದೂರವಾಣಿ: 08226-222020
ಇ-ಮೇಲ್: trafficchn@ksp.gov.in

ಚಾಮರಾಜನಗರ ಜಿಲ್ಲೆ

ಸಂ/ಚಾನ.ಸಂಚಾರ.ಪೊ.ಠಾಣೆ/ಸಿಸಿ/ /2024 ದಿನಾಂಕ: 25.12.2024

ರವರಿಗೆ:
ವ್ಯವಸ್ಥಾಪಕರು,
ವಿಶಾಲ್ ಮಾರ್ಟ್,
ಬಿ.ರಾಚಯ್ಯ ಜೋಡಿ ರಸ್ತೆ,
ಚಾಮರಾಜನಗರ.

ಮಾನ್ಯರೆ,

ವಿಷಯ:– ವಿಶಾಲ್ ಮಾರ್ಟ್ ಮುಂದೆ ವ್ಯವಸ್ಥಿತವಾದ ಪಾರ್ಕಿಂಗ್ ಮತ್ತು ಸೆಕ್ಯೂರಿಟಿ ಗಾರ್ಡ್ ನೇಮಿಸಿಕೊಳ್ಳುವ ಬಗ್ಗೆ.

*******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ನಿಮಗೆ ತಿಳಿಯಪಡಿಸುವುದೇನೆಂದರೆ, ಚಾಮರಾಜನಗರ ಸಂಚಾರ ಪೊಲೀಸ್ ಠಾಣೆ ವ್ಯಾಪ್ತಿಯ ಬಿ.ರಾಚಯ್ಯ ಜೋಡಿ ರಸ್ತೆಯಲ್ಲಿ ತಮ್ಮ ಶಾಖೆಯನ್ನು ತೆರೆದಿದ್ದು, ನಿಮ್ಮ ಶಾಖೆಯ ಮುಂಭಾಗದ ಜೋಡಿ ರಸ್ತೆಯಲ್ಲಿ ತಮ್ಮ ಮಾರ್ಟ್‌ಗೆ ಬರುವ ಗ್ರಾಹಕರು ತಮ್ಮ ವಾಹನಗಳನ್ನು ಸಾರ್ವಜನಿಕ ರಸ್ತೆಯಲ್ಲಿ ಅಡ್ಡದಿಡ್ಡಿಯಾಗಿ ವಾಹನಗಳನ್ನು ನಿಲ್ಲಿಸುತ್ತಿದ್ದು, ಇದ್ದರಿಂದ ಸಾರ್ವಜನಿಕರಿಗೆ ಮತ್ತು ಶಾಲಾ ವಿದ್ಯಾರ್ಥಿಗಳಿಗೆ ಸುಗಮ ಸಂಚಾರಕ್ಕೆ ತೊಂದರೆ ಉಂಟಾಗುತ್ತಿರುತ್ತದೆ. ಆದ ಕಾರಣ 05 ಸೆಕ್ಯೂರಿಟಿ ಗಾರ್ಡ್‌ನ್ನು ನೇಮಿಸಿಕೊಂಡು ತಮ್ಮ ಮಾರ್ಟ್‌ನ ಪಕ್ಕದಲ್ಲಿ ಪಾರ್ಕಿಂಗ್ ಜಾಗವನ್ನು ವ್ಯವಸ್ಥೆ ಮಾಡಿಕೊಂಡು ವ್ಯವಸ್ಥಿತವಾಗಿ ವಾಹನಗಳನ್ನು ನಿಲ್ಲಿಸಿ ಸುಗಮ ಸಂಚಾರಕ್ಕೆ ಅನುವು ಮಾಡಿಕೊಡಬೇಕಾಗಿ ಕೋರಿದೆ. ಇಲ್ಲವಾದಲ್ಲಿ ನಿಮ್ಮ ಮೇಲೆ ಸೂಕ್ತ ಕಾನೂನು ರೀತ್ಯಾ ಕ್ರಮ ಕೈಗೊಳ್ಳಲಾಗುವುದು

"ವಂದನೆಗಳೊಂದಿಗೆ"

ತಮ್ಮ ವಿಶ್ವಾಸಿ
SUB-INSPECTOR OF POLICE
TRAFFIC POLICE STATION
CHAMARAJANAGARA

PLAZA RETAIL HOLDINGS PRIVATE LTD.
SHAL MEGA MART
Chamrajnagar, Karnataka
Date
Time
Received

ಕಳೆದ ಭಾನುವಾರದಂದು ಉದ್ಘಟನೆಯಾದ ಮಳಿಗೆಯಿಂದ ಸಾವಿರಾರು ಜನರು ಬಂದು ಹೋಗುತ್ತಿದ್ದು ಅಡ್ಡಾದಿಡ್ಡಿ ವಾಹನ ನಿಲ್ಲಿಸಿ ಹೋಗುವುದಲ್ಲದೆ ಪಾದಚರಿಗಳಿಗೂ ಕಿರಿಕಿರಿ ಉಂಟಾಗುತ್ತಿದ್ದು ಸಾರ್ವಜನಿಕರು ಅಸಮಾದಾನ ಹೊರಹಾಕಿದ್ದರು. ಸಾಮಾಜಿಕ ಜಾಲತಾಣದಲ್ಲೂ ವ್ಯಾಪಕ ಚರ್ಚೆಯಾಗಿದ್ದವು.

# ಕೇಂದ್ರ ಸರ್ಕಾರಿ ನೌಕರರ ವರ್ಗಾವಣೆಗೆ ಹೊಸ ನೀತಿ

**ನವದೆಹಲಿ:** ಮಹತ್ವದ ಬೆಳವಣಿಗೆಯೊಂದರಲ್ಲಿ ಕೇಂದ್ರ ಸರ್ಕಾರ ಸಿಐಎಫ್ ಸಿಬ್ಬಂದಿಗಳ ವರ್ಗಾವಣೆ ನೀತಿಯನ್ನು ಪರಿಷ್ಕರಣೆ ಮಾಡಿದೆ. ಸ್ವಂತ ಜಿಲ್ಲೆಯ ಆಯ್ಕೆ, ಪತಿ–ಪತ್ನಿಗೆ ಒಂದೇ ನಗರದಲ್ಲಿ ಕೆಲಸ ಮಾಡುವ ಆಯ್ಕೆ ಸೇರಿದಂತೆ ವಿವಿಧ ಹೊಸ ನಿಯಮಗಳನ್ನು ಪರಿಚಯಿಸಿದೆ.

ದೇಶದ ವಿಮಾನ ನಿಲ್ದಾಣಗಳು ಸೇರಿದಂತೆ ಹಲವು ಪ್ರಮುಖ ಕಟ್ಟಡಗಳ ಭದ್ರತೆಯನ್ನು ಕೇಂದ್ರ ಕೈಗಾರಿಕಾ ಭದ್ರತಾ ಪಡೆ (ಸಿಐಎಸ್‌ಎಫ್) ನೋಡಿಕೊಳ್ಳುತ್ತದೆ. ಸಿಐಎಸ್‌ಎಫ್ ನೂತನ ಮಾನವ ಸಂಪನ್ಮೂಲ ನೀತಿಯನ್ನು ಪ್ರಕಟಿಸಿದೆ. ವರ್ಗಾವಣೆ ಸಮಯದಲ್ಲಿ 10 ಸ್ಥಳದ ಆಯ್ಕೆಗೆ ಅವಕಾಶ ನೀಡಲಾಗಿದೆ. ಸಿಬ್ಬಂದಿಗಳು ಆಯ್ಕೆ ಮಾಡಿಕೊಂಡ ನಗರಕ್ಕೆ ಅವರನ್ನು ವರ್ಗಾವಣೆಗೊಳಿಸಲಾಗುತ್ತದೆ. ಪತಿ ಮತ್ತು ಪತ್ನಿ ಇಬ್ಬರೂ ಸಿಐಎಸ್‌ಎಫ್‌ನಲ್ಲಿದ್ದರೆ ಒಂದೇ ನಗರಕ್ಕೆ ವರ್ಗಾವಣೆಯನ್ನು ಸಹ ನೀಡಲಾಗುತ್ತದೆ.

2017ರಲ್ಲಿ ಸಿಐಎಸ್‌ಎಫ್ ವರ್ಗಾವಣೆ ನೀತಿಯನ್ನು ಜಾರಿಗೊಳಿಸಲಾಗಿತ್ತು. 2024ರಲ್ಲಿ ಇದನ್ನು ಪರಿಷ್ಕರಣೆ ಮಾಡಲಾಗಿದ್ದು, ಹಲವು ಹೊಸ ನಿಯಮಗಳನ್ನು ರೂಪಿಸಲಾಗಿದೆ. ಡಿಸೆಂಬರ್ 31 ರಿಂದ ಈ ಹೊಸ ವರ್ಗಾವಣೆ ನೀತಿ ಜಾರಿಗೆ ಬರಲಿದೆ ಎಂದು ಸಿಐಎಸ್‌ಎಫ್ ಅಧಿಕಾರಿಗಳು ಹೇಳಿದ್ದಾರೆ.




**ಹಲವು ಹೊಸ ಆಯ್ಕೆ:** ಸಿಐಎಸ್‌ಎಫ್‌ನ ಎಲ್ಲಾ ಸಿಬ್ಬಂದಿಗಳ ವರ್ಗಾವಣೆಯಲ್ಲಿ ಬದಲಾವಣೆ ತರಲಾಗಿದೆ. ವರ್ಗಾವಣೆ ನೀತಿಯನ್ನು ಸರಳೀಕರಣಗೊಳಿಸಲಾಗಿದೆ. ಮಹಿಳಾ ಸಿಬ್ಬಂದಿಗಳು ಮೊದಲ 6 ವರ್ಷ ಆಯ್ಕೆ ಮಾಡಿಕೊಳ್ಳದ ಸ್ಥಳಗಳಲ್ಲಿ ಕೆಲಸ ಮಾಡಬೇಕು. ಉಳಿದ ಸೇವಾ ಅವಧಿಯನ್ನು ಆಯ್ಕೆ ಮಾಡಿಕೊಳ್ಳುವ ಸ್ಥಳಗಳಲ್ಲಿ ಇರಬಹುದು ಎಂದು ನೂತನ ನೀತಿ ಹೇಳಿದೆ.

ಏರಿಕೆಯಾಗಿರುವ ತುಟ್ಟಿಭತ್ಯೆ ಸರ್ಕಾರಿ ನೌಕರರ ಕೈ ಸೇರುವುದು ಯಾವಾಗ ಹೊಸ ನೀತಿಯಂತೆ ಎಲ್ಲಾ ವರ್ಗದ ಸಿಬ್ಬಂದಿ ವರ್ಗಾವಣೆ ಸಮಯದಲ್ಲಿ 10 ಸ್ಥಳದ ಆಯ್ಕೆ ಇದೆ. ಸಿಬ್ಬಂದಿಗಳು ತಮ್ಮ ವೈಯಕ್ತಿಕ ಅನುಕೂಲ ಆಧರಿಸಿ ಒಂದು ಸ್ಥಳ ಆಯ್ಕೆ ಮಾಡಬಹುದು. ಅಲ್ಲದೇ ಸೇವೆ 2 ವರ್ಷ ಮಾತ್ರ ಬಾಕಿ ಇದ್ದರೆ ಅವರ ವರ್ಗಾವಣೆಗೆ 3 ಸ್ಥಳದ ಆಯ್ಕೆ ನೀಡಲಾಗುತ್ತದೆ.

ಖಾಲಿ ಹುದ್ದೆಗಳ ಪೋಸ್ಟಿಂಗ್ ಮಾಡುವಾಗ ನಿವೃತ್ತರಾಗುವ ಸಿಬ್ಬಂದಿಗೆ ಹೆಚ್ಚಿನ ಆದ್ಯತೆ ನೀಡಲಾಗುತ್ತದೆ. ನೂತನ ನೀತಿಯಲ್ಲಿ ದಂಪತಿ, ಮಹಿಳಾ ಸಿಬ್ಬಂದಿಗೆ ವಿಶೇಷ ಆದ್ಯತೆಯನ್ನು ನೀಡಲಾಗಿದೆ. ಡಿಸೆಂಬರ್ 31 ರಿಂದ ಫೆಬ್ರವರಿ 15ರ ತನಕ ಆಯಾ ಹುದ್ದೆಗಳಿಗೆ ಅನುಗುಣವಾಗಿ ವಾರ್ಷಿಕ ವರ್ಗಾವಣೆ ಪ್ರಕ್ರಿಯೆ ನಡೆಸಲಾಗುತ್ತದೆ. ಸಿಬ್ಬಂದಿಗಳ ಮಕ್ಕಳ ಶೈಕ್ಷಣಿಕ ವರ್ಷದ ಗೊಂದಲ ಬಗೆಹರಿಸಲು ಹೊಸ ನಿಯಮದಲ್ಲಿ ಬದಲಾವಣೆ ತರಲಾಗಿದೆ. ಮಹಿಳಾ ಸಿಬ್ಬಂದಿಗಳು ಮೊದಲ 6 ವರ್ಷ ಆಯ್ಕೆ ಮಾಡಿಕೊಳ್ಳದ ಸ್ಥಳದಲ್ಲಿ ಕರ್ತವ್ಯ ನಿರ್ವಹಣೆ ಮಾಡಬೇಕಿದೆ. ಉಳಿದ ಸೇವಾವಧಿ ಪೋಸ್ಟಿಂಗ್ ಆಯ್ಕೆ ಆಧಾರಿತ ಸ್ಥಳವಾಗಿರುತ್ತದೆ. ಪತಿ ಮತ್ತು ಪತ್ನಿ ಒಂದೇ ನಗರದಲ್ಲಿ ಕಾರ್ಯ ನಿರ್ವಹಣೆ ಮಾಡಲು ಸಹ ಹೊಸ ನೀತಿ ಅವಕಾಶವನ್ನು ನೀಡಿದೆ. ಈ ಹೊಸ ನೀತಿಯಿಂದ ಸುಮಾರು 1.70 ಕೇಂದ್ರ ಸರ್ಕಾರಿ ಉದ್ಯೋಗಿಗಳಿಗೆ ಅನುಕೂಲವಾಗಲಿದೆ ಎಂದು ಹೇಳಿದೆ. ಅಲ್ಲದೇ ಹೊಸ ನೀತಿ ಅನ್ವಯ ಭದ್ರತಾ ಕಾರ್ಯದಲ್ಲಿ ಉತ್ತಮವಾಗಿ ತೊಡಗಿಸಿಕೊಳ್ಳಲು, ತಂತ್ರಜ್ಞಾನ ಮತ್ತು ಕೌಶಲ್ಯಗಳನ್ನು ಕಲಿಯಲು ಸಹ ಸಹಾಯಕವಾಗಿದೆ ಎಂದು ಸಿಐಎಸ್‌ಎಫ್ ತಿಳಿಸಿದೆ. ಸಿಐಎಸ್‌ಎಫ್ ಸಿಬ್ಬಂದಿ ಕ್ರೀಡಾ ಚಟುವಟಿಕೆಯಲ್ಲಿ ತೊಡಗಲು ಸಹ ಅನುಕೂಲವಾಗುವಂತೆ ಕೋಚ್, ತಜ್ಞರ ನಿಯೋಜನೆ ಹಾಗೂ ರಾಷ್ಟ್ರೀಯ ಕ್ರೀಡಾ ಒಕ್ಕೂಟದೊಂದಿಗೆ ಸಹಭಾಗಿತ್ವ ಕಲ್ಪಿಸಲಾಗುತ್ತದೆ. ಹೊಸ ನೀತಿಯ ಬಗ್ಗೆ ಸಿಐಎಸ್‌ಎಫ್ ಸಿಬ್ಬಂದಿಗಳು ಸಂತಸ ವ್ಯಕ್ತಪಡಿಸಿದ್ದಾರೆ.

# ‘ದ ಸಟಾನಿಕ್ ವರ್ಸೆಸ್’ ಪುಸ್ತಕ ಮಾರಾಟ




ನವದೆಹಲಿ: ದಿ.ಪ್ರಧಾನಿ ರಾಜೀವ್ ಗಾಂಧಿ ಅವರ ಸರ್ಕಾರದ ಅವಧಿಯಲ್ಲಿ ನಿಷೇಧಗೊಂಡಿದ್ದ ಬ್ರಿಟಿಷ್–ಇಂಡಿಯಾ ಕಾದಂಬರಿಕಾರ ಸಲ್ಮಾನ್ ರಶ್ದಿ ಅವರ ‘ದ ಸಟಾನಿಕ್ ವರ್ಸೆಸ್’ ಪುಸ್ತಕ 36 ವರ್ಷಗಳ ನಂತರ ಸದ್ದಿಲ್ಲದೆ ಭಾರತಕ್ಕೆ ಮರಳಿದೆ. ‘ದೆಹಲಿಯಲ್ಲಿ ಕೆಲವು ದಿನಗಳಿಂದ ಪುಸ್ತಕ ಬಿಕರಿಯಾಗುತ್ತಿದ್ದು, ಪುಸ್ತಕ ಸದ್ಯ ಕಡಿಮೆ ದಾಸ್ತಾನು ಹೊಂದಿದೆ. ಪುಸ್ತಕದ ಬಗ್ಗೆ ಓದುಗರ ಪ್ರತಿಕ್ರಿಯೆ ಅತ್ಯುತ್ತಮವಾಗಿದ್ದು, ಮಾರಾಟ ಉತ್ತಮವಾಗಿರಲಿದೆ’ ಎಂದು ಬಹ್ರಿಸನ್ಸ್ ಪುಸ್ತಕ ಮಾರಾಟಗಾರರ ಮಾಲೀಕ ರಜನಿ ಮಲ್ಹೋತ್ರಾ ತಿಳಿಸಿದ್ದಾರೆ.

ನಿಷೇಧ ಏಕೆ?: ಪುಸ್ತಕ ಧರ್ಮ ದೂಷಣೆಯಿಂದ ಕೂಡಿದೆ ಎಂದು ಪುಸ್ತಕ ಮತ್ತು ಲೇಖಕ ಸಲ್ಮಾನ್ ವಿರುದ್ಧ ಮುಸ್ಲಿಂ ಆಕ್ರೋಶ ವ್ಯಕ್ತಪಡಿಸಿದ್ದರು. ಈ ಹಿನ್ನೆಲೆಯಲ್ಲಿ ಜಗತ್ತಿನ ಹಲವು ದೇಶಗಳಲ್ಲಿ ಪುಸ್ತಕವನ್ನು ನಿಷೇಧಿಸಲಾಗಿತ್ತು.

ನಿಷೇಧ ರದ್ದು: ಪುಸ್ತಕ ಆಮದು ನಿಷೇಧ ರದ್ದು ಪ್ರಶ್ನಿಸಿದ್ದ ಅರ್ಜಿಯೊಂದನ್ನು ಇತ್ತೀಚೆಗೆ ದೆಹಲಿ ಹೈಕೋರ್ಟ್ ವಜಾಗೊಳಿಸಿತ್ತು. ಪುಸ್ತಕ ನಿಷೇಧಿಸುವ ಆದೇಶದ ಪ್ರತಿ ಹಾಜರಿಗೆ ಅಧಿಕಾರಿಗಳು ವಿಫಲರಾದ ಬೆನ್ನಲ್ಲೇ, ಅಂಥ ಯಾವುದೇ ನಿಷೇಧ ಇಲ್ಲ ಎಂದು ಹೈಕೋರ್ಟ್ ತೀರ್ಪು ನೀಡಿತ್ತು.

ಕುರಾನ್ ಎಂಜಾಯ್ ಮಾಡುವ ಗ್ರಂಥವಲ್ಲ: ಭಾರತೀಯ ಮೂಲದ ಲೇಖಕರಾಗಿರುವ ಸಲ್ಮಾನ್ ರಶ್ದಿ ವಿವಾದಾತ್ಮಕ ಕೃತಿ ಬಳಿಕವೂ ತಮ್ಮ ಹೇಳಿಕೆಗಳಿಂದ ವಿವಾದ ಸೃಷ್ಟಿಸಿದ್ದರು.‘ಇಸ್ಲಾಂನ ಪರಮೋಚ್ಚ ಗ್ರಂಥವನ್ನು ತಿದ್ದುಪಡಿ ಮಾಡಿ ಅದನ್ನು ಹೆಚ್ಚು ಮಾನವೀಯಗೊಳಿಸಬಹುದೇ’ ಎಂಬ ಪ್ರಶ್ನೆಗೆ ಉತ್ತರಿಸಿದ ಅವರು, ‘ಕುರಾನ್ ಅಷ್ಟು ಎಂಜಾಯ್ ಮಾಡಬಲ್ಲ ಕೃತಿಯಲ್ಲ. ನಿರೂಪಣೆ ಅಷ್ಟು ಸರಿಯಿಲ್ಲ’ ಎಂದು ಅಭಿಪ್ರಾಯಪಟ್ಟಿದ್ದಾರೆ.

# ಬಿಪಿಎಸ್‌ಸಿ ಪರೀಕ್ಷೆ ರದ್ದುಗೊಳಿಸಲು ಆಗ್ರಹಿಸಿ ಪ್ರತಿಭಟನೆ; ಲಾಠಿ ಚಾರ್ಜ್

**ನವದೆಹಲಿ:** ಬಿಪಿಎಸ್‌ಸಿ ಪರೀಕ್ಷೆಯನ್ನು ರದ್ದುಗೊಳಿಸುವಂತೆ ಒತ್ತಾಯಿಸಿ ಆಯೋಗದ ಕಚೇರಿಗೆ ಘೇರಾವ್ ಹಾಕಲು ಜಮಾಯಿಸಿದ ಬಿಹಾರ ಲೋಕಸೇವಾ ಆಯೋಗದ (ಬಿಪಿಎಸ್‌ಸಿ) ಆಕಾಂಕ್ಷಿಗಳ ಮೇಲೆ ಪೊಲೀಸರು ಲಾಠಿ ಚಾರ್ಜ್ ನಡೆಸಿದ್ದಾರೆ.

ಪರೀಕ್ಷಾ ಪ್ರಕ್ರಿಯೆಯಲ್ಲಿ ಅಕ್ರಮ ನಡೆದಿದೆ ಎಂದು ಆಕಾಂಕ್ಷಿಗಳು ಕಳೆದ ಹಲವು ದಿನಗಳಿಂದ ಪ್ರತಿಭಟನೆ ನಡೆಸುತ್ತಿದ್ದರು. ಇಂದು ಪ್ರತಿಭಟನಾಕಾರರು ತಮ್ಮ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಲು ಬಿಪಿಎಸ್‌ಸಿ ಕಚೇರಿಯತ್ತ ಮೆರವಣಿಗೆ ನಡೆಸಿದರು. ಇದು ಪೊಲೀಸರೊಂದಿಗೆ ಘರ್ಷಣೆಗೆ ಕಾರಣವಾಯಿತು. ಪರಿಸ್ಥಿತಿ ಹದಗೆಟ್ಟ ಹಿನ್ನೆಲೆಯಲ್ಲಿ ಅಧಿಕಾರಿಗಳು ಗುಂಪು ಚದುರಿಸಲು ಕ್ರಮ ಕೈಗೊಳ್ಳುವಂತೆ ಸೂಚಿಸಿದರು. ಈ ವೇಳೆ ಲಾಠಿಚಾರ್ಜ್ ನಡೆಸಲಾಯಿತು.

# ಹೆಂಡತಿಗಾಗಿ ನಿವೃತ್ತಿ ಪಡೆದ ಗಂಡ; ಬೀಳ್ಕೊಡುಗೆ ವೇಳೆಯೇ ಪತ್ನಿ ಸಾವು!

**ಜೈಪುರ:** ಹೆಂಡತಿಯನ್ನು ನೋಡಿಕೊಳ್ಳಲೆಂದು ನಿವೃತ್ತಿ ತೆಗೆದುಕೊಂಡಿದ್ದ ವ್ಯಕ್ತಿ ತನ್ನ ಬೀಳ್ಕೊಡುಗೆ ದಿನವೇ ಹೆಂಡತಿಯನ್ನು ಕಳೆದುಕೊಂಡಿರುವ ವಿದ್ರಾವಕ ಘಟನೆಯೊಂದು ರಾಜಸ್ಥಾನದಲ್ಲಿ ನಡೆದಿದೆ. ಸರ್ಕಾರಿ ನೌಕರನೊಬ್ಬ ಅನಾರೋಗ್ಯದಿಂದ ಬಳಲುತ್ತಿದ್ದ ತನ್ನ ಹೆಂಡತಿಯನ್ನು ನೋಡಿಕೊಳ್ಳಲೆಂದು ಸ್ವಯಂ ನಿವೃತ್ತಿ ಪಡೆದಿದ್ದರು. ಹೀಗಾಗಿ, ಅವರಿಗೆ ಆಫೀಸ್‌ನಲ್ಲಿ ಬೀಳ್ಕೊಡುಗೆ ಪಾರ್ಟಿಯನ್ನು ಆಯೋಜಿಸಲಾಗಿತ್ತು. ಆ ಪಾರ್ಟಿಗೆ ಅವರು ತಮ್ಮ ಹೆಂಡತಿಯನ್ನೂ ಕರೆದುಕೊಂಡು ಬಂದಿದ್ದರು. ಗಂಡ–ಹೆಂಡತಿ ಇಬ್ಬರಿಗೂ ಹೂವಿನ ಹಾರ ಹಾಕಿ, ನಿವೃತ್ತಿ ಜೀವನ ಸುಖಮಯವಾಗಿರಲಿ ಎಂದು ಎಲ್ಲರೂ ಹಾರೈಸುತ್ತಿದ್ದಾಗಲೇ ಆ ವ್ಯಕ್ತಿಯ ಹೆಂಡತಿ ಪ್ರಜ್ಞೆ ತಪ್ಪಿ ಬಿದ್ದು, ಮೃತಪಟ್ಟಿದ್ದಾರೆ

ರಾಜಸ್ಥಾನದ ಕೋಟಾದಲ್ಲಿ ಈ ಘಟನೆ ನಡೆದಿದೆ. ಸರ್ಕಾರಿ ನೌಕರನ ಬೀಳ್ಕೊಡುಗೆ ಸಮಾರಂಭ ವಿನಾಶಕಾರಿ ತಿರುವು ಪಡೆದುಕೊಂಡಿತು. ಅನಾರೋಗ್ಯದಿಂದ ಬಳಲುತ್ತಿದ್ದ ಅವರ ಪತ್ನಿಗೆ ಮನೆಯಲ್ಲಿ ಯಾರೂ ನೋಡಿಕೊಳ್ಳುವವರು ಇರಲಿಲ್ಲ. ಹೀಗಾಗಿ, ಅವರ ಗಂಡನೇ ಸ್ವಯಂ ನಿವೃತ್ತಿ ಪಡೆಯಲು ನಿರ್ಧರಿಸಿದ್ದರು. ಆದರೆ, ಅವರ ಕಣ್ಣೆದುರಲ್ಲೇ ಅವರ ಹೆಂಡತಿ ಮೃತಪಟ್ಟಿದ್ದಾರೆ.

ಸೆಂಟ್ರಲ್ ವೇರ್‌ಹೌಸಿಂಗ್‌ನಲ್ಲಿ ಮ್ಯಾನೇಜರ್ ಆಗಿದ್ದ ದೇವೇಂದ್ರ ಅವರು ಡಿ.24ರಂದು ತಮ್ಮ ಪತ್ನಿಯ ಆರೋಗ್ಯವನ್ನು ನೋಡಿಕೊಳ್ಳಲು ಸ್ವಯಂ ನಿವೃತ್ತಿ ತೆಗೆದುಕೊಂಡಿದ್ದರು.

ಸೆಂಟ್ರಲ್ ವೇರ್‌ಹೌಸಿಂಗ್‌ನಲ್ಲಿ ಮ್ಯಾನೇಜರ್ ಆಗಿ ಕೆಲಸ ಮಾಡುತ್ತಿದ್ದ ದೇವೇಂದ್ರ ಸ್ಯಾಂಡಲ್ ಅವರು ಹೃದ್ರೋಗಿಯಾಗಿದ್ದ ಪತ್ನಿಯ ಆರೋಗ್ಯ ಹದಗೆಟ್ಟಿದ್ದರಿಂದ ಸ್ವಯಂ ನಿವೃತ್ತಿ ಪಡೆದಿದ್ದರು. ಮಂಗಳವಾರ ಕಚೇರಿಯಲ್ಲಿ ಅವರ ಕೊನೆಯ ದಿನವಾದ್ದರಿಂದ ಅವರ ಸಹೋದ್ಯೋಗಿಗಳಿಂದ ಬೀಳ್ಕೊಡುಗೆ ಕೂಟವನ್ನು ಆಯೋಜಿಸಲಾಗಿತ್ತು. ದೇವೇಂದ್ರನ ಪತ್ನಿ ದೀಪಿಕಾ ಆ ದಿನ ಬೆಳಿಗ್ಗೆ ದಕಾನಿಯಾದಲ್ಲಿರುವ ಕಚೇರಿಗೆ ಅವರೊಂದಿಗೆ ಬಂದಿದ್ದರು. ಅವರು ನಿವೃತ್ತಿ ಪಡೆಯುತ್ತಿರುವ ತನ್ನ ಪತಿಯೊಂದಿಗೆ ಹೆಚ್ಚು ಸಮಯ ಕಳೆಯಲು ಉತ್ಸುಕಳಾಗಿದ್ದರು.

ಆದರೆ, ವಿಧಿಯಾಟವೇ ಬೇರೆ ಇತ್ತು. ಅವರಿಬ್ಬರಿಗೂ ಹೂಮಾಲೆ ಹಾಕಿ ಎಲ್ಲರೂ ಶುಭಾಶಯ ಹೇಳುತ್ತಿರುವಾಗಲೇ ದೀಪಿಕಾ ಸುಸ್ತಾಗಿ ಕುರ್ಚಿಯಲ್ಲಿ ಕುಸಿದು ಕುಳಿತರು. ಆಗ ಆಕೆಯ ಗಂಡ ಅಲ್ಲಿದ್ದವರಿಗೆ ನೀರು ತರಲು ಹೇಳಿದರು. ಆದರೆ, ಅಷ್ಟರಲ್ಲಾಗಲೇ ಆಕೆ ಪ್ರಜ್ಞೆ ತಪ್ಪಿ ಬಿದ್ದರು. ತಕ್ಷಣ ಅವರನ್ನು ಆಸ್ಪತ್ರೆಗೆ ದಾಖಲಿಸಲಾಯಿತು. ಅಷ್ಟರಲ್ಲಾಗಲೇ ಆಕೆ ಮೃತಪಟ್ಟಿದ್ದರು. ಈ ಘಟನೆಯ ವಿಡಿಯೋ ವೈರಲ್ ಆಗಿದ್ದು, ನೆಟ್ಟಿಗರು ತೀವ್ರ ಅನುಕಂಪ ವ್ಯಕ್ತಪಡಿಸುತ್ತಿದ್ದಾರೆ.

# ಮಣಿಪುರ, ಮಿಜೋರಾಂ ಸೇರಿ ಐದು ರಾಜ್ಯಗಳಿಗೆ ರಾಜ್ಯಪಾಲರ ನೇಮಕ



ಜನಾಂಗೀಯ ಸಂಘರ್ಷ ನಡೆಯುತ್ತಿರುವ ಮಣಿಪುರ ಸೇರಿದಂತೆ ಐದು ರಾಜ್ಯಗಳಿಗೆ ರಾಜ್ಯಪಾಲರನ್ನು ನೇಮಕ ಮಾಡಲಾಗಿದೆ. ರಾಷ್ಟ್ರಪತಿಗಳು ಐದು ರಾಜ್ಯಗಳಿಗೆ ರಾಜ್ಯಪಾಲರನ್ನು ನೇಮಿಸಿ ಆದೇಶ ಹೊರಡಿಸಿದ್ದಾರೆ.

ಮಾಜಿ ಗೃಹ ಕಾರ್ಯದರ್ಶಿ ಅಜಯ್ ಭಲ್ಲಾ ಮಣಿಪುರ ರಾಜ್ಯದ ಗವರ್ನರ್ ಆಗಿ ನೇಮಕಗೊಂಡಿದ್ದಾರೆ. ಮಾಜಿ ಸೇನಾ ಮುಖ್ಯಸ್ಥ ವಿಕೆ ಸಿಂಗ್ ಮಿಜೋರಾಂ ರಾಜ್ಯದ ರಾಜ್ಯಪಾಲರಾಗಿ ನೇಮಕವಾಗಿದ್ದಾರೆ. ಹಿಂದೂ ಮೈತೇಯಿ ಮತ್ತು ಕುಕಿ ಕ್ರಿಶ್ಚಿಯನ್ ಸಮುದಾಯದ ನಡುವೆ ಜನಾಂಗೀಯ ಸಂಘರ್ಷ ನಡೆಯುತ್ತಿದ್ದು ರಾಜ್ಯದಲ್ಲಿ ರಾಜಕೀಯ ಅನಿಶ್ಚಿತತೆಯ ನಡುವೆ ಹೊಸ ರಾಜ್ಯಪಾಲರ ನೇಮಕ ಮಾಡಲಾಗಿದೆ.

ಮಾಜಿ ಸಚಿವ ಮತ್ತು ನಿವೃತ್ತ ಸೇನಾ ಮುಖ್ಯಸ್ಥ ವಿಕೆ ಸಿಂಗ್ ಅವರನ್ನು ಮಿಜೋರಾಂ ರಾಜ್ಯದ ರಾಜ್ಯಪಾಲರನ್ನಾಗಿ ನೇಮಕ ಮಾಡಲಾಗಿದೆ. ಕೇರಳ ಮತ್ತು ಬಿಹಾರ ರಾಜ್ಯಪಾಲರಿಗೆ ರಾಜ್ಯಗಳನ್ನು ವಿನಿಮಯ ಮಾಡಲಾಗಿದೆ. ಕೇರಳ ರಾಜ್ಯಪಾಲರಾಗಿದ್ದ ಆರಿಫ್ ಮೊಹಮ್ಮದ್‌ರನ್ನು ಬಿಹಾರ ರಾಜ್ಯಪಾಲರನ್ನಾಗಿ ನೇಮಕ ಮಾಡಲಾಗಿದ್ದು, ಬಿಹಾರ ರಾಜ್ಯಪಾಲರಾಗಿದ್ದ ರಾಜೇಂದ್ರ ವಿಶ್ವನಾಥ್ ಅರ್ಲೇಕರ್ ಅವರನ್ನು ಕೇರಳ ರಾಜ್ಯಪಾಲರನ್ನಾಗಿ ನೇಮಕ ಮಾಡಲಾಗಿದೆ. ಒಡಿಶಾ ರಾಜ್ಯಪಾಲ ರಘುಬರ್ ದಾಸ್ ನೀಡಿದ್ದ ರಾಜೀನಾಮೆಯನ್ನು ರಾಷ್ಟ್ರಪತಿ ಅಂಗೀಕರಿಸಿದ್ದು, ಅವರ ಸ್ಥಾನಕ್ಕೆ ಮಿಜೋರಾಂ ರಾಜ್ಯಪಾಲ ಡಾ ಹರಿಬಾಬು ಕಂಬಂಪತಿ ಅವರನ್ನು ನೇಮಿಸಲಾಗಿದೆ. ಮಣಿಪುರಕ್ಕೆ ಅಜಯ್ ಕುಮಾರ್ ಭಲ್ಲಾ ಅಸ್ಸಾಂ ಮೇಘಾಲಯ ಕೇಡರ್‌ನ 1984–ಬ್ಯಾಚ್‌ನ ಐಎಎಸ್ ಅಧಿಕಾರಿಯಾಗಿದ್ದ ಅಜಯ್ ಕುಮಾರ್ ಭಲ್ಲಾ ಹಲವು ಹುದ್ದೆಗಳನ್ನು ಯಶಸ್ವಿಯಾಗಿ ನಿಭಾಯಿಸಿದ್ದಾರೆ. 2019ರಲ್ಲಿ ಕೇಂದ್ರ ಗೃಹ ಕಾರ್ಯದರ್ಶಿಯಾಗಿ ನೇಮಕಗೊಂಡ ಅವರು ಐದು ವರ್ಷಗಳ ಕಾಲ ಅಂದರೆ 2024ರವರೆಗೆ ಕರ್ತವ್ಯ ನಿಭಾಯಿಸಿದ್ದಾರೆ.

ಕೇರಳ ರಾಜ್ಯಪಾಲರ ನೇಮಕ ವಿವಾದ ಕೇರಳ ಆಡಳಿತಾರೂಢ ಸರ್ಕಾರ ಮತ್ತು ರಾಜ್ಯಪಾಲರ ನಡುವ ವೈಮನಸ್ಸು ಉಂಟಾಗಿತ್ತು. ಮಂಗಳವಾರ ರಾಜ್ಯಪಾಲ ಆರಿಫ್ ಮೊಹಮ್ಮದ್ ಖಾನ್ ಆಯೋಜಿಸಿದ್ದ ಕ್ರಿಸ್‌ಮಸ್ ಆಚರಣೆಗೆ ಸತತ ಎರಡನೇ ವರ್ಷವೂ ಕೇರಣ ಸಿಎಂ ಪಿಣರಾಯಿ ವಿಜಯನ್ ಮತ್ತು ಸರ್ಕಾರದ ಸಚಿವರು ಗೈರು ಹಾಜರಾಗಿದ್ದರು.

ವಿಶ್ವವಿದ್ಯಾಲಯಗಳಿಗೆ ಮಾಡಿದ ನೇಮಕಾತಿಗಳ ವಿಚಾರದಲ್ಲಿ ರಾಜ್ಯಪಾಲರು ಮತ್ತು ಅಧಿಕಾರದಲ್ಲಿರುವ ಸಿಪಿಐ(ಎಂ) ಮತ್ತು ಪಕ್ಷದ ವಿದ್ಯಾರ್ಥಿ ಘಟಕವಾದ ಎಸ್‌ಎಫ್‌ಐ ನಡುವೆ ವೈಮನಸ್ಸು ಉಂಟಾಗಿತ್ತು.

ಮಾಜಿ ಸಚಿವ, ಸೇನಾಧಿಕಾರಿಗೆ ರಾಜ್ಯಪಾಲರ ಹುದ್ದೆ ನಾಗರಿಕ ವಿಮಾನಯಾನ ಮತ್ತು ರಸ್ತೆ ಸಾರಿಗೆ ಮತ್ತು ಹೆದ್ದಾರಿಗಳ ಮಾಜಿ ರಾಜ್ಯ ಸಚಿವ ಮತ್ತು ನಿವೃತ್ತ ಜನರಲ್, ವಿಕೆ ಸಿಂಗ್ ಮಿಜೋರಾಂ ರಾಜ್ಯದ ರಾಜ್ಯಪಾಲರಾಗಿ ನೇಮಕಗೊಂಡಿದ್ದಾರೆ. 2014 ರಿಂದ ಎರಡು ಬಾರಿ ಘಾಜಿಯಾಬಾದ್‌ನಿಂದ ಚುನಾವಣೆಗೆ ನಿಂತಿದ್ದರು. 2024ರ ಚುನಾವಣೆಗೆ ಮುನ್ನ ಚುನಾವಣಾ ರಾಜಕೀಯದಿಂದ ಹಿಂದೆ ಸರಿದಿದ್ದರು. ಈಗ ಅವರಿಗೆ ರಾಜ್ಯಪಾಲ ಹುದ್ದೆ ಅರಸಿ ಬಂದಿದೆ.

# ಕಂದಕಕ್ಕೆ ಬಸ್ ಬಿದ್ದು 4 ಜನ ಸಾವು, 24 ಮಂದಿಗೆ ಗಾಯ

**ನೈನಿತಾಲ್:** ಉತ್ತರಾಖಂಡದ ನೈನಿತಾಲ್‌ನಲ್ಲಿ ಇಂದು ಬಸ್‌ವೊಂದು ಸುಮಾರು 1,500 ಅಡಿ ಆಳದ ಕಂದಕಕ್ಕೆ ಬಿದ್ದ ಪರಿಣಾಮ ನಾಲ್ಕು ಮಂದಿ ಸಾವನ್ನಪ್ಪಿ, 24 ಜನರು ಗಾಯಗೊಂಡಿರುವ ಘಟನೆ ನಡೆದಿದೆ.



ರಕ್ಷಣಾ ಕಾರ್ಯಾಚರಣೆಯನ್ನು ಕೈಗೊಳ್ಳಲು ಪರಿಹಾರ ತಂಡವನ್ನು ಸ್ಥಳಕ್ಕೆ ಕಳುಹಿಸಲಾಗಿದೆ. ಸಂತ್ರಸ್ತರಿಗೆ ಸಹಾಯ ಮಾಡಲು ರಾಜ್ಯ ವಿಪತ್ತು ನಿರ್ವಹಣಾ ಪಡೆ (ಖಆಖಈ) ತಂಡವು ಸ್ಥಳೀಯ ಪೊಲೀಸ್, ಅಗ್ನಿಶಾಮಕ ದಳ ಮತ್ತು ಸ್ಥಳೀಯ ನಿವಾಸಿಗಳು ಧಾವಿಸಿದ್ದಾರೆ.

ನೈನಿತಾಲ್ ಜಿಲ್ಲೆಯ ಭೀಮತಾಲ್‌ನಲ್ಲಿ ರಸ್ತೆ ಮಾರ್ಗದ ಬಸ್ ಹಳ್ಳಕ್ಕೆ ಬಿದ್ದಿದೆ. ಸ್ಥಳಕ್ಕಾಗಮಿಸಿದ ಎಸ್‌ಡಿಆರ್‌ಎಫ್ ಮತ್ತು ಪೊಲೀಸರು ರಕ್ಷಣಾ ಕಾರ್ಯಾಚರಣೆ ಆರಂಭಿಸಿದ್ದಾರೆ. ಗಾಯಾಳುಗಳನ್ನು ಕಂದಕದಿಂದ ಹೊರತೆಗೆದು ಸಮೀಪದ ಆಸ್ಪತ್ರೆಗೆ ದಾಖಲಿಸಲಾಗಿದೆ. ಮಾಹಿತಿ ಪ್ರಕಾರ ಬಸ್ ನಲ್ಲಿ 20ರಿಂದ 25 ಮಂದಿ ಇದ್ದರು.

ಈ ಅಪಘಾತದ ಬಗ್ಗೆ ಉತ್ತರಾಖಂಡ ಮುಖ್ಯಮಂತ್ರಿ ಪುಷ್ಕರ್ ಸಿಂಗ್ ಧಾಮಿ ಸಂತಾಪ ವ್ಯಕ್ತಪಡಿಸಿದ್ದಾರೆ. “ಭೀಮತಾಲ್ ಬಳಿ ಬಸ್ ಅಪಘಾತದ ಸುದ್ದಿ ತುಂಬಾ ದುಃಖಕರವಾಗಿದೆ. ತಕ್ಷಣದ ಪರಿಹಾರ ಮತ್ತು ರಕ್ಷಣಾ ಕಾರ್ಯಾಚರಣೆಗೆ ಸ್ಥಳೀಯ ಆಡಳಿತಕ್ಕೆ ನಿರ್ದೇಶನ ನೀಡಲಾಗಿದೆ. ಎಲ್ಲಾ ಪ್ರಯಾಣಿಕರ ಸುರಕ್ಷತೆಗಾಗಿ ನಾನು ಬಾಬಾ ಕೇದಾರ್‌ನಲ್ಲಿ ಪ್ರಾರ್ಥಿಸುತ್ತೇನೆ” ಎಂದು ಸಿಎಂ ಎಕ್ಸ್‌ನಲ್ಲಿ ಬರೆದಿದ್ದಾರೆ.

ಬಸ್ ಪಿಥೋರಗಢದಿಂದ ಹಲ್ವಾನಿಗೆ ಹೋಗುತ್ತಿದ್ದಾಗ ಭೀಮತಾಲ್ ಬಳಿ ಈ ಅಪಘಾತ ಸಂಭವಿಸಿದೆ. ಅಪಘಾತದಲ್ಲಿ ನಾಲ್ವರು ಸಾವನ್ನಪ್ಪಿದ್ದಾರೆ ಎಂದು ವರದಿಯಾಗಿದೆ. ಮೃತರಲ್ಲಿ ಒಬ್ಬ ಮಹಿಳೆ ಮತ್ತು ಇಬ್ಬರು ಪುರುಷರು ಇದ್ದಾರೆ ಎಂದು ಹೇಳಲಾಗಿದೆ. ಇದು ಇಂದಿನ ಎರಡನೇ ದೊಡ್ಡ ಅಪಘಾತವಾಗಿದೆ. ಬೆಳಗ್ಗೆ ಬಾಗೇಶ್ವರದಿಂದ ಡೆಹ್ರಾಡೂನ್‌ಗೆ ತೆರಳುತ್ತಿದ್ದ ಬಸ್ಸೊಂದು ರಿಷಿಕೇಶ–ಡೆಹ್ರಾಡೂನ್ ರಸ್ತೆಯ ಸಾತ್ ಮೋರ್ ಬಳಿ ನಿಯಂತ್ರಣ ತಪ್ಪಿ ಅಪಘಾತಕ್ಕೀಡಾಗಿದೆ. ಬಸ್ಸಿನಲ್ಲಿ ಒಟ್ಟು 45 ಶಾಲಾ ಬಾಲಕಿಯರಿದ್ದರು. ಎಲ್ಲಾ ಹುಡುಗಿಯರು ಖೇಲ್ ಮಹಾಕುಂಭದಲ್ಲಿ ಭಾಗವಹಿಸಲು ಡೆಹ್ರಾಡೂನ್‌ಗೆ ಹೋಗುತ್ತಿದ್ದರು. ಹಾಗೇ, ನವೆಂಬರ್ 4ರಂದು ಉತ್ತರಾಖಂಡದ ಅಲ್ಮೋರಾ ಜಿಲ್ಲೆಯಲ್ಲಿ ಒಂದು ದೊಡ್ಡ ಅಪಘಾತ ಸಂಭವಿಸಿತ್ತು. ಈ ಅಪಘಾತದಲ್ಲಿ 38 ಮಂದಿ ಸಾವನ್ನಪ್ಪಿದ್ದರು.

# ಗಲಾಟೆ; ಕೈದಿಗಳು ಪರಾರಿ

**ಮೊಜಾಂಬಿಕ್:** ಮೊಜಾಂಬಿಕ್‌ನಲ್ಲಿ ಚುನಾವಣೆಗೆ ಸಂಬಂಧಿಸಿದ ಗಲಾಟೆಗಳು ನಡೆಯುತ್ತಿದ್ದು, ಅಶಾಂತಿ ತಲೆದೋರಿದೆ. ಇದೇ ಸಮಯವನ್ನು ಬಳಸಿಕೊಂಡು 1,500 ಕೈದಿಗಳು ಜೈಲಿನಿಂದ ಪರಾರಿಯಾಗಿದ್ದಾರೆ.

ಮೊಜಾಂಬಿಕ್‌ನ ರಾಜಧಾನಿ ಮಾಪುಟೊದಲ್ಲಿನ ಜೈಲಿನಲ್ಲಿ ನಡೆದ ಗಲಭೆಯಲ್ಲಿ 33 ಜನರು ಸಾವನ್ನಪ್ಪಿದ್ದಾರೆ ಮತ್ತು 15 ಮಂದಿ ಗಾಯಗೊಂಡಿದ್ದಾರೆ. ಗಲಭೆಯಿಂದಾಗಿ 1534 ಕೈದಿಗಳು ಜೈಲಿನಿಂದ ಪರಾರಿಯಾಗಿದ್ದು, ಅವರಲ್ಲಿ 150 ಕೈದಿಗಳನ್ನು ಮರಳಿ ಸೆರೆಹಿಡಿಯಲಾಗಿದೆ ಎಂದು ಹೇಳಲಾಗುತ್ತಿದೆ. ಮೊಜಾಂಬಿಕ್‌ನ ಇತರ ಎರಡು ಜೈಲುಗಳಲ್ಲಿ ಗಲಾಟೆಯ ವರದಿಗಳಿವೆ. ಮೊಜಾಂಬಿಕ್‌ನಲ್ಲಿ ನಡೆಯುತ್ತಿರುವ ಪ್ರತಿಭಟನೆಯಲ್ಲಿ ಇದುವರೆಗೆ ನೂರಾರು ಜನರು ಸಾವನ್ನಪ್ಪಿದ್ದಾರೆ. ಈವರೆಗೆ ಬಂದಿರುವ ಮಾಹಿತಿ ಪ್ರಕಾರ ಹತ್ಯೆಯಾದವರ ಗುರುತು ಇನ್ನೂ ಸ್ಪಷ್ಟವಾಗಿಲ್ಲ.

ರಾಜಧಾನಿಯಿಂದ ಸುಮಾರು 15 ಕಿಲೋಮೀಟರ್ ದೂರದಲ್ಲಿರುವ ಹೈ–ಸೆಕ್ಯುರಿಟಿ ಜೈಲಿನಿಂದ ಒಟ್ಟು 1,534 ಕೈದಿಗಳು ತಪ್ಪಿಸಿಕೊಂಡಿದ್ದಾರೆ. ತಪ್ಪಿಸಿಕೊಳ್ಳಲು ಪ್ರಯತ್ನಿಸುತ್ತಿದ್ದವರಲ್ಲಿ, ಜೈಲು ಸಿಬ್ಬಂದಿಯೊಂದಿಗಿನ ಘರ್ಷಣೆಯಲ್ಲಿ 33 ಮಂದಿ ಸಾವನ್ನಪ್ಪಿದರು ಮತ್ತು 15 ಮಂದಿ ಗಾಯಗೊಂಡರು, ಸೇನೆಯ ಬೆಂಬಲದೊಂದಿಗೆ ಶೋಧ ಕಾರ್ಯಾಚರಣೆಯು 150 ಪರಾರಿಯಾದವರನ್ನು ಬಂಧಿಸಲು ಸಾಧ್ಯವಾಯಿತು. ಸುಮಾರು 30 ಕೈದಿಗಳು ಕಳೆದ ಏಳು ವರ್ಷಗಳಿಂದ ಉತ್ತರ ಪ್ರಾಂತ್ಯದ ಕ್ಯಾಬೊ ಡೆಲ್ಗಾಡೊದಲ್ಲಿ ಅಶಾಂತಿ ಮತ್ತು ದಾಳಿಗಳ ಹಿಂದೆ ಸಶಸ್ತ್ರ ಗುಂಪುಗಳೊಂದಿಗೆ ಸಂಬಂಧ ಹೊಂದಿದ್ದಾರೆ. 1975 ರಿಂದ ಅಧಿಕಾರದಲ್ಲಿರುವ ಫ್ರೆಲಿಮೊ ಅಕ್ಟೋಬರ್ 9 ರ ಅಧ್ಯಕ್ಷೀಯ ಚುನಾವಣೆಯಲ್ಲಿ ಗೆದ್ದಿದೆ ಎಂದು ನ್ಯಾಯಾಲಯ ದೃಢಪಡಿಸಿದೆ.

ಇದಾದ ಬಳಿಕ ಘರ್ಷಣೆಗಳು ಹೆಚ್ಚಾಗಿದ್ದವು. ವಿಧ್ವಂಸಕ ಕೃತ್ಯಗಳು ಮುಂದುವರೆದಂತೆ ರಾಜಧಾನಿಯ ಹಲವಾರು ಪ್ರದೇಶಗಳಲ್ಲಿ ಬ್ಯಾರಿಕೇಡ್‌ಗಳನ್ನು ನಿರ್ಮಿಸಲಾಗಿತ್ತು. ಈಗಾಗಲೇ ಸಾಕಷ್ಟು ಅಂಗಡಿಗಳನ್ನು ಲೂಟಿ ಮಾಡಲಾಗಿದೆ. ಆಂಬ್ಯುಲೆನ್ಸ್, ಮೆಡಿಕಲ್ ಸ್ಟೋರ್ಸ್ ಸೇರಿದಂತೆ ಹಲವನ್ನು ಸುಟ್ಟುಹಾಕಲಾಗಿದೆ.

# ತಿರುಪತಿ ತಿಮ್ಮಪ್ಪನ ವೈಕುಂಠ ದರ್ಶನ ಟಿಕೆಟ್ ಜನವರಿಯಲ್ಲಿ ಸರ್ವ ದರ್ಶನ ಟೋಕನ್ ವಿತರಣೆ

**ತಿರುಪತಿ:** ತಿಮ್ಮಪ್ಪನ ವೈಕುಂಠ ದರ್ಶನಕ್ಕಾಗಿ ಜನವರಿ 10 ರಿಂದ 12ರ ವರೆಗೆ ಟೋಕನ್ ನೀಡಲಾಗುವುದು ಎಂದು ಟಿಟಿಡಿ ಪ್ರಕಟಣೆ ಹೊರಡಿಸಿದೆ. ಈ ಬಾರಿ ಸಾಮಾನ್ಯ ಜನರು ಹೆಚ್ಚಾಗಿ ಪಾಲ್ಗೊಳ್ಳುವುದಕ್ಕಾಗಿ ಮೊದಲ ಆದ್ಯತೆ ನೀಡಲಾಗಿದೆ ಎಂದು ಟಿಟಿಡಿ ಇಒ ಶ್ಯಾಮಲಾ ರಾವ್ ಮತ್ತು ಹೆಚ್ಚುವರಿ ಇಒ ವೆಂಕಯ್ಯ ಚೌಧರಿ ಹೇಳಿದ್ದಾರೆ.



ಸರ್ವದರ್ಶನ ಟಿಕೆಟ್‌ಗಳ ಮಾರಾಟಕ್ಕಾಗಿ ತಿರುಮಲದ ಒಂದು ಕೇಂದ್ರದಲ್ಲಿ ನಾಲ್ಕು ಕೌಂಟರ್ ಮತ್ತು ತಿರುಪತಿಯಲ್ಲಿರುವ 8 ಕೇಂದ್ರಗಳಲ್ಲಿನ 87 ಕೌಂಟರ್‌ಗಳು ಸೇರಿದಂತೆ ಒಟ್ಟು 91 ಕೌಂಟರ್‌ಗಳನ್ನು ಸ್ಥಾಪಿಸಲಾಗಿದೆ ಎಂದು ಪ್ರಕಟಣೆಯಲ್ಲಿ ಬಹಿರಂಗಪಡಿಸಲಾಗಿದೆ.

ಜನವರಿ 10, 11 ಮತ್ತು 12 ರಂದು ಬೆಳಗ್ಗೆ 9 ಗಂಟೆಯಿಂದ ಸಂಜೆ 5ಗಂಟೆವರೆಗೆ 1.20 ಲಕ್ಷ ಟೋಕನ್‌ಗಳನ್ನು ಬಿಡುಗಡೆ ಮಾಡಲಾಗುವುದು ಎಂದು ಇಒ ಶ್ಯಾಮಲಾ ರಾವ್ ಹೇಳಿದರು. ಉಳಿದ ದಿನಾಂಕಗಳ ಬಗ್ಗೆ ಒಂದು ದಿನ ಮುಂಚಿತವಾಗಿ ಮಾಹಿತಿ ನೀಡಲಾಗುವುದು ಎಂದು ಅವರು ತಿಳಿಸಿದರು.


ಭಕ್ತರು ತಮ್ಮ ಆಧಾರ್ ಕಾರ್ಡ್ ತೋರಿಸಿ ಸರ್ವದರ್ಶನ ಟೈಮ್ ಸ್ಲಾಟ್ ಟೋಕನ್ ಪಡೆಯಬೇಕು, ಟೋಕನ್ ಇಲ್ಲದ ಭಕ್ತರಿಗೆ ಈ ಹತ್ತು ದಿನಗಳಲ್ಲಿ ತಿಮ್ಮಪ್ಪನ ದರ್ಶನ ಪಡೆಯಲು ಸಾಧ್ಯವಾಗುವುದಿಲ್ಲ ಎಂದು ಇದೇ ವೇಳೆ ಸ್ಪಷ್ಟಪಡಿಸಲಾಗಿದೆ.

# ಉಕ್ರೇನ್ ಮೇಲೆ ರಷ್ಯಾ ಪ್ರತೀಕಾರದ ದಾಳಿ ಜಪಾನ್ ಪ್ರಧಾನಿ ಜತೆ ಮಾತನಾಡಿದ ಝೆಲೆನ್ಸ್ಕಿ

**ಕೀವ್:** ಕ್ರಿಸ್‌ಮಸ್ ಸಂದರ್ಭದಲ್ಲೇ ಉಕ್ರೇನ್ ಮೇಲೆ ರಷ್ಯಾ ಪ್ರತಿಕಾರ ತೀರಿಸಿಕೊಂಡಿದೆ. ರಷ್ಯಾದ ಕಜಾನ್ ಮೇಲೆ ಡ್ರೋನ್ ದಾಳಿ ನಡೆಸಿದ್ದ ಉಕ್ರೇನ್ ಮೇಲೆ ರಷ್ಯಾ ಕ್ಷಿಪಣಿ ದಾಳಿ ನಡೆಸಿದೆ. ಉಕ್ರೇನ್‌ನ ಮೂಲ ಸೌಕರ್ಯಗಳನ್ನು ಗುರಿಯಾಗಿಸಿಕೊಂಡು ರಷ್ಯಾ ದಾಳಿ ನಡೆಸಿದೆ. ರಷ್ಯಾದ ಕ್ಷಿಪಣಿ ದಾಳಿಯಿಂದಾಗಿ ಉಕ್ರೇನ್ ಅಪಾರ ಪ್ರಮಾಣದ ಹಾನಿ ಅನುಭವಿಸಿದೆ.

ಈ ನಡುವೆ ಉಕ್ರೇನ್ ಅಧ್ಯಕ್ಷ ವೊಲೊಡಿಮಿರ್ ಝೆಲೆನ್ಸ್ಕಿ ಜಪಾನ್ ನೂತನ ಪ್ರಧಾನಿ ಶಿಗೆರು ಇಶಿಬಾ ಅವರೊಂದಿಗೆ ಮಾತನಾಡಿದ್ದಾರೆ. ಜಪಾನ್ ಉಕ್ರೇನ್‌ಗೆ ನಿರಂತರ ಬೆಂಬಲ ನೀಡಿಕ್ಕಾಗಿ ಝೆಲೆನ್ಸ್ಕಿ ಧನ್ಯವಾದ ತಿಳಿಸಿದ್ದಾರೆ. ವಿಶೇಷವಾಗಿ ಮಾನವೀಯ ಮತ್ತು ಆರ್ಥಿಕ ಸಹಾಯದ ರೂಪದಲ್ಲಿ, ಸಾವಿರಾರು ಜೀವಗಳನ್ನು ಉಳಿಸಲು ಸಹಾಯ ಮಾಡಿದ ಜಪಾನಿನ ಪ್ರಧಾನ ಮಂತ್ರಿಗೆ ಅವರು ಆಭಾರಿಯಾಗಿದ್ದೇನೆ ಎಂದು ಹೇಳಿದ್ದಾರೆ.

ಘ ನಲ್ಲಿ ಅವರು ಈ ಬಗ್ಗೆ ಪೋಸ್ಟ್ ಮಾಡಿರುವ ಝೆಲೆನ್ಸ್ಕಿ ಅವರು ಜಪಾನಿನ ನಾಯಕನೊಂದಿಗಿನ ತಮ್ಮ ಸಂಭಾಷಣೆಯ ವಿವರಗಳನ್ನು ಹಂಚಿಕೊಂಡಿದ್ದಾರೆ. ನಾನು ಜಪಾನ್‌ನ ಪ್ರಧಾನಿ ಶಿಗೆರು ಇಶಿಬಾ ಅವರೊಂದಿಗೆ ಮಾತನಾಡಿದ್ದೇನೆ. ಪ್ರಧಾನಿಯಾಗಿ ಅಧಿಕಾರ ಸ್ವೀಕಾರ ಮಾಡಿದ್ದಕ್ಕಾಗಿ ಅವರನ್ನು ಅಭಿನಂದಿಸುತ್ತೇನೆ ಮತ್ತು ಜಪಾನ್‌ನ ಮಾನವೀಯ ಮತ್ತು ಆರ್ಥಿಕ ಸಹಾಯಕ್ಕಾಗಿ ಧನ್ಯವಾದಗಳು, ಇದು ನಮಗೆ ಸಾವಿರಾರು ಜನರ ಜೀವವನ್ನು ಉಳಿಸಲು ಸಹಾಯ ಮಾಡುತ್ತದೆ ಎಂದು ಟ್ವೀಟ್ ನಲ್ಲಿ ಅವರು ಹೇಳಿದ್ದಾರೆ.



ಕ್ರಿಸ್‌ಮಸ್ ರಾತ್ರಿ ಉಕ್ರೇನ್ ನ ಮೂಲಸೌಕರ್ಯದ ಮೇಲೆ ರಷ್ಯಾದ ಸಾಮೂಹಿಕ ದಾಳಿಯನ್ನು ನಾನು ಖಂಡಿಸುತ್ತೇನೆ. ಚಳಿಗಾಲದಲ್ಲಿ ಉಕ್ರೇನಿಯನ್ನರಿಗೆ ವಿದ್ಯುತ್ ಇಲ್ಲದಂತೆ ಮಾಡಲು ರಷ್ಯಾ ಪ್ರಯತ್ನಿಸುತ್ತಿರುವುದರಿಂದ ಇಂಧನ ವ್ಯವಸ್ಥೆಗಳನ್ನು ರಕ್ಷಿಸುವುದು ಮತ್ತು ಮರುಸ್ಥಾಪಿಸುವುದು ನಮ್ಮ ಮೊದಲ ಆದ್ಯತೆಯಾಗಿದೆ ಎಂದು ಅವರು ಒತ್ತಿ ಹೇಳಿದ್ದರೆ.

**ರಷ್ಯಾ ದಾಳಿ ಖಂಡಿಸಿದ ಜಪಾನ್:** ಜಪಾನ್ ಪ್ರಧಾನ ಮಂತ್ರಿ ಇಶಿಬಾ ರಷ್ಯಾದ ಆಕ್ರಮಣದಲ್ಲಿ ಉತ್ತರ ಕೊರಿಯಾದ ಒಳಗೊಳ್ಳುವಿಕೆಯನ್ನು ಖಂಡಿಸಿದ್ದಾರೆ, ಇದು ಗಂಭೀರ ಕಳವಳವನ್ನುಂಟು ಮಾಡಿದೆ. ಇಂಡೋ–ಪೆಸಿಫಿಕ್ ಭದ್ರತೆಗೆ ಬೆದರಿಕೆ ಆಗಿದೆ ಎಂದು ಇಶಿಬಾ ಕಳವಳ ವ್ಯಕ್ತಪಡಿಸಿದ್ದಾರೆ. ಆಕ್ರಮಣಕಾರರ ಮೇಲೆ ನಿರ್ಬಂಧಗಳನ್ನು ಹೆಚ್ಚಿಸಲು ಜಪಾನ್ ಸಿದ್ಧವಾಗಿದೆ ಎಂದು ಹೇಳಿದ್ದಾರೆ ಎಂಬುದು ಝೆಲೆನ್ಸ್ಕಿ ಅವರ ಎಕ್ಸ್ ಹ್ಯಾಂಡಲ್ ಪೋಸ್ಟ್ ನಲ್ಲಿ ಹೇಳಲಾಗಿದೆ.

ರಷ್ಯಾ ವಿರುದ್ಧ ಆಕ್ರೋಶ ಹೊರ ಹಾಕಿದ ಝೆಲೆನ್ಸ್ಕಿ: ಝೆಲೆನ್ಸ್ಕಿ ರಷ್ಯಾದ ಬೃಹತ್ ಕ್ಷಿಪಣಿ ಮತ್ತು ಡ್ರೋನ್ ದಾಳಿಯನ್ನು ಖಂಡಿಸಿದ್ದಾರೆ. ಇದು ಉಕ್ರೇನ್‌ನ ಇಂಧನ ಮೂಲಸೌಕರ್ಯವನ್ನು ಗುರಿಯಾಗಿಸಿಕೊಂಡಿದ್ದರಿಂದ ಇದೊಂದು ಅಮಾನವೀಯ ಕ್ರಮ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಪ್ರಾಥಮಿಕ ವರದಿಗಳ ಪ್ರಕಾರ, ನಮ್ಮ ರಕ್ಷಣಾ ಪಡೆಗಳು ರಷ್ಯಾದ 50 ಕ್ಕೂ ಹೆಚ್ಚು ಕ್ಷಿಪಣಿಗಳು ಮತ್ತು ಗಮನಾರ್ಹ ಸಂಖ್ಯೆಯ ಡ್ರೋನ್‌ಗಳನ್ನು ಹೊಡೆದುರುಳಿಸುವಲ್ಲಿ ಯಶಸ್ವಿಯಾಗಿದೆ. ದುರದೃಷ್ಟವಶಾತ್, ಭಾರಿ ಹಾನಿ ಸಂಭವಿಸಿದೆ. ಹಲವಾರು ಪ್ರದೇಶಗಳಲ್ಲಿ ವಿದ್ಯುತ್ ಸಂಪರ್ಕ ಕಡಿತಗೊಂಡಿದೆ. ವಿದ್ಯುತ್ ಪೂರೈಕೆಯನ್ನು ಪುನಃಸ್ಥಾಪಿಸಲು ಪವರ್ ಎಂಜಿನಿಯರ್‌ಗಳು ಕೆಲಸ ಮಾಡುತ್ತಿದ್ದಾರೆ.

ಆದಷ್ಟು ಬೇಗ ಎಲ್ಲವೂ ಸರಿಯಾಗಲಿದೆ ಎಂದು ಅವರು ತಮ್ಮ ಎಕ್ಸ್ ಹ್ಯಾಂಡಲ್ ಪೋಸ್ಟ್ ನಲ್ಲಿ ವಿವರಿಸಿದ್ದಾರೆ. ರಷ್ಯಾದ ಕ್ಷಿಪಣಿ ದಾಳಿಯಿಂದ ದಕ್ಷಿಣ ಉಕ್ರೇನ್‌ನಲ್ಲಿ ಕನಿಷ್ಠ ಒಬ್ಬರು ಸಾವನ್ನಪ್ಪಿದ್ದಾರೆ ಮತ್ತು ಮೂವರು ಗಾಯಗೊಂಡಿದ್ದಾರೆ, ಇದು ದೇಶಾದ್ಯಂತ ಇಂಧನ ಮೂಲಸೌಕರ್ಯವನ್ನು ಹಾನಿಗೊಳಿಸಿದೆ ಎಂದು ಅಲ್ ಜಜೀರಾ ವರದಿ ಹೇಳಿದೆ.

# ಚೊಚ್ಚಲ ಪಂದ್ಯದಲ್ಲಿ ಕೊನ್‌ಸ್ಟಾಸ್ ಅಬ್ಬರ



**ಮೆಲ್ಬೋರ್ನ್:** ಚೊಚ್ಚಲ ಪಂದ್ಯದಲ್ಲಿ ಸ್ಯಾಮ್ ಕೊನ್‌ಸ್ಟಾಸ್ 65 ಎಸೆತಗಳಲ್ಲಿ ಬಿರುಸಿನ 60 ರನ್ ಗಳಿಸುವ ಮೂಲಕ ಅಂತಾರಾಷ್ಟ್ರೀಯ ಕ್ರಿಕೆಟ್‌ಗೆ ಭರ್ಜರಿ ಎಂಟ್ರಿ ಕೊಟ್ಟಿದ್ದಾರೆ.

ಗುರುವಾರ ಎಂಸಿಜಿಯಲ್ಲಿ ಆರಂಭವಾಗಿರುವ ನಾಲ್ಕನೇ ಟೆಸ್ಟ್‌ನ ಮೊದಲ ದಿನದ ಭೋಜನ ವಿರಾಮದ ವೇಳೆಗೆ ಆಸ್ಟ್ರೇಲಿಯಾ 25 ಓವರ್‌ಗಳಲ್ಲಿ ಒಂದು ವಿಕೆಟ್ ಕಳೆದುಕೊಂಡು 112ರನ್ ಗಳನ್ನು ಸೇರಿಸಿದೆ.

90,000 ಕ್ಕೂ ಹೆಚ್ಚು ಅಭಿಮಾನಿಗಳ ಮುಂದೆ, ಕೊನ್‌ಸ್ಟಾಸ್ ನಾಲ್ಕು ಬೌಂಡರಿಗಳು ಮತ್ತು ಎರಡು ಸಿಕ್ಸರ್‌ಗಳೊಂದಿಗೆ 60 ರನ್ ಗಳನ್ನು ಬಾರಿಸಿ ಮಿಂಚಿದರು.

ಉಸ್ಮಾನ್ ಖವಾಜಾ ಅವರೊಂದಿಗೆ ಸೇರಿ ಆರಂಭಿಕ ವಿಕೆಟ್‌ಗೆ 89 ರನ್‌ಗಳನ್ನು ಸೇರಿಸಿದರು.

ಇದು ಈ ಸರಣಿಯಲ್ಲಿ ಆಸ್ಟ್ರೇಲಿಯಾದ ಗರಿಷ್ಠ ಆರಂಭಿಕ ಪಾಲುದಾರಿಕೆಯಾಗಿದೆ. ರವೀಂದ್ರ ಜಡೇಜಾ ಅವರ ನೇರ ಎಸೆತದಿಂದ ಕೊನ್‌ಸ್ಟಾಸ್ ಎಲ್ಬಿಡಬ್ಲ್ಯೂ ಬಲೆಗೆ ಬಿದ್ದರು. ಇದಕ್ಕೂ ಮುನ್ನ ಅವರು ಒಲಉ ಅಂಗಳದಲ್ಲಿ ಪ್ರತಿಯೊಬ್ಬ ವ್ಯಕ್ತಿಯಿಂದ ಪ್ರಶಂಸೆಗೆ ಭಾಜನರಾದರು.

ಇಂದಿನಿಂದ ಶುರುವಾಗಿರುವ ಬಾಕ್ಸಿಂಗ್ ಡೇ ಟೆಸ್ಟ್ ಪಂದ್ಯದಲ್ಲಿ ಆಸ್ಟ್ರೇಲಿಯಾ ನಾಯಕ ಪ್ಯಾಟ್ ಕಮಿನ್ಸ್ ಟಾಸ್ ಗೆದ್ದು ಬ್ಯಾಟಿಂಗ್ ಆಯ್ಕೆ ಮಾಡಿಕೊಂಡಿದ್ದರು . ಉಸ್ಮಾನ್ ಖವಾಜಾ ಅವರೊಂದಿಗೆ ಸ್ಯಾಮ್ ಕಾನ್ಸ್ಟಾಸ್ ಬ್ಯಾಟಿಂಗ್ ಆರಂಭಿಸಿದ್ದರು.

ಭಾರತವು ಅಗ್ರ ಕ್ರಮಾಂಕದ ಶುಭಮನ್ ಗಿಲ್ ಬದಲಿಗೆ ಸ್ಪಿನ್ ಆಲ್ ರೌಂಡರ್ ವಾಷಿಂಗ್ಟನ್ ಸುಂದರ್ ಅವರನ್ನು ಆಡುವ 11ರ ಪಟ್ಟಿಯಲ್ಲಿ ಸೇರಿಸಿದೆ. ಮತ್ತೊಂದೆಡೆ, ಆಸ್ಟ್ರೇಲಿಯಾವು ಆರಂಭಿಕ ಆಟಗಾರ ಸ್ಯಾಮ್ ಕೊನ್‌ಸ್ಟಾಸ್‌ಗೆ ಚೊಚ್ಚಲ ಟೆಸ್ಟ್ ಪಂದ್ಯಕ್ಕೆ ಅವಕಾಶ ಮಾಡಿಕೊಟ್ಟಿದೆ. ಗಾಯಗೊಂಡ ಜೋಶ್ ಹ್ಯಾಜಲ್‌ವುಡ್ ಬದಲಾಗಿ ವೇಗಿ ಸ್ಕಾಟ್ ಬೋಲ್ಯಾಂಡ್ ಕಣಕ್ಕಿಳಿದಿದ್ದಾರೆ. ಭಾರತ ತಂಡದ ನಾಯಕ ರೋಹಿತ್ ಶರ್ಮಾ ಅಗ್ರ ಕ್ರಮಾಂಕದಲ್ಲಿ ಆಡಲಿದ್ದಾರೆ.

ಪ್ರಸ್ತುತ 1–1 ರಿಂದ ಎರಡೂ ತಂಡಗಳು ಸಮಬಲ ಸಾಧಿಸಿವೆ. ಎರಡೂ ತಂಡಗಳಿಗೆ ಬಾಕ್ಸಿಂಗ್ ಡೇ ಟೆಸ್ಟ್ ಮುಖ್ಯವಾಗಿದೆ. ಐಸಿಸಿ ವಿಶ್ವ ಟೆಸ್ಟ್ ಚಾಂಪಿಯನ್‌ಶಿಪ್ ಫೈನಲ್‌ಗೆ ತಲುಪಲು ಈ ಪಂದ್ಯದ ಫಲಿತಾಂಶ ಉಭಯ ತಂಡಗಳ ಭವಿಷ್ಯವನ್ನು ನಿರ್ಧರಿಸಲಿದೆ. ಸರಣಿಯಲ್ಲಿ ಮುನ್ನಡೆ ಸಾಧಿಸುವ ಉದ್ದೇಶದಿಂದಲೇ ಎರಡೂ ತಂಡಗಳು ಆಡಲಿವೆ.

ಟಾಸ್ ಬಳಿಕ ಮಾತನಾಡಿದ ಭಾರತ ತಂಡದ ನಾಯಕ ರೋಹಿತ್ ಶರ್ಮಾ ಬಾಕ್ಸಿಂಗ್ ಡೇ ಟೆಸ್ಟ್‌ನಲ್ಲಿ ಶುಭಮನ್ ಗಿಲ್ ಹೊರಗುಳಿಯಲಿದ್ದಾರೆ ಎಂದು ಖಚಿತಪಡಿಸಿದ್ದಾರೆ.

## ವೈರಲ್ ಆಗ್ತಿದೆ ಕ್ರೇಜಿ ಕ್ವೀನ್ ಹಾಡು



ಕನ್ನಡ ಚಿತ್ರರಂಗದ ಕ್ರೇಜಿ ಕ್ವೀನ್ ರಕ್ಷಿತಾ ಒಂದು ಕಾಲದಲ್ಲಿ ಕನ್ನಡದ ಜೊತೆಗೆ ತಮಿಳು ಮತ್ತು ತೆಲುಗು ಸಿನಿಮಾಗಳಲ್ಲೂ ಧೂಳೆಬ್ಬಿಸಿದ ನಟಿ.

ತಮ್ಮ ನಟನೆ, ಮುದ್ದಾದ ಮುಖ, ಸೌಂದರ್ಯ, ಗ್ಲಾಮರಸ್ ಪಾತ್ರಕ್ಕೆ ಜೀವ ತುಂಬುವ ರಕ್ಷಿತಾ, ಅಂದು ಎಲ್ಲಾ ಹುಡುಗರ ಮೋಸ್ಟ್ ಫೇವರಿಟ್ ಸ್ಟಾರ್ ಆಗಿದ್ದಂತೂ ನಿಜಾ. ಸದ್ಯ ಸಿನಿಮಾ ನಟನೆಯಿಂದ ದೂರ ಉಳಿದಿರುವ ರಕ್ಷಿತಾ, ಪ್ರೊಡಕ್ಷನ್ ಮಾತ್ರ ನೋಡಿಕೊಳ್ಳುತ್ತಿದ್ದಾರೆ. ಜೊತೆಗೆ ರಿಯಾಲಿಟಿ ಶೋಗಳಲ್ಲಿ ಜಡ್ಜ್ ಆಗಿಯೂ ಕಾಣಿಸಿಕೊಳ್ಳುತ್ತಿದ್ದಾರೆ.

ಸದ್ಯ ಸೋಶಿಯಲ್ ಮೀಡಿಯಾದಲ್ಲಿ ರಕ್ಷಿತಾ ಅವರ ಹಳೆಯ ತಮಿಳು ಹಾಡೊಂದು ವೈರಲ್ ಆಗ್ತಿದೆ. ಇದು ತಮಿಳಿನ ಧಮ್ ಸಿನಿಮಾದ ಹಾಡು. ಈ ಸಿನಿಮಾದಲ್ಲಿ ಸಿಲಂಬರಸ್ ನಾಯಕನಾಗಿ ನಟಿಸಿದ್ದರು. ಈ ಸಿನಿಮಾ ಕನ್ನಡದ ಅಪ್ಪು ಸಿನಿಮಾದ ರಿಮೇಕ್ ಆಗಿತ್ತು. ಕನ್ನಡ, ತೆಲುಗು ಮತ್ತು ತಮಿಳು ಮೂರು ಭಾಷೆಯಲ್ಲೂ ಸಹ ರಕ್ಷಿತಾ ಸಿನಿಮಾ ನಾಯಕಿಯಾಗಿ ಅಭಿನಯಿಸಿದ್ದರು. ಈ ಸಿನಿಮಾ ಮೂರು ಭಾಷೆಯಲ್ಲೂ ಸೂಪರ್ ಹಿಟ್ ಆಗಿತ್ತು. ಅಲ್ಲದೇ ಸಿನಿಮಾದ ಹಾಡುಗಳು ಸಹ ಹಿಟ್ ಆಗಿತ್ತು.



ಸದ್ಯ ವೈರಲ್ ಆಗುತ್ತಿರುವ ಚಾಣಕ್ಯ ಚಾಣಕ್ಯ ಎನ್ನುವ ಹಾಡು 2003ರಲ್ಲಿ ಸಿನಿರಸಿಕರ ಮೆಚ್ಚಿನ ಹಾಡುಗಳಲ್ಲಿ ಒಂದಾಗಿತ್ತು. ಈ ಹಾಡಿನಲ್ಲಿ ರಕ್ಷಿತಾ ತುಂಬಾನೆ ಮುದ್ದಾಗಿ ಕಾಣಿಸಿಕೊಂಡಿದ್ದಾರೆ. ಬಿಳಿ ಬಣ್ಣದ ಟ್ಯೂಬ್ ಟಾಪ್ ಹಾಗೂ ಬಿಳಿ ಶಾರ್ಟ್ಸ್ ನಲ್ಲಿ ರಕ್ಷಿತಾ ಗ್ಲಾಮರಸ್ ಆಗಿ ಕಾಣಿಸುತ್ತಿದ್ದಾರೆ.

ಈ ಹಾಡನ್ನು ಜಪಾನ್, ಚೀನಾದಲ್ಲೆಲ್ಲೋ ಶೂಟಿಂಗ್ ಮಾಡಲಾಗಿದೆ. ಇದೀಗ ವೈರಲ್ ಆಗುತ್ತಿರುವ ಹಾಡನ್ನು ನೋಡಿ ಸಿನಿರಸಿಕರು ಮೆಚ್ಚುಗೆ ಸೂಚಿಸಿದ್ದಾರೆ. 90ರ ದಶಕದ ಮೋಸ್ಟ್ ಫೇವರಿಟ್ ಹಾಡು, ನಮ್ಮ ಬೆಳಗ್ಗೆ ಆಗುತ್ತಿದ್ದಿದ್ದೇ ಈ ಹಾಡನ್ನು ಕೇಳಿ, ತುಂಬಾನೆ ಸುಂದರವಾದ ಹಾಡು. ಜೊತೆಗೆ ಸಿಂಬು ಮತ್ತು ರಕ್ಷಿತಾ ಕಾಂಬಿನೇಶನ್ ಸೂಪರ್ ಎನ್ನುತ್ತಿದ್ದಾರೆ.

## ಟೆಸ್ಟ್ ಕ್ರಿಕೆಟ್‌ನಲ್ಲಿ 'ದುಬಾರಿ' ದಾಖಲೆ



**ಮೆಲ್ಬರ್ನ್:** ಭಾರತ ಹಾಗೂ ಆಸ್ಟ್ರೇಲಿಯಾ ನಡುವಿನ ಬಾರ್ಡರ್–ಗವಾಸ್ಕರ್ ಟೆಸ್ಟ್ ಸರಣಿಯ ಬಾಕ್ಸಿಂಗ್ ಡೇ ಟೆಸ್ಟ್ ಪಂದ್ಯಕ್ಕೆ ಭರ್ಜರಿ ಚಾಲನೆ ಸಿಕ್ಕಿದ್ದು ಮೊದಲ ದಿನವೇ ಆತಿಥೇಯ ಆಸ್ಟ್ರೇಲಿಯಾ ಪಂದ್ಯದ ಮೇಲೆ ಬಿಗಿ ಹಿಡಿತ ಸಾಧಿಸುವತ್ತ ದಿಟ್ಟ ಹೆಜ್ಜೆಯಿಟ್ಟಿದೆ.

ಇನ್ನು ಈ ಟೆಸ್ಟ್ ಮೂಲಕ ಆಸ್ಟ್ರೇಲಿಯಾ ತಂಡಕ್ಕೆ ಪಾದಾರ್ಪಣೆ ಮಾಡಿದ ಸ್ಯಾಮ್ ಕೊನ್‌ಸ್ಟಾಸ್ ಚೊಚ್ಚಲ ಪಂದ್ಯದಲ್ಲೇ ಮೈಚಳಿ ಬಿಟ್ಟು ಬ್ಯಾಟ್ ಬೀಸುವ ಮೂಲಕ ಕ್ರಿಕೆಟ್ ಅಭಿಮಾನಿಗಳ ಗಮನ ಸೆಳೆಯುವಲ್ಲಿ ಯಶಸ್ವಿಯಾಗಿದ್ದಾರೆ.

ಈ ಬಾರಿಯ ಬಾರ್ಡರ್–ಗವಾಸ್ಕರ್ ಟೆಸ್ಟ್ ಸರಣಿಯಲ್ಲಿ ಟೀಂ ಇಂಡಿಯಾದ ಯಶಸ್ವಿ ಬೌಲರ್ ಆಗಿ ಹೊರಹೊಮ್ಮಿರುವ ಜಸ್ಪ್ರೀತ್ ಬುಮ್ರಾ ಅವರನ್ನು ಎದುರಿಸಲು ಆಸೀಸ್ ಬ್ಯಾಟರ್‌ಗಳು ಪರದಾಡುತ್ತಿದ್ದರು. ಆದರೆ 19 ವರ್ಷದ ಸ್ಯಾಮ್ ಕೊನ್‌ಸ್ಟಾಸ್, ಬುಮ್ರಾ ಅವರ ಬೌಲಿಂಗ್‌ನ್ನು ದಿಟ್ಟವಾಗಿ ಎದುರಿಸುವ ಮೂಲಕ ಮಿಂಚಿದ್ದಾರೆ.

ಆಸ್ಟ್ರೇಲಿಯಾ ಪರ ಟೆಸ್ಟ್ ಕ್ರಿಕೆಟ್‌ನಲ್ಲಿ ಆರಂಭಿಕನಾಗಿ ಕಣಕ್ಕಿಳಿದ ಅತಿ ಕಿರಿಯ ಆರಂಭಿಕ ಬ್ಯಾಟರ್ ಎನಿಸಿಕೊಂಡಿರುವ ಸ್ಯಾಮ್ ಕೊನ್‌ಸ್ಟಾಸ್, ಬುಮ್ರಾ ಒಂದೇ ಓವರ್‌ನಲ್ಲಿ ಎರಡು ಬೌಂಡರಿ ಹಾಗೂ ಒಂದು ಸಿಕ್ಸರ್ ಸಿಡಿಸಿ ಅಬ್ಬರಿಸಿದ್ದಾರೆ. ಇದರೊಂದಿಗೆ ಬುಮ್ರಾ ಟೆಸ್ಟ್ ಕ್ರಿಕೆಟ್‌ನಲ್ಲಿ ಬರೋಬ್ಬರಿ 4,483 ಎಸೆತಗಳ ಬಳಿಕ ಮೊದಲ ಬಾರಿಗೆ ಸಿಕ್ಸರ್ ಚಚ್ಚಿಸಿಕೊಂಡಿದ್ದಾರೆ.

ಹೌದು, ಜಸ್ಪ್ರೀತ್ ಬುಮ್ರಾ ಮೂರು ವರ್ಷಗಳ ಹಿಂದೆ ಅಂದರೆ 2021ರಲ್ಲಿ ಸಿಡ್ನಿಯಲ್ಲಿ ನಡೆದ ಟೆಸ್ಟ್ ಪಂದ್ಯದಲ್ಲಿ ಕ್ಯಾಮರೋನ್ ಗ್ರೀನ್ ಸಿಕ್ಸರ್ ಸಿಡಿಸಿದ್ದರು. ಇದಾದ ಬಳಿಕ ಟೆಸ್ಟ್ ಕ್ರಿಕೆಟ್‌ನಲ್ಲಿ ಇಲ್ಲಿಯವರೆಗೂ ಯಾವೊಬ್ಬ ಬ್ಯಾಟರ್ ಸಹ ಬುಮ್ರಾಗೆ ಸಿಕ್ಸರ್ ಸಿಡಿಸಲು ಯಶಸ್ವಿಯಾಗಿರಲಿಲ್ಲ. ಆದರೆ ಸ್ಯಾಮ್ ಕೊನ್‌ಸ್ಟಾಸ್ ಟೆಸ್ಟ್ ಕ್ರಿಕೆಟ್‌ನಲ್ಲಿ ತಾವೆದುರಿಸಿದ 23ನೇ ಎಸೆತದಲ್ಲೇ ರಿವರ್ಸ್ ಯಾರ್ಂಪ್ ಮೂಲಕ ಸಿಕ್ಸರ್ ಸಿಡಿಸಿ ಮಿಂಚಿದ್ದಾರೆ.ಇನ್ನು ಟೀಂ ಇಂಡಿಯಾ ವೇಗಿ ಜಸ್ಪ್ರೀತ್ ಬುಮ್ರಾ, ಬಾಕ್ಸಿಂಗ್ ಡೇ ಟೆಸ್ಟ್ ಪಂದ್ಯದ ಮೊದಲ ಇನ್ನಿಂಗ್ಸ್‌ನ 11ನೇ ಓವರ್‌ನಲ್ಲಿ ಬರೋಬ್ಬರಿ 18 ರನ್ ಚಚ್ಚಿಸಿಕೊಂಡರು. ಇದು ಟೆಸ್ಟ್ ಕ್ರಿಕೆಟ್‌ನಲ್ಲಿ ಜಸ್ಪ್ರೀತ್ ಬುಮ್ರಾ ಬಿಟ್ಟುಕೊಟ್ಟ ಗರಿಷ್ಠ ರನ್ ಎನಿಸಿಕೊಂಡಿತು. ಬುಮ್ರಾ ಎಸೆದ ಈ ಓವರ್‌ನಲ್ಲಿ ಸ್ಯಾಮ್ ಕೊನ್‌ಸ್ಟಾಸ್ ಎರಡು ಬೌಂಡರಿ ಹಾಗೂ ಒಂದು ಸಿಕ್ಸರ್ ಚಚ್ಚಿದರು.

ಆಸೀಸ್ ಪರ ಚೊಚ್ಚಲ ಟೆಸ್ಟ್ ಪಂದ್ಯವನ್ನಾಡುತ್ತಿರುವ 19 ವರ್ಷದ ಸ್ಯಾಮ್ ಕೊನ್‌ಸ್ಟಾಸ್ ತಾವಾಡಿದ ಮೊದಲ ಇನ್ನಿಂಗ್ಸ್‌ನಲ್ಲೇ ಆಕರ್ಷಕ ಅರ್ಧಶತಕ ಸಿಡಿಸುವ ಮೂಲಕ ಪಾದಾರ್ಪಣೆ ಪಂದ್ಯವನ್ನು ಸ್ಮರಣೀಯವಾಗಿಸಿಕೊಳ್ಳುವಲ್ಲಿ ಯಶಸ್ವಿಯಾಗಿದ್ದಾರೆ. ಸ್ಯಾಮ್ ಕೊನ್‌ಸ್ಟಾಸ್ ಕೇವಲ 52 ಎಸೆತಗಳನ್ನು ಎದುರಿಸಿ ಚೊಚ್ಚಲ ಟೆಸ್ಟ್ ಅರ್ಧಶತಕವನ್ನು ಪೂರೈಸಿದರು. ಅಂತಿಮವಾಗಿ ಸ್ಯಾಮ್ ಕೊನ್‌ಸ್ಟಾಸ್ 65 ಎಸೆತಗಳನ್ನು ಎದುರಿಸಿ 6 ಬೌಂಡರಿ ಹಾಗೂ 2 ಸಿಕ್ಸರ್ ಸಹಿತ 60 ರನ್ ಬಾರಿಸಿ ರವೀಂದ್ರ ಜಡೇಜಾ ಬೌಲಿಂಗ್‌ನಲ್ಲಿ ಎಲ್‌ಬಿ ಬಲಗೆ ಬಿದ್ದರು.

## ಪ್ರಶಸ್ತಿ ಸ್ಫೂರ್ತಿ ನೀಡುತ್ತದೆ, ಅದೇ ನನ್ನ ಗುರಿಯಲ್ಲ



**ನವದೆಹಲಿ:** ಪ್ರತೀ ವರ್ಷ ಭಾರತ ಸರ್ಕಾರ ಕ್ರೀಡಾಪಟುಗಳ ಸಾಧನೆಗಳನ್ನು ಗುರುತಿಸಿ ಪ್ರತಿಷ್ಠಿತ 'ಮೇಜರ್ ಧ್ಯಾನ್ ಚಂದ್ ಖೇಲ್ ರತ್ನ' ಪ್ರಶಸ್ತಿ ನೀಡಿ ಗೌರವಿಸುತ್ತದೆ. ಈ ವರ್ಷವೂ ಕ್ರೀಡಾ ಸಾಧಕರ ಕೆಲವು ಹೆಸರುಗಳನ್ನು ಶಿಫಾರಸು ಮಾಡಿದ್ದು, ಬಹಿರಂಗವಾಗಿದೆ. ಆದರೆ ಬಿಡುಗಡೆಯಾದ ಪಟ್ಟಿಯಲ್ಲಿ ಭಾರತದ ಶೂಟಿಂಗ್ ತಾರೆ ಮನು ಭಾಕರ್ ಹೆಸರಿಲ್ಲ. ಈ ವಿಚಾರ ಭಾರೀ ಚರ್ಚೆಗೆ ಗ್ರಾಸವಾಗಿತ್ತು. ಇದರ ಬೆನ್ನಲ್ಲೇ ಕ್ರೀಡಾ ಸಚಿವಾಲಯದ ಅಧಿಕಾರಿಗಳು, ಮನು ಅವರು ಖೇಲ್ ರತ್ನ ಪ್ರಶಸ್ತಿಗೆ ಅರ್ಜಿ ಸಲ್ಲಿಸಿಲ್ಲ ಎಂದು ತಿಳಿಸಿದ್ದರು. ಆದರೆ ಪ್ರಶಸ್ತಿಗೆ ಅರ್ಜಿ ಸಲ್ಲಿಸಿದ್ದರೂ ಸಮಿತಿಯಿಂದ ಯಾವುದೇ ಪ್ರತಿಕ್ರಿಯೆ ಬಂದಿಲ್ಲ ಎಂದು ಮನು ಅವರ ತಂದೆ ಹೇಳಿದ್ದರು. ಇದರಿಂದಾಗಿ ಈ ವಿಚಾರ ಮತ್ತಷ್ಟು ವಿವಾದವಾಯಿತು. ಇದೀಗ ಸ್ವತಃ ಮನು ಭಾಕರ್ ಸಾಮಾಜಿಕ ಮಾಧ್ಯಮಗಳಲ್ಲಿ ಪೋಸ್ಟ್ ಹಂಚಿಕೊಂಡಿದ್ದಾರೆ. "ಕ್ರೀಡಾಪಟುವಾಗಿ ದೇಶಕ್ಕಾಗಿ ಆಡುವುದೊಂದೇ ನನ್ನ ಕರ್ತವ್ಯ. ಮನ್ನಣೆ ಮತ್ತು ಪ್ರಶಸ್ತಿಗಳು ನನಗೆ ಸ್ಫೂರ್ತಿ ನೀಡುತ್ತವೆ. ಆದರೆ, ಇವೇ ನನ್ನ ಗುರಿಗಳಲ್ಲ. ನಾಮನಿರ್ದೇಶನ ಪ್ರಕ್ರಿಯೆಯಲ್ಲಿ ತಪ್ಪು ನಡೆದಿರಬಹುದು. ಅದು ಪರಿಹಾರವಾಗುತ್ತದೆ ಎಂದು ನಾನು ಭಾವಿಸುತ್ತೇನೆ.

ಪ್ರಶಸ್ತಿಗಳು ಏನೇ ಇರಲಿ, ದೇಶಕ್ಕಾಗಿ ಇನ್ನಷ್ಟು ಪದಕಗಳನ್ನು ಗೆಲ್ಲಲು ಬಯಸುತ್ತೇನೆ" ಎಂದು ಮನು ಭಾಕರ್ ಹೇಳಿದ್ದಾರೆ.ಸುಪ್ರೀಂ ಕೋರ್ಟ್ ನಿವೃತ್ತ ನ್ಯಾಯಮೂರ್ತಿ ವಿ.ರಾಮ ಸುಬ್ರಮಣಿಯನ್ ನೇತೃತ್ವದಲ್ಲಿ 12 ಸದಸ್ಯರನ್ನೊಳಗೊಂಡ 'ಧ್ಯಾನಚಂದ್ ಖೇಲ್ ರತ್ನ ಪ್ರಶಸ್ತಿ' ಸಮಿತಿ ರಚಿಸಲಾಗಿತ್ತು. ಈ ಪ್ರಶಸ್ತಿಗೆ ಅರ್ಜಿ ಸಲ್ಲಿಸಲು ಕ್ರೀಡಾಪಟುಗಳಿಗೆ ಸಚಿವಾಲಯ ಅವಕಾಶ ಒದಗಿಸಿತ್ತು. ಆದರೆ ಮನು ಭಾಕರ್ ಹೆಸರು ಈ ಪಟ್ಟಿಯಲ್ಲಿ ಕಾಣಿಸಿದೇ ಇದ್ದ ಕಾರಣ ವಿವಾದವಾಗಿತ್ತು. ಕೇಂದ್ರ ಕ್ರೀಡಾ ಸಚಿವಾಲಯದ ಉನ್ನತ ಮೂಲಗಳು ಪ್ರಶಸ್ತಿಗಾಗಿ ಅಂತಿಮ ಪಟ್ಟಿಯನ್ನು ಇನ್ನೂ ಸಿದ್ಧಪಡಿಸಿಲ್ಲ. ಅಂತಿಮ ಪಟ್ಟಿಯಲ್ಲಿ ಮನು ಹೆಸರಿರಲಿದೆ ಎಂದು ಕ್ರೀಡಾ ಸಚಿವಾಲಯದ ಉನ್ನತ ಮೂಲಗಳು ತಿಳಿಸಿರುವುದಾಗಿ ವರದಿಯಾಗಿದೆ. ಈ ವರ್ಷ ನಡೆದ ಒಲಿಂಪಿಕ್ಸ್ ಕ್ರೀಡಾಕೂಟದಲ್ಲಿ 10 ಮೀಟರ್ ಏರ್ ಪಿಸ್ತೂಲ್ ವೈಯಕ್ತಿಕ ಮತ್ತು ಮಿಶ್ರ ತಂಡ ಸ್ಪರ್ಧೆಯಲ್ಲಿ ಮನು ಬಾಕರ್ 2 ಕಂಚಿನ ಪದಕ ಗೆದ್ದಿದ್ದರು. ಈ ಮೂಲಕ 22ರ ಹರೆಯದ ಹರಿಯಾಣದ ಅಥ್ಲೀಟ್, ಸ್ವಾತಂತ್ರ್ಯಾ ನಂತರ ಒಂದೇ ಒಲಿಂಪಿಕ್ ಆವೃತ್ತಿಯಲ್ಲಿ ಎರಡು ಪದಕ ಗೆದ್ದ ಭಾರತದ ಮೊದಲ ಅಥ್ಲೀಟ್ ಎಂಬ ದಾಖಲೆ ಬರೆದಿದ್ದರು.

ಪ್ರಕಾಶಕ– ಸಂಪಾದಕ ಹಾಗೂ ಮಾಲೀಕ ಲಕ್ಷ್ಮೀಪ್ರಸನ್ನ ಆರ್.ಹೆಚ್. ಅವರಿಂದ #1652/6, 20ನೇ ತಿರುವು, 8ನೇ ಮುಖ್ಯರಸ್ತೆ, ಸಿ ಬ್ಲಾಕ್, ಸಹಕಾರ ನಗರ, ಬೆಂಗಳೂರು–560092 ಇಲ್ಲಿ ಪ್ರಕಟಗೊಂಡು, ಮುದ್ರಣ: ಪಿ.ಎನ್.ಪ್ರಿಂಟರ್ಸ್, ನರಸಿಪಾಳ್ಯ, ಅರಿಶಿಣಕುಂಟೆ(ಪೋ.), ನೆಲಮಂಗಲ, ಬೆಂಗಳೂರು–562123 ಇಲ್ಲಿ ಮುದ್ರಿಸಲ್ಪಟ್ಟಿದೆ. RNI.KAR/KAN/2009/31934, ದೂರವಾಣಿ: 9448074878
Edited, Published and Owned by Laxmiprasanna R.H, #1652/6, 20th Cross, 8th Main, C Block, SahakarNagar, Bangalore-560092. Printed by P N Printers, Narasipalya, Arishinakunte(Post), Kasaba(hobali), Nelamangala, Bengaluru-562123
RNI.KAR/KAN/2009/31934.VOLUME-16/ISSUE-34 Email-mussanje2010@gmail.com, Phone: 9448074878